ರಶ್ಮಿಕಾ ಮಂದಣ್ಣ ಅವರ ತಾಯಿ ಸುಮನ್ ಮಂದಣ್ಣ ಅವರದ್ದು ಎನ್ನಲಾಗುತ್ತಿರುವ ಆಡಿಯೋ ಕ್ಲಿಪ್ ವೊಂದು ಇದೀಗ ಸಾಮಾಜಿಕ ಮಾಧ್ಯಮದಲ್ಲಿ ಭಾರಿ ವೈರಲ್ ಆಗಿದೆ.ವೈರಲ್ ಆಗುತ್ತಿರುವ ಆಡಿಯೋದಲ್ಲಿ ರಕ್ಷಿತ್ ಶೆಟ್ಟಿ ಹಾಗೂ ರಶ್ಮಿಕಾ ಮಂದಣ್ಣ ಅವರ ನಿಶ್ಚಿತಾರ್ಥ ಮುರಿದು ಬಿದ್ದಿದ್ದು ಯಾಕೆ ಅನ್ನೋದಕ್ಕೆ ಕಾರಣಗಳನ್ನು ಕೊಟ್ಟಿದ್ದಾರೆ.



BHARATHA SARATHI
KANNADA DAILY NEWS PAPER
CALL 9740160669
# ಭಾರತ ಸಾರಥಿ
RNI KARKAN2011/44806
ಸದಾ ನಿಮ್ಮೊಂದಿಗೆ ಕನ್ನಡ ದಿನಪತ್ರಿಕೆ



ಸಂಪಾದಕ
ಗಂಡಸಿ ಸದಾನಂದಸ್ವಾಮಿ



# ಯುದ್ಧ ನಿಲ್ಲುತ್ತೆ: ಟ್ರಂಪ್

ವಾಷಿಂಗ್ಟನ್: ಇರಾನ್‌ನೊಂದಿಗಿನ ಯುದ್ಧವು ಶೀಘ್ರದಲ್ಲೇ ಕೊನೆಗೊಳ್ಳಬಹುದು ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಸುಳಿವು ನೀಡಿದ್ದಾರೆ. ಅಮೆರಿಕ ಮತ್ತು ಇಸ್ರೇಲ್ ಪಡೆಗಳು ಈಗಾಗಲೇ ದೇಶದಲ್ಲಿ ಲಭ್ಯವಿರುವ ಹೆಚ್ಚಿನ ಟಾರ್ಗೆಟ್‌ಗಳನ್ನು ನಾಶಪಡಿಸಿವೆ. "ಇರಾನ್‌ನಲ್ಲಿ ಪ್ರಾಯೋಗಿಕವಾಗಿ ಗುರಿಯಿಡಲು ಇನ್ನೇನೂ ಉಳಿದಿಲ್ಲ" ಎಂದು ಟ್ರಂಪ್ ಹೇಳಿದ್ದಾರೆ. ಮಿಲಿಟರಿ ಕಾರ್ಯಾಚರಣೆಯು ಇರಾನಿಗೆ ಈಗಾಗಲೇ ವ್ಯಾಪಕ ಹಾನಿಯನ್ನುಂಟುಮಾಡಿದೆ ಎಂದು ಟ್ರಂಪ್ ಹೇಳಿದ್ದಾರೆ. ಇರಾನ್‌ನವರ ಕ್ಷಿಪಣಿಗಳು ಚದುರಿಹೋಗಿವೆ. ಅವರ ಡ್ರೋನ್‌ಗಳನ್ನು ಎಲ್ಲೆಡೆ ಸ್ಫೋಟಿಸಲಾಗುತ್ತಿದೆ, ಅವುಗಳ ಡ್ರೋನ್‌ಗಳ ತಯಾರಿಕೆಯೂ ನಿಂತಿದೆ. ಟೆಹ್ರಾನ್ ಈಗ ನೌಕಾಪಡೆ, ವಾಯುಪಡೆ ಮತ್ತು ಮಿಲಿಟರಿ ಮೇಲೆ ಯಾವುದೇ ಹಿಡಿತವಾಗಲಿ, ಸಾಮರ್ಥ್ಯವನ್ನಾಗಲಿ ಹೊಂದಿಲ್ಲ. ಅವರು ಏನಾದರೂ ಕೆಟ್ಟದ್ದನ್ನು ಮಾಡಿದರೆ ಅದು ಇರಾನ್‌ನ ಅಂತ್ಯವಾಗಲಿದೆ. ನೀವು ಆ ಹೆಸರನ್ನು ಮತ್ತೆ ಎಂದಿಗೂ ಕೇಳುವುದಿಲ್ಲ ಎಂದು ಟ್ರಂಪ್ ಹೇಳಿದ್ದಾರೆ.

"ಯುದ್ಧವು ಅದ್ಭುತವಾಗಿ ನಡೆಯುತ್ತಿದೆ. ನಾವು ವೇಳಾಪಟ್ಟಿಗಿಂತ ಬಹಳ ಮುಂದಿದ್ದೇವೆ. ಮೊದಲ 6 ವಾರಗಳ ಅವಧಿಯಲ್ಲಿಯೂ ಸಹ ನಾವು ಭಾವಿಸಿದ್ದಕ್ಕಿಂತ ಹೆಚ್ಚಿನ ಹಾನಿಯನ್ನು ಇರಾನ್‌ಗೆ ಮಾಡಿದ್ದೇವೆ" ಎಂದು ಟ್ರಂಪ್ ಹೇಳಿದ್ದಾರೆ.






ಯುಎಇ ಬಂದರಿನಿಂದ ಹೊರಟ ಸ್ವಲ್ಪ ಸಮಯದಲ್ಲೇ ಥಾಯ್ ಧ್ವಜ ಹೊತ್ತ ಸರಕು ಹಡಗಿನ ಮೇಲೆ ಹಾರ್ಮುಜ್ ಜಲಸಂಧಿಯ ಬಳಿ ದಾಳಿ ನಡೆದಿದೆ. ಸರಕು ಹಡಗಿನ ಮೇಲೆ ಬುಧವಾರ ದಾಳಿ ನಡೆದಿದೆ ಎಂದು ರಾಯಲ್ ಥಾಯ್ ನೌಕಾಪಡೆ ತಿಳಿಸಿದೆ. ಇಪ್ಪತ್ತು ನಾವಿಕರನ್ನು ರಕ್ಷಿಸಲಾಗಿದೆ. ಆದರೆ, ಮೂವರು ಇನ್ನೂ ಪತ್ತೆಯಾಗಿಲ್ಲ. ಥಾಯ್ ಕಂಪನಿ ಪ್ರೆಷಿಯಸ್ ಶಿಪ್ಪಿಂಗ್ ಪಿಸಿಎಲ್ ಒಡೆತನದ ಬೃಹತ್ ವಾಹಕ ನೌಕೆ ಮಯೂರಿ ನರೀ, ಯುಎಇಯ ಖಲೀಫಾ ಬಂದರಿನಿಂದ ಹೊರಟು ಭಾರತದ ಕಾಂಡ್ಲಾ ಬಂದರಿಗೆ ತೆರಳುತ್ತಿತ್ತು. ಹಡಗು ಹಾರ್ಮುಜ್ ಜಲಸಂಧಿಯ ಮೂಲಕ ಸಾಗುವಾಗ ದಾಳಿಗೆ ಒಳಗಾಯಿತು.

## ಕಾಂಗ್ರೆಸ್ ಮೀಟಿಂಗ್‌ನಲ್ಲಿ ಫೈಟಿಂಗ್..?

ಬೆಂಗಳೂರು: ನಗರದ ಖಾಸಗಿ ಹೋಟೆಲ್‌ನಲ್ಲಿ ನಡೆದ ಕಾಂಗ್ರೆಸ್ ಶಾಸಕಾಂಗ ಸಭೆಯಲ್ಲಿ ಶಾಸಕರು ಪರಸ್ಪರ ಗಲಾಟೆ ಮಾಡಿಕೊಂಡಿದ್ದಾರೆ. ಕೈಕೈ ಮಿಲಾಯಿಸುವ ಹಂತಕ್ಕೆ ಜಗಳ ಹೋದ ಘಟನೆ ನಡೆದಿದೆ. ಶಾಸಕ ನಾರಾಯಣಸ್ವಾಮಿ ಮತ್ತು ರಾಜೇಗೌಡ ನಡುವೆ ವಾಕ್ಸಮರ ನಡೆದಿದೆ.



ಸಿಎಲ್‌ಪಿ ಸಭೆಯಲ್ಲಿ ಬಂಗಾರ ಪೇಟೆ ಶಾಸಕ ನಾರಾಯಣಸ್ವಾಮಿ ಹಾಗೂ ಶೃಂಗೇರಿ ಶಾಸಕ ರಾಜೇಗೌಡ ನಡುವೆ ಮಾತಿನ ಚಕಮಕಿ ನಡೆದಿದೆ. ಕೋಪದಲ್ಲಿ ಶಾಸಕಾಂಗ ಪಕ್ಷದ ಸಭೆಯಿಂದಲೇ ಶಾಸಕ ನಾರಾಯಣಸ್ವಾಮಿ ಹೊರನಡೆದರು. 'ಕಂದಾಯ ಇಲಾಖೆಯ ಹಿರಿಯ ಅಧಿಕಾರಿ ನನಗೆ ಉದ್ದೇಶ ಪೂರ್ವಕವಾಗಿ ಟಾರ್ಚರ್ ಮಾಡುತ್ತಿದ್ದಾರೆ. 30–40 ನೋಟಿಸ್ ನೀಡಿದ್ದಾರೆ. ಅಧಿಕಾರಿಯೇ ಪವರ್‌ಫುಲ್' ಎಂದು ನಾರಾಯಣಸ್ವಾಮಿ ಕಿಡಿಕಾರಿದರು. ಶಾಸಕಾಂಗ ಪಕ್ಷದ ಸಭೆಯಲ್ಲಿ ಕಂದಾಯ ಸಚಿವ ಕೃಷ್ಣ ಬೈರೇಗೌಡರ ವಿರುದ್ಧ ಪರೋಕ್ಷವಾಗಿ ಅಸಮಾಧಾನ ವ್ಯಕ್ತಪಡಿಸಿದರು.

ಆಗ ಆ ಅಧಿಕಾರಿ ಒಳ್ಳೆಯವರು ಎಂದ ಶೃಂಗೇರಿ ಶಾಸಕ ರಾಜೇಗೌಡ ಪ್ರತಿಕ್ರಿಯಿಸಿದರು. ಇದಕ್ಕೆ ಕೋಪಗೊಂಡ ನಾರಾಯಣಸ್ವಾಮಿ, 'ನೋಟಿಸ್ ಕೊಟ್ಟಿದ್ದು ನನಗೆ. ನಿಮ್ಮನ್ನು ಯಾರು ಕೇಳಿದ್ದು? ಬಾಯಿ ಮುಚ್ಚಿಕೊಂಡು ಕುಳಿತುಕೊಳ್ಳಿ' ಎಂದು ರಾಜೇಗೌಡ ವಿರುದ್ಧ ಗರಂ ಆದರು. ಸಿಟ್ಟಿನಿಂದ ಶಾಸಕಾಂಗ ಪಕ್ಷದ ಸಭೆಯಿಂದಲೇ ಹೊರನಡೆದರು.

ಒಳ್ಳೆ ಬಜೆಟ್ ಕೊಟ್ಟಿದೀರ. ಒಳ್ಳೆ ಬಜೆಟ್ ಕೊಟ್ಟರೂ ನನ್ನ ಕ್ಷೇತ್ರಕ್ಕೆ ಏನೂ ಕೊಟ್ಟಿಲ್ಲ, ಇರಲಿ ಬಿಡಿ ಎಂದು ಶಾಸಕ ಬೇಳೂರು ಗೋಪಾಲಕೃಷ್ಣ ಸಿಎಲ್‌ಪಿಯಲ್ಲಿ ಸಿಎಂ ಕಾಲೆಳೆದರು. ಎಲ್ಲರಿಗೂ, ಎಲ್ಲಾ ಕ್ಷೇತ್ರಕ್ಕೂ ಕೊಟ್ಟಿದ್ದೇನೆ ಎಂದು ಸಿಎಂ ಸಮಜಾಯಿಷಿ ನೀಡಿದರು.

## ಮುಸ್ಲಿಂ ವ್ಯಕ್ತಿಯನ್ನು ಮದುವೆಯಾದ ಕುಂಭಮೇಳದ ಬೆಡಗಿ..!

ತಿರುವನಂತಪುರಂ: ಪ್ರಿಯಕರ ಫರ್ಮಾನ್ ಖಾನ್ ಜೊತೆ ಕುಂಭಮೇಳದ ವೈರಲ್ ತಾರೆ ಮೊನಾಲಿಸಾ ಬೋಂಸ್ಲೆ ಮದುವೆಯಾಗಿದ್ದಾರೆ.



ಪ್ರೀತಿಗೆ ಪೋಷಕರ ಅಡ್ಡಿ ಹಿನ್ನೆಲೆ ಕೇರಳದ ಪೂವಾರ್‌ನ ಅರುಮಾನೂರ್ ನೈನಾರ್ ದೇಗುಲದಲ್ಲಿ ಇಂದು ಸಂಜೆ 5:30ರ ಹೊತ್ತಿಗೆ ಇಬ್ಬರು ವಿವಾಹವಾಗಿದ್ದಾರೆ. ಕೇರಳದ ಸಚಿವ ವಿ.ಶಿವನ್ ಕುಟ್ಟಿ, ಸಿಪಿಎಂ ರಾಜ್ಯ ಕಾರ್ಯದರ್ಶಿ ಎಂ.ವಿ.ಗೋವಿಂದನ್ ಭಾಗಿಯಾಗಿದ್ದರು.

ಮಹಾರಾಷ್ಟ್ರದ ಫರ್ಮಾನ್ ಖಾನ್ ನಟ ಹಾಗೂ ಮಾಡೆಲ್. ಮಧ್ಯಪ್ರದೇಶದ ಮೊನಾಲಿಸಾಗೆ ಒಂದೂವರೆ ವರ್ಷದ ಹಿಂದೆ ಫೇಸ್‌ಬುಕ್‌ನಲ್ಲಿ ಪರಿಚಯವಾಗಿದ್ದ. ಪರಿಚಯ ದಿನಕಳೆದಂತೆ ಪ್ರೀತಿಗೆ ತಿರುಗಿತು. ಪೂವಾರ್‌ನಲ್ಲಿ ಈಗ ಮೊನಾಲಿಸಾ ಅಭಿನಯದ ಚಿತ್ರದ ಶೂಟಿಂಗ್ ನಡೆಯುತ್ತಿದೆ.

ಶೂಟಿಂಗ್ ಸ್ಪಾಟ್‌ನಿಂದಲೇ ತಂಬಾನೂರು ಠಾಣೆಗೆ ಬಂದು ತನ್ನ ತಂದೆ ವಿರುದ್ಧ ಮೊನಾಲಿಸಾ ದೂರು ನೀಡಿದ್ದಳು.

ಸಂಬಂಧಿ ಜೊತೆ ಮದುವೆ ಮಾಡಿಕೊಳ್ಳುವಂತೆ ತಂದೆ ಒತ್ತಾಯ ಹೇರಿದ್ದರು. ಇದಕ್ಕೆ ಮೊನಾಲಿಸಾ ನಿರಾಕರಿಸಿದ್ದಳು. ಪ್ರಿಯಕರನ ಜೊತೆ ಠಾಣೆಗೆ ಬಂದು ದೂರು ನೀಡಿದ್ದಳು. ದೂರಿನ ಹಿನ್ನೆಲೆಯಲ್ಲಿ ಮೊನಾಲಿಸಾ ತಂದೆ ಜೈಸಿಂಗ್ ಭೋಂಸ್ಲೆಯನ್ನು ತಂಬಾನೂರು ಠಾಣೆಗೆ ಪೊಲೀಸರು ಕರೆಸಿದ್ದರು.

ಯಾರ ಜೊತೆ ಜೀವನ ಮಾಡಬೇಕು ಅನ್ನೋದನ್ನು ನಿರ್ಧರಿಸುವ ಹಕ್ಕು ಮೊನಾಲಿಸಾಗಿದೆ ಎಂದು ತಂದೆಗೆ ಪೊಲೀಸರು ಮನವರಿಕೆ ಮಾಡಿದರು. ಬಳಿಕ ಪ್ರಿಯಕರನ ಜೊತೆ ಹೋಗಲು ಮೊನಾಲಿಸಾಗೆ ಅನುಮತಿ ಕೊಟ್ಟರು. ಈ ಹಿನ್ನೆಲೆಯಲ್ಲಿ ಸಂಜೆ ದೇವಸ್ಥಾನದಲ್ಲಿ ಮದುವೆಯಾಗಿದೆ.

## ಬೆಂಗಳೂರಿನಲ್ಲೇ ಐಪಿಎಲ್‌ಗೆ ಚಾಲನೆ

ಬೆಂಗಳೂರು: ಭಾರತೀಯ ಕ್ರಿಕೆಟ್ ನಿಯಂತ್ರಣ ಮಂಡಳಿ(ಬಿಸಿಸಿಐ) ಬುಧವಾರ ಇಂಡಿಯನ್ ಪ್ರೀಮಿಯರ್ ಲೀಗ್ 2026ರ 19 ಆವೃತ್ತಿಯ ವೇಳಾಪಟ್ಟಿಯನ್ನು ಪ್ರಕಟಿಸಿದ್ದು, ಬೆಂಗಳೂರಿನ ಚಿನ್ನಸ್ವಾಮಿ ಸ್ಟೇಡಿಯಂನಲ್ಲಿ ಉದ್ಘಾಟನಾ ಪಂದ್ಯ ನಡೆಯಲಿದೆ.

ಬಿಸಿಸಿಐ, ಐಪಿಎಲ್‌ನ 19ನೇ ಆವೃತ್ತಿಯ ಮೊದಲ ಹಂತದ 20 ಪಂದ್ಯಗಳ ವೇಳಾಪಟ್ಟಿಯನ್ನು ಇಂದು ಬಿಡುಗಡೆ ಮಾಡಿದ್ದು, ಹಾಲಿ ಚಾಂಪಿಯನ್ ರಾಯಲ್ ಚಾಲೆಂಜರ್ಸ್ ಬೆಂಗಳೂರು, ಸನ್‌ರೈಸರ್ಸ್ ಹೈದರಾಬಾದ್ ವಿರುದ್ಧ ಮೊದಲ ಪಂದ್ಯ ಆಡಲಿದೆ. ಮರುದಿನ ಮುಂಬೈನಲ್ಲಿ ಮುಂಬೈ ಇಂಡಿಯನ್ಸ್ ಮತ್ತು ಕೋಲ್ಕತ್ತಾ ನೈಟ್ ರೈಡರ್ಸ್ ತಂಡಗಳು ಮುಖಾಮುಖಿಯಾಗಲಿವೆ. ಮೊದಲ ಹಂತದ ಪಂದ್ಯಗಳು ಮಾರ್ಚ್ 28ರಿಂದ ಏಪ್ರಿಲ್ 12ರವರೆಗೆ ನಡೆಯಲಿವೆ.

ಕೇಂದ್ರ ಚುನಾವಣಾ ಆಯೋಗವು ಐದು ರಾಜ್ಯಗಳ ವಿಧಾನಸಭೆ ಚುನಾವಣೆಯ ದಿನಾಂಕವನ್ನು ಪ್ರಕಟಿಸಿದ ನಂತರ ಪೂರ್ಣ ವೇಳಾಪಟ್ಟಿಯನ್ನು ಬಿಡುಗಡೆ ಮಾಡಲಾಗುತ್ತದೆ.

ಮುಂದಿನ ಕೆಲವು ತಿಂಗಳುಗಳಲ್ಲಿ ಅಸ್ಸಾಂ, ಪಶ್ಚಿಮ ಬಂಗಾಳ, ತಮಿಳುನಾಡು ಮತ್ತು ಕೇರಳ ರಾಜ್ಯಗಳ ವಿಧಾನಸಭಾ ಚುನಾವಣೆ ನಡೆಯಲಿರುವ ಕಾರಣ, ಐಪಿಎಲ್ ಪಂದ್ಯಾವಳಿಯ ವೇಳಾಪಟ್ಟಿಯನ್ನು ಎರಡು ಹಂತಗಳಲ್ಲಿ ಪ್ರಕಟಿಸಲಾಗುವುದು ಎದಿದ್ದರು.




ಕೋಲಾರ ನಗರ ದೇವತೆ ಶ್ರೀ ಕೋಲಾರಮ್ಮ ದೇವಿಯ ಬ್ರಹ್ಮರಥೋತ್ಸವವು ಬುಧವಾರ ಸಾವಿರಾರು ಭಕ್ತರ ಸಮ್ಮುಖದಲ್ಲಿ ಅತ್ಯಂತ ಅದ್ಧೂರಿಯಾಗಿ ಜರುಗಿತು. ಈ ಧಾರ್ಮಿಕ ಕಾರ್ಯಕ್ರಮಕ್ಕೆ ತಹಸೀಲ್ದಾರ್ ನಯನ ಮತ್ತು ನಗರಸಭೆ ಆಯುಕ್ತ ನವೀನ್ ಚಂದ್ರ ಅವರು ಚಾಲನೆ ನೀಡಿದರು. ಬ್ರಹ್ಮರಥೋತ್ಸವದ ಅಂಗವಾಗಿ ದೇವರಿಗೆ ವಿಶೇಷ ಅಭಿಷೇಕ, ರಥ ಶಾಂತಿ, ರಥ ಬಲಿ, ಆಚಾರ್ಯ ಪೂಜೆ ಹಾಗೂ ಪ್ರಸಾದ ಸೇವೆ ಸೇರಿದಂತೆ ವಿವಿಧ ಧಾರ್ಮಿಕ ವಿಧಿವಿಧಾನಗಳು ಶಾಸ್ತ್ರೋಕ್ತವಾಗಿ ನೆರವೇರಿದವು.

## ಪೊಲೀಸರಿಗೆ ಇಲ್ಲ ಸಂಬಳ

ಕಾರವಾರ: ಉತ್ತರ ಕನ್ನಡ ಜಿಲ್ಲೆಯ ಪೊಲೀಸ್ ಇಲಾಖೆಯಲ್ಲಿ ಆರಕ್ಷಕರಿಗೆ ಫೆಬ್ರವರಿ ತಿಂಗಳ ಸಂಬಳ ಖಾತೆಗೆ ಬಂದಿಲ್ಲ. ಈಗ ಬರಬಹುದು, ನಾಳೆ ಬರಬಹುದು ಎಂಬ ನಿರೀಕ್ಷೆಯಲ್ಲಿರುವ ಪೊಲೀಸರಿಗೆ ನಿರಾಸೆ ಆಗಿದೆ.

ಇಲಾಖೆಯಿಂದ ಸಂಬಳ ಆದರೂ ಕೇವಲ 50% ಪೊಲೀಸರಿಗೆ ಸಂಬಳ ಆಗಿದೆ. ಜಿಲ್ಲೆಯಲ್ಲಿ ಅಂದಾಜು 1,800 ಸಿವಿಲ್ ಪೊಲೀಸ್, 450 ಡಿಆರ್ ಪೊಲೀಸ್ ಸಿಬ್ಬಂದಿಯಿದ್ದಾರೆ. ಇದರಲ್ಲಿ ಡಿಆರ್ ಪೊಲೀಸರಿಗೆ ಸಂಬಳ ಆದರೆ, ಸಿವಿಲ್ ಪೊಲೀಸರಲ್ಲಿ ಮಾತ್ರ 50% ಹಣ ಜಮಾವಣೆಯಾಗಿದೆ.

ಕೆಲವು ಡಿವೈಎಸ್ಪಿ, ಸಿಪಿಐ, ಸೇರಿದಂತೆ ಪಿಸಿಗಳಿಗೂ ಸಂಬಳ ವ್ಯತ್ಯಯವಾಗಿದ್ದು, ಕುಟುಂಬ ನಿರ್ವಹಣೆಗೆ ಹಣವಿಲ್ಲದೇ ಪರದಾಡುವ ಸ್ಥಿತಿ ನಿರ್ಮಾಣವಾಗಿದೆ. ಮೂಲಗಳ ಪ್ರಕಾರ ತಾಂತ್ರಿಕ ಸಮಸ್ಯೆ ಎನ್ನಲಾಗುತ್ತಿದೆ. ಆದರೆ, ತಿಂಗಳಗಟ್ಟಲೇ ಸಂಬಳ ಆಗದೇ ತೊಂದರೆ ಅನುಭವಿಸುತ್ತಿರುವ ಪೊಲೀಸರು ಇದೀಗ ಹಿಡಿಶಾಪ ಹಾಕುವಂತಾಗಿದೆ.

## ಕಾಳಸಂತೆಯಲ್ಲಿ ಗ್ಯಾಸ್ ಮಾರದಂತೆ ಕಡಿವಾಣ

ಬೆಂಗಳೂರು: ದೇಶಾದ್ಯಂತ ಕಮರ್ಷಿಯಲ್ ಗ್ಯಾಸ್ ಸಿಲಿಂಡರ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾದ ಹಿನ್ನೆಲೆ ಹೋಟೆಲ್, ರೆಸ್ಟೋರೆಂಟ್, ದೇವಸ್ಥಾನಗಳು, ಅನ್ನಛತ್ರಗಳು, ಹಾಸ್ಟೆಲ್‌ಗಳು ಮತ್ತು ಪಿಜಿಗಳಿಗೆ ತೀವ್ರ ಸಂಕಷ್ಟ ಎದುರಾಗಿದೆ. ವಿಶೇಷವಾಗಿ ಬೆಂಗಳೂರಿನಲ್ಲಿ ಅನೇಕ ಹೋಟೆಲ್‌ಗಳಲ್ಲಿ ಅಡುಗೆ ಕಾರ್ಯ ನಡೆಸುವುದೇ ಕಷ್ಟಕರವಾಗಿರುವ ಪರಿಸ್ಥಿತಿ ನಿರ್ಮಾಣವಾಗಿದೆ.

ಈ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಅವರು ಇಂದು ಹೋಟೆಲ್ ಮಾಲೀಕರ ಸಂಘದ ಪ್ರತಿನಿಧಿಗಳೊಂದಿಗೆ ವಿಧಾನಸೌಧದಲ್ಲಿ ಮಹತ್ವದ ಸಭೆ ನಡೆಸಿದರು.

ಸಭೆಯಲ್ಲಿ ಬೆಂಗಳೂರು ಹೋಟೆಲ್ ಮಾಲೀಕರ ಸಂಘದ ಅಧ್ಯಕ್ಷ ಪಿ.ಸಿ. ರಾವ್, ಸಂಘದ ಕಾರ್ಯದರ್ಶಿ ವೀರೇಂದ್ರ ಕಾಮತ್, ಜಿಬಿಎ ಆಯುಕ್ತ ಮಹೇಶ್ವರ ರಾವ್ ಸೇರಿದಂತೆ ಹಲವು ಅಧಿಕಾರಿಗಳು ಮತ್ತು ಸಂಘದ ಪದಾಧಿಕಾರಿಗಳು ಭಾಗವಹಿಸಿದರು. ಗ್ಯಾಸ್ ಸರಬರಾಜಿನಲ್ಲಿ ಉಂಟಾಗಿರುವ ವ್ಯತ್ಯಯದಿಂದ ಹೋಟೆಲ್ ಉದ್ಯಮದ ಮೇಲೆ ಉಂಟಾಗುತ್ತಿರುವ ಪರಿಣಾಮಗಳ ಕುರಿತು ಸಭೆಯಲ್ಲಿ ಚರ್ಚೆ ನಡೆಯಿತು.

ಗ್ಯಾಸ್ ಕೊರತೆಯ ಹಿಂದೆ ಕಾಳಸಂತೆಕೋರರ ಕೈವಾಡ ಇರಬಹುದೆಂಬ ಶಂಕೆಯನ್ನು ವ್ಯಕ್ತಪಡಿಸಿದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಅವರು ಈ ಕುರಿತು ತನಿಖೆ ನಡೆಸುವಂತೆ ಪೊಲೀಸ್ ಇಲಾಖೆಗೆ ಸೂಚನೆ ನೀಡಿದರು.

# ಮಹಿಳಾ ಸಬಲೀಕರಣದ ಕುರಿತು ಮಹತ್ವದ ಚರ್ಚೆ

ಮುಂಬೈ: ಅಂತಾರಾಷ್ಟ್ರೀಯ ಮಹಿಳಾ ದಿನದ ಸಂದರ್ಭದಲ್ಲಿ ಮಹಾರಾಷ್ಟ್ರ ಸರ್ಕಾರ ಮಹಿಳೆಯರಿಗಾಗಿ ಹೊಸ ಯೋಜನೆಯೊಂದನ್ನು ಜಾರಿಗೊಳಿಸಿದೆ. ಅದಕ್ಕೆ ಕಮ್ ಅರ್ಲಿ ಗೋ ಅರ್ಲಿ ಎಂದು ನಾಮಕರಣ ಮಾಡಿದೆ. ಮಹಾರಾಷ್ಟ್ರ ವಿಧಾನ ಪರಿಷತ್ತಿನಲ್ಲಿ ಮಹಿಳಾ ಸಬಲೀಕರಣದ ಕುರಿತು ಮಹತ್ವದ ಚರ್ಚೆ ನಡೆಯಿತು. ಈ ಚರ್ಚೆಗೆ ಪ್ರತಿಕ್ರಿಯಿಸಿದ ಉಪಮುಖ್ಯಮಂತ್ರಿ ಸುನೇತ್ರಾ ಪವಾರ್, ಮುಂಬೈ ಮಹಾನಗರ ಪ್ರದೇಶದಲ್ಲಿ ಕೆಲಸ ಮಾಡುತ್ತಿರುವ ಮಹಿಳಾ ಸರ್ಕಾರಿ ಉದ್ಯೋಗಿಗಳಿಗಾಗಿ ಕಮ್ ಅರ್ಲಿ, ಗೋ ಅರ್ಲಿ ಯೋಜನೆಯನ್ನು ಘೋಷಿಸಿದ್ದಾರೆ.

> ಮುಂಬೈನ ಸ್ಥಳೀಯ ರೈಲುಗಳು ಮತ್ತು ರಸ್ತೆಗಳಲ್ಲಿ ಜನದಟ್ಟಣೆಯ ಸವಾಲುಗಳನ್ನು ಗಮನದಲ್ಲಿಟ್ಟುಕೊಂಡು ಸರ್ಕಾರ ಈ ಕ್ರಮ ಕೈಗೊಂಡಿದೆ.ಕಮ್ ಅರ್ಲಿ-ಗೋ ಅರ್ಲಿ ಉಪಕ್ರಮದಡಿಯಲ್ಲಿ, ಮಹಿಳಾ ಉದ್ಯೋಗಿಗಳು ಬೆಳಗ್ಗೆ 9.15 ರಿಂದ 9.45 ರ ನಡುವೆ ಕಚೇರಿಗೆ ಬೇಗನೆ ತಲುಪಲು ಮತ್ತು ಸಂಜೆ ಮನೆಗೆ ಮುಂಚಿತವಾಗಿಯೇ ಹಿಂದಿರುಗಲು ಸಾಧ್ಯವಾಗುತ್ತದೆ. ಅವರಿಗೆ ದಿನಕ್ಕೆ ಸುಮಾರು 30 ನಿಮಿಷಗಳ ವಿಶೇಷ ರಿಯಾಯಿತಿ ನೀಡಲಾಗುವುದು.

ಮುಂಬೈನ ಸ್ಥಳೀಯ ರೈಲುಗಳು ಮತ್ತು ರಸ್ತೆಗಳಲ್ಲಿ ಜನದಟ್ಟಣೆಯ ಸವಾಲುಗಳನ್ನು ಗಮನದಲ್ಲಿಟ್ಟುಕೊಂಡು ಸರ್ಕಾರ ಈ ಕ್ರಮ ಕೈಗೊಂಡಿದೆ.ಕಮ್ ಅರ್ಲಿ–ಗೋ ಅರ್ಲಿ ಉಪಕ್ರಮದಡಿಯಲ್ಲಿ, ಮಹಿಳಾ ಉದ್ಯೋಗಿಗಳು ಬೆಳಗ್ಗೆ 9.15 ರಿಂದ 9.45 ರ ನಡುವೆ ಕಚೇರಿಗೆ ಬೇಗನೆ ತಲುಪಲು ಮತ್ತು ಸಂಜೆ ಮನೆಗೆ ಮುಂಚಿತವಾಗಿಯೇ ಹಿಂದಿರುಗಲು ಸಾಧ್ಯವಾಗುತ್ತದೆ. ಅವರಿಗೆ ದಿನಕ್ಕೆ ಸುಮಾರು 30 ನಿಮಿಷಗಳ ವಿಶೇಷ ರಿಯಾಯಿತಿ ನೀಡಲಾಗುವುದು.

ಇದು ಅವರ ಪ್ರಯಾಣದ ಒತ್ತಡವನ್ನು ಕಡಿಮೆ ಮಾಡುವುದಲ್ಲದೆ, ಕೆಲಸ ಮತ್ತು ಕುಟುಂಬದ ನಡುವೆ ಉತ್ತಮ ಸಮತೋಲನವನ್ನು ಸಾಧಿಸಲು ಅವರಿಗೆ ಅನುವು ಮಾಡಿಕೊಡುತ್ತದೆ. ಮಹಿಳೆಯರು ಮತ್ತು ಮಕ್ಕಳ ಸುರಕ್ಷತೆಗೆ ರಾಜ್ಯ ಸರ್ಕಾರ ಬದ್ಧವಾಗಿದೆ ಎಂದು ಉಪಮುಖ್ಯಮಂತ್ರಿ ಸುನೇತ್ರಾ ಪವಾರ್ ಸದನಕ್ಕೆ ಮಾಹಿತಿ ನೀಡಿದರು. ಜುಲೈ 2015 ರಿಂದ ಫೆಬ್ರವರಿ 2026 ರವರೆಗೆ ನಡೆಸಲಾದ ಆಪರೇಷನ್ ಮುಸ್ಕಾನ್‌ನ 14 ಹಂತಗಳಲ್ಲಿ, 42,594 ಮಕ್ಕಳು ಸುರಕ್ಷಿತವಾಗಿದ್ದಾರೆ ಎಂದು ಕಂಡುಬಂದಿದೆ.

ಹೆಚ್ಚುವರಿಯಾಗಿ, ಆಪರೇಷನ್ ಸರ್ಚ್ ಮೂಲಕ 5,066 ಮಹಿಳೆಯರು ಮತ್ತು 2,771 ಮಕ್ಕಳನ್ನು ಅವರ ಕುಟುಂಬಗಳೊಂದಿಗೆ ಮತ್ತೆ ಸೇರಿಸಲಾಗಿದೆ. ಪ್ರಸ್ತುತ, ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಕಾಣೆಯಾದ ಕೋಶಗಳು ಸಕ್ರಿಯವಾಗಿ ಕಾರ್ಯನಿರ್ವಹಿಸುತ್ತಿವೆ ಮತ್ತು 51 ಭರೋಸಾ ಕೋಶಗಳು ಮಹಿಳೆಯರ ದೂರುಗಳನ್ನು ಸಕ್ರಿಯವಾಗಿ ಪರಿಹರಿಸುತ್ತಿವೆ.

ಮಹಿಳೆಯರನ್ನು ಕೋಟ್ಯಾಧಿಪತಿಗಳನ್ನಾಗಿ ಮಾಡುವ ಗುರಿಯೊಂದಿಗೆ ಸರ್ಕಾರವು ಲಡ್ಕಿ ಬೆಹೆನ್ ಯೋಜನೆ, ನಮೋ ಮಹಿಳಾ ಸಾಕ್ಷರತಾ ಮತ್ತು ಅನ್ನಪೂರ್ಣ ದಂತಹ ಯೋಜನೆಗಳನ್ನು ಜಾರಿಗೆ ತಂದಿದೆ. ಸ್ವಸಹಾಯ ಗುಂಪುಗಳ ಉತ್ಪನ್ನಗಳಿಗೆ ಜಾಗತಿಕ ಮಾರುಕಟ್ಟೆಯನ್ನು ಒದಗಿಸಲು ಉಮ್ಮೈದ್ ಮಾಲ್ ಮತ್ತು ಆನ್‌ಲೈನ್ ವೇದಿಕೆಗಳನ್ನು ಪ್ರಾರಂಭಿಸಲಾಗಿದೆ.

ಮಹಿಳೆಯರ ಸುರಕ್ಷತೆಗಾಗಿ ಆಧುನಿಕ ತಂತ್ರಜ್ಞಾನದ ಬಳಕೆಯನ್ನು ವಿಸ್ತರಿಸಲಾಗುತ್ತಿದೆ. ಸೈಬರ್ ಅಪರಾಧವನ್ನು ತಡೆಗಟ್ಟಲು ಛತ್ರಪತಿ ಶಿವಾಜಿ ಮಹಾರಾಜ್ ಟರ್ಮಿನಸ್, ಚರ್ಚ್‌ಗೇಟ್ ಮತ್ತು ಬೋರಿವಲಿ ನಿಲ್ದಾಣಗಳಲ್ಲಿ ವ್ಯವಸ್ಥೆಗಳನ್ನು ಸ್ಥಾಪಿಸಲಾಗಿದೆ.

ಭಾರತ ಸಾರಥಿ
BHARATHA SARATHI KANNADA DAILY NEWS PAPER
12/03/2026
ಬೆಂಗಳೂರು । ಬೆಂ.ಗ್ರಾಮಾಂತರ । ತುಮಕೂರು । ಮೈಸೂರು । ಮಂಡ್ಯ । ರಾಮನಗರ । ಕೋಲಾರ । ಚಿಕ್ಕಬಳ್ಳಾಪುರ । ಚಿತ್ರದುರ್ಗ । ದಾವಣಗೆರೆ । ಶಿವಮೊಗ್ಗ । ಮಂಗಳೂರು । ಉಡುಪಿ । ಹುಬ್ಬಳ್ಳಿ । ಮಡಿಕೇರಿ । ಚಿಕ್ಕಮಗಳೂರು । ಹಾಸನ । ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಕರ್ನಾಟಕ ಬಜೆಟ್‌ಗೆ ಬ್ರೂವರ್ಸ್ ಅಸೋಸಿಯೇಷನ್ ಸ್ವಾಗತ: ಎಕ್ಸೈಸ್ ನೀತಿಯಲ್ಲಿ ಐತಿಹಾಸಿಕ ಸುಧಾರಣೆ

ಬೆಂಗಳೂರು

ಕರ್ನಾಟಕ ಸರ್ಕಾರದ 2026–27ನೇ ಸಾಲಿನ ರಾಜ್ಯ ಬಜೆಟ್‌ನ್ನು ಬ್ರೂವರ್ಸ್ ಅಸೋಸಿಯೇಷನ್ ಆಫ್ ಇಂಡಿಯಾ ಸ್ವಾಗತಿಸಿದ್ದು, ಎಕ್ಸೈಸ್ ನೀತಿ ಕ್ಷೇತ್ರದಲ್ಲಿ ಇದು ಮಹತ್ವದ ತಿರುವಾಗಲಿದೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದೆ. ಮುಖ್ಯಮಂತ್ರಿ ವಿಧಾನಸಭೆಯಲ್ಲಿ ಮಂಡಿಸಿದ ಬಜೆಟ್ ಮದ್ಯ ತೆರಿಗೆ ಹಾಗೂ ನಿಯಂತ್ರಣ ವ್ಯವಸ್ಥೆಯಲ್ಲಿ ಹಲವು ರಚನಾತ್ಮಕ ಸುಧಾರಣೆಗಳನ್ನು ಘೋಷಿಸಿರುವುದು ಗಮನಾರ್ಹವಾಗಿದೆ ಎಂದು ಅಸೋಸಿಯೇಷನ್ ತಿಳಿಸಿದೆ.



BAI ಪ್ರಕಾರ, ಅಲ್ಕೊಬೆವ್ ಉದ್ಯಮಕ್ಕೆ ಸಂಬಂಧಿಸಿದಂತೆ ಅತ್ಯಂತ ಮಹತ್ವದ ಘೋಷಣೆ ಎಂದರೆ ಏಪ್ರಿಲ್ 2026ರಿಂದ ಜಾರಿಗೆ ಬರಲಿರುವ ಅಲ್ಕೊಹಾಲ್–ಇನ್–ಬೆವರೇಜ್ ಆಧಾರಿತ ಎಕ್ಸೈಸ್ ಸುಂಕ ವ್ಯವಸ್ಥೆ. ಈ ಹೊಸ ವ್ಯವಸ್ಥೆಯಡಿ ಪಾನೀಯದಲ್ಲಿರುವ ನಿಜವಾದ ಅಲ್ಕೊಹಾಲ್ ಪ್ರಮಾಣದ ಆಧಾರದ ಮೇಲೆ ತೆರಿಗೆ ವಿಧಿಸಲಾಗುತ್ತದೆ. ಬಜೆಟ್‌ನಲ್ಲಿ ಉಲ್ಲೇಖಿಸಿರುವಂತೆ, AIB ಆಧಾರಿತ ತೆರಿಗೆ ವ್ಯವಸ್ಥೆ ಅಲ್ಕೊಹಾಲ್ ಪ್ರಮಾಣವನ್ನೇ ಗುರಿಯಾಗಿರುತ್ತದೆ, ಏಕೆಂದರೆ ನಕಾರಾತ್ಮಕ ಸಾಮಾಜಿಕ ಪರಿಣಾಮಗಳಿಗೆ ಮುಖ್ಯ ಕಾರಣ ಅಲ್ಕೊಹಾಲ್ ಆಗಿದೆ. ಈ ಮೂಲಕ ರಾಜ್ಯದ ತೆರಿಗೆ ನೀತಿಯಲ್ಲಿ ಮಹತ್ವದ ಬದಲಾವಣೆ ಆಗಿದ್ದು, ಕೇವಲ ಆದಾಯ ಗರಿಷ್ಠೀಕರಣದಿಂದ ದೂರ ಸರಿದು ಆದಾಯ ಮತ್ತು ಸಾರ್ವಜನಿಕ ಆರೋಗ್ಯದ ನಡುವೆ ಸಮತೋಲನ ಸಾಧಿಸುವತ್ತ ಸರ್ಕಾರ ಹೆಜ್ಜೆ ಇಟ್ಟಿದೆ ಎಂದು ತಿಳಿಸಲಾಗಿದೆ.

ಪಾನೀಯದಲ್ಲಿರುವ ಅಲ್ಕೊಹಾಲ್‌ಗೆ ತೆರಿಗೆ ವಿಧಿಸುವುದು, ನೀರಿಗೆ ಅಲ್ಲ ಎಂಬ ತತ್ವವು ವಿಶ್ವ ಆರೋಗ್ಯ ಸಂಸ್ಥೆ (WHO) ಶಿಫಾರಸು ಮಾಡಿರುವ ಜಾಗತಿಕ ಮಾನದಂಡವಾಗಿದ್ದು, ಅನೇಕ ಅಭಿವೃದ್ಧಿ ಹೊಂದಿದ ಹಾಗೂ ಪ್ರಗತಿಶೀಲ ದೇಶಗಳಲ್ಲಿ ಇದನ್ನು ಅನುಸರಿಸಲಾಗುತ್ತಿದೆ ಎಂದು ಅಸೋಸಿಯೇಷನ್ ಸ್ಪಷ್ಟಪಡಿಸಿದೆ.

# ಫಿಸಿಕ್ಸ್ ವಾಲಾ ಪಿಡಬ್ಲ್ಯೂ ಹೊಸ ವಿದ್ಯಾಪೀಠ ಕೇಂದ್ರಕ್ಕೆ ಚಾಲನೆ



ಬೆಂಗಳೂರು

ಶೈಕ್ಷಣಿಕ ಕಂಪನಿ ಫಿಸಿಕ್ಸ್ ವಾಲಾ(ಪಿ.ಡಬ್ಲ್ಯೂ) ಬೆಂಗಳೂರಿನ ರಾಜರಾಜೇಶ್ವರಿ ನಗರದಲ್ಲಿ ಹೊಸ ತಂತ್ರಜ್ಞಾನ–ಸನ್ನದ್ಧ ಪಿ.ಡಬ್ಲ್ಯೂ.ವಿದ್ಯಾಪೀಠ ಕೇಂದ್ರಕ್ಕೆ ಚಾಲನೆ ನೀಡಿದ್ದು ತನ್ನ ವ್ಯಾಪ್ತಿ ವಿಸ್ತರಿಸಿದೆ. ಪಿ.ಡಬ್ಲ್ಯೂ.ವಿದ್ಯಾಪೀಠವು ತಂತ್ರಜ್ಞಾನ–ಸನ್ನದ್ಧ ಆಫ್ಲೈನ್ ಕೇಂದ್ರಗಳನ್ನು ಹೊಂದಿದ್ದು ಅದು ವಿದ್ಯಾರ್ಥಿಗಳಿಗೆ ಅನುಭವಿ ಶಿಕ್ಷಕರೊಂದಿಗೆ ವೈಯಕ್ತಿಕ ತರಗತಿಗಳಿಗೆ ಹಾಜರಾಗಲು ಅವಕಾಶ ಕಲ್ಪಿಸುತ್ತದೆ. ಹೊಸ ಪಿ.ಡಬ್ಲ್ಯೂ.ವಿದ್ಯಾಪೀಠ ಕೇಂದ್ರವು 2ನೇ ಮಹಡಿ, ನಂ.466/ಎ, ಐಡಿಯಲ್ ಹೋಮ್ಸ್ ಟೌನ್ ಶಿಪ್, 80 ಅಡಿ ರಸ್ತೆ, ಕೆಂಚೇನಹಳ್ಳಿ, ರಾಜರಾಜೇಶ್ವರಿ ನಗರ, ಬೆಂಗಳೂರು, ಕರ್ನಾಟಕ–560098 ಇಲ್ಲಿದೆ. ನಗರದಲ್ಲಿ ಪಿ.ಡಬ್ಲ್ಯೂ.ವಿನ ಇತರೆ ಕೇಂದ್ರಗಳು ಜೆ.ಪಿ.ನಗರ, ವೈಟ್ ಫೀಲ್ಡ್, ಬಾಣಸವಾಡಿ, ಯಲಹಂಕ, ರಾಜಾಜಿನಗರ ಮತ್ತು ಎಚ್.ಎಸ್.ಆರ್.ಲೇಔಟ್–ಹರಳೂರು ರಸ್ತೆಗಳಲ್ಲಿವೆ.

ಫಿಸಿಕ್ಸ್ ವಾಲಾದ ವಿದ್ಯಾಪೀಠ–ಆಫ್ಲೈನ್ ಸಿಇಒ ಅಂಕಿತ್ ಗುಪ್ತಾ, “ಪಿ.ಡಬ್ಲ್ಯೂ.ದಲ್ಲಿ ನಾವು ಸದಾ ವಿದ್ಯಾರ್ಥಿಗಳ ಕಲಿಕೆಯ ಅನುಭವ ಉತ್ತಮಪಡಿಸಲು ಮಾರ್ಗಗಳನ್ನು ಅನ್ವೇಷಿಸುತ್ತೇವೆ. ಬೆಂಗಳೂರಿನಲ್ಲಿ ನಮ್ಮ ಪ್ರಸ್ತುತದ ಕೇಂದ್ರದೊಂದಿಗೆ ಈ ಹೊಸ ಕೇಂದ್ರದ ಮೂಲಕ ನಾವು ನಮ್ಮ ಸೇವೆಗಳನ್ನು ಹೆಚ್ಚಿನ ವಿದ್ಯಾರ್ಥಿಗಳಿಗೆ ನೀಡುವ ಮತ್ತು ಅವರ ಮನೆಗಳ ಹತ್ತಿರದಲ್ಲಿ ಗುಣಮಟ್ಟದ ಶಿಕ್ಷಣ ತರುವ ಗುರಿ ಹೊಂದಿದ್ದೇವೆ” ಎಂದರು. ಅಲ್ಲದೆ ಇತ್ತೀಚೆಗೆ ನಡೆದ ಜೆಇಇ ಮೈನ್ಸ್ 2026 ಸೆಷನ್ 1ರ ಫಲಿತಾಂಶಗಳಲ್ಲಿ ಬೆಂಗಳೂರಿನ ಫಿಸಿಕ್ಸ್ ವಾಲಾದ 11 ವಿದ್ಯಾರ್ಥಿಗಳು 99 ಪರ್ಸೆಂಟೈಲ್ ಅಥವಾ ಅದಕ್ಕಿಂತ ಹೆಚ್ಚು ಪಡೆದಿದ್ದಾರೆ.

# ಮಾವು ರಫ್ತು ಗುಣಮಟ್ಟದ ಕುರಿತು ರೈತರಿಗೆ ತರಬೇತಿ

ಕೆಜಿಎಫ್

ಸರ್ಕಾರದ ಸೌಲಭ್ಯಗಳ ಬಗ್ಗೆ ಸೂಕ್ತ ಮಾಹಿತಿಯ ಕೊರತೆಯಿಂದಾಗಿ ಜಿಲ್ಲೆಯ ಮಾವು ಬೆಳೆಗಾರರು ಅನೇಕ ಸವಲತ್ತುಗಳಿಂದ ವಂಚಿತರಾಗುತ್ತಿದ್ದಾರೆ ಎಂದು ಕೋಲಾರ ಜಿಲ್ಲಾ ಮಾವು ಬೆಳೆಗಾರರ ಸಂಘದ ಅಧ್ಯಕ್ಷರಾದ ಚಿನ್ನಪ್ಪ ರೆಡ್ಡಿ ಕಳವಳ ವ್ಯಕ್ತಪಡಿಸಿದರು.

ಕೆಜಿಎಫ್ ತಾಲೂಕಿನ ಶ್ರೀನಿವಾಸಸಂದ್ರ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕರಡುಗೂರು ಗ್ರಾಮದಲ್ಲಿ ‘ಕೆಜಿಎಫ್ ತಾಲೂಕು ಮಾವು ಬೆಳೆಗಾರರ ಕ್ಷೇಮಾಭಿವೃದ್ಧಿ ಸಂಘ’ದ ಉದ್ಘಾಟನೆ ಹಾಗೂ ಕೇಂದ್ರ ಸರ್ಕಾರದ ಅಪೆಡಾ ಸಹಯೋಗದೊಂದಿಗೆ ಹಮ್ಮಿಕೊಂಡಿದ್ದ “ಮಾವಿನ ಹಣ್ಣಿನ ರಫ್ತು ಗುಣಮಟ್ಟ ನಿರ್ವಹಣೆ” ಕುರಿತ ಸಾಮರ್ಥ್ಯ ಅಭಿವೃದ್ಧಿ ತರಬೇತಿ ಶಿಬಿರವನ್ನು ಉದ್ಘಾಟಿಸಿ ಅವರು ಮಾತನಾಡಿದರು.




ಬೆಂ.ಡಾ. ಬಿ ಆರ್ ಅಂಬೇಡ್ಕರ್ ಮಹಿಳಾ ಮತ್ತು ಮಕ್ಕಳ ರಕ್ಷಣಾ ವೇದಿಕೆ ರಾಜ್ಯದ್ಯಕ್ಷರಾದ ಶ್ರೀಮತಿ ಗೀತಾ ಪಿ ರವರಿಗೆ ಇವರ ಸಾಮಾಜಿಕ ಕಾರ್ಯಗಳನ್ನು ಗುರುತಿಸಿ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆಯಂದು ನ್ಯೂ ಲೈಫ್ ಸೋಶಿಯಲ್ ಫೆಡರೇಶನ್ ವತಿಯಿಂದ ನ್ಯೂ ಲೈಫ್ ಭಾರತ ಗೌರವ ಪ್ರಶಸ್ತಿ 2026 ಕೊಟ್ಟು ಸನ್ಮಾನಿಸಿದರು. ಈ ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಗಳಾಗಿ ಪ್ರೊ. ಶಂಗುಪ್ತ ಅಂಜುಂ, ಶ್ರೀಮತಿ ರಾಣಿ ಶ್ರೀನಿವಾಸ್ ರೆಡ್ಡಿ, ಡಾ. ದಿಶಾ ಆರ್ ಶೆಟ್ಟಿ, ಡಾ. ಮೆಹ್ಜಬಿನ್, ಮತ್ತು ಡಾ. ರೇಷ್ಮಾ ಕಿರಣ್ ಅವರು ಆಗಮಿಸಿದ್ದರು, ಈ ಸಂದರ್ಭದಲ್ಲಿ ನ್ಯೂ ಲೈಫ್ ಸೋಶಿಯಲ್ ಫೆಡರೇಶನ್ ಸಂಸ್ಥೆಯ ಸಂಸ್ಥಾಪಕರು ಮತ್ತು ಅಧ್ಯಕ್ಷರು ಡಾ. ಕತಿವರನ್ ಮತ್ತು ಸಂಸ್ಥೆಯ ಕಾರ್ಯದರ್ಶಿಯಾದ ಶ್ರೀಮದಿ ಪರಮೇಶ್ವರಿ, ಡಾ. ಸೊಲೊಮನ್, ಶ್ರೀ ಬಾಬು, ಶ್ರೀ ರಾಜು, ಶ್ರೀ ಸುನಿಲ್, ಮತ್ತು ಡಾ ಆನಂದ್ ಹಾಗೂ ಅನೇಕ ಗಣ್ಯ ವ್ಯಕ್ತಿಗಳು ಉಪಸ್ಥಿತರಿದ್ದರು.

# ಶಿಕ್ಷಣ, ಕೌಶಲ್ಯ ಮತ್ತು ಸಾಂಸ್ಕೃತಿಕ ಸಹಯೋಗ ಬಲವರ್ಧನೆಗೆ ಒಪ್ಪಂದ



ಬೆಂಗಳೂರು

ಶಿಕ್ಷಣ, ಕೌಶಲ್ಯಾಭಿವೃದ್ಧಿ ಮತ್ತು ಸಾಂಸ್ಕೃತಿಕ ಸಹಯೋಗವನ್ನು ಬಲಪಡಿಸುವ ಉದ್ದೇಶದಿಂದ ಕರ್ನಾಟಕ ಸರ್ಕಾರ ಮತ್ತು ಯುಕೆಯ ಅಂತರರಾಷ್ಟ್ರೀಯ ಸಂಸ್ಥೆಯಾದ ಬ್ರಿಟಿಷ್ ಕೌನ್ಸಿಲ್ ನಡುವೆ ನವೀಕರಿಸಿದ ಒಡಂಬಡಿಕೆ ಪತ್ರಕ್ಕೆ (ಎಂಒಯು) ಸಹಿ ಹಾಕಲಾಗಿದೆ. ಬೆಂಗಳೂರಿನ ಅರಮನೆ ರಸ್ತೆಯಲ್ಲಿರುವ ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಮಂಡಳಿ (ಕೆಎಸ್‌ಎಚ್‌ಇಸಿ) ಕಚೇರಿಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಈ ಒಪ್ಪಂದಕ್ಕೆ ಸಹಿ ಹಾಕಲಾಯಿತು.

ಕರ್ನಾಟಕ ಸರ್ಕಾರದ ಉನ್ನತ ಶಿಕ್ಷಣ ಇಲಾಖೆಯ ಕಾರ್ಯದರ್ಶಿ ಖುಷ್ಬೂ ಗೋಯೆಲ್ ಚೌಧರಿ (ಐಎಎಸ್) ಹಾಗೂ ಬ್ರಿಟಿಷ್ ಕೌನ್ಸಿಲ್‌ನ ದಕ್ಷಿಣ ಭಾರತದ ನಿರ್ದೇಶಕ ಜನಕ ಪುಷ್ಪನಾಥನ್ ಅವರು ಉನ್ನತ ಶಿಕ್ಷಣ ಸಚಿವ ಡಾ. ಎಂ.ಸಿ. ಸುಧಾಕರ್ ಅವರ ಸಮ್ಮುಖದಲ್ಲಿ ಒಪ್ಪಂದಕ್ಕೆ ಸಹಿ ಹಾಕಿದರು. ಕಾರ್ಯಕ್ರಮದಲ್ಲಿ ಕರ್ನಾಟಕ ಸರ್ಕಾರದ ಹಿರಿಯ ಅಧಿಕಾರಿಗಳು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಮಂಡಳಿ (ಕೆಎಸ್‌ಎಚ್‌ಇಸಿ) ಪ್ರತಿನಿಧಿಗಳು, ಬ್ರಿಟಿಷ್ ಕೌನ್ಸಿಲ್‌ನ ನಾಯಕತ್ವದ ಅಧಿಕಾರಿಗಳು ಹಾಗೂ ರಾಜ್ಯದ ವಿವಿಧ ವಿಶ್ವವಿದ್ಯಾಲಯಗಳ ಉಪಕುಲಪತಿಗಳು ಭಾಗವಹಿಸಿದ್ದರು.

ಈ ಒಪ್ಪಂದವು ಕರ್ನಾಟಕ ಸರ್ಕಾರ ಮತ್ತು ಬ್ರಿಟಿಷ್ ಕೌನ್ಸಿಲ್ ನಡುವಿನ ದೀರ್ಘಕಾಲಿಕ ಪಾಲುದಾರಿಕೆಯನ್ನು ಮತ್ತಷ್ಟು ಬಲಪಡಿಸುವುದರ ಜೊತೆಗೆ ಉನ್ನತ ಶಿಕ್ಷಣ, ಇಂಗ್ಲಿಷ್ ಮತ್ತು ಶಾಲಾ ಶಿಕ್ಷಣ, ಕೌಶಲ್ಯಾಭಿವೃದ್ಧಿ, ಡಿಜಿಟಲ್ ಗ್ರಂಥಾಲಯಗಳು ಹಾಗೂ ಕಲೆ ಮತ್ತು ಸೃಜನಶೀಲ ಆರ್ಥಿಕತೆಯ ಕ್ಷೇತ್ರಗಳಲ್ಲಿ ಸಹಯೋಗವನ್ನು ವಿಸ್ತರಿಸುವ ಗುರಿಯನ್ನು ಹೊಂದಿದೆ. ಒಪ್ಪಂದದ ಮೂಲಕ ಗುಣಮಟ್ಟದ ಶಿಕ್ಷಣ, ಅಂತರರಾಷ್ಟ್ರೀಯ ಮಾನದಂಡದ ಮೌಲ್ಯಮಾಪನ ವ್ಯವಸ್ಥೆಗಳು, ಕೌಶಲ್ಯ ಮತ್ತು ಅರ್ಹತೆಗಳ ಅಭಿವೃದ್ಧಿ ಹಾಗೂ ಭಾರತ ಮತ್ತು ಯುನೈಟೆಡ್ ಕಿಂಗ್‌ಡಮ್ ನಡುವಿನ ಶೈಕ್ಷಣಿಕ ಮತ್ತು ಸಾಂಸ್ಕೃತಿಕ ವಿನಿಮಯಕ್ಕೆ ಹೆಚ್ಚಿನ ಅವಕಾಶಗಳನ್ನು ಒದಗಿಸುವುದಾಗಿ ತಿಳಿಸಲಾಗಿದೆ. ಇದರಿಂದ ಕರ್ನಾಟಕವನ್ನು ಜಾಗತಿಕ ಜ್ಞಾನ ಕೇಂದ್ರವನ್ನಾಗಿ ರೂಪಿಸುವ ರಾಜ್ಯದ ಮಹತ್ವಾಕಾಂಕ್ಷೆಗಳಿಗೆ ಬೆಂಬಲ ಸಿಗಲಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

# ‘ಲೂಟಿ ನಿಲ್ಲಿಸಿ, ಬಡಜನರ ಮನೆಗೆ ವಿದ್ಯುತ್ ಸಂಪರ್ಕ ಕೊಡಿ’

ಬೆಂಗಳೂರು

ನಿರ್ಮಾಣ ಹಂತದಲ್ಲಿರುವ ಅಥವಾ ಪೂರ್ಣಗೊಂಡಿರುವ ಕಟ್ಟಡಗಳಿಗೆ ವಾಸಯೋಗ್ಯ ಪ್ರಮಾಣ ಪತ್ರದ ಬಗ್ಗೆ ಸ್ಪಷ್ಟತೆ ನೀಡುವುದು ಸೇರಿದಂತೆ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಆಗ್ರಹಿಸಿ ಕರ್ನಾಟಕ ರಾಜ್ಯ ಅನುಮತಿ ಪಡೆದ ವಿದ್ಯುತ್ ಗುತ್ತಿಗೆದಾರರ ಸಂಘವು ಫ್ರೀಡಂ ಪಾರ್ಕ್ ನಲ್ಲಿ ಪ್ರತಿಭಟನೆ ನಡೆಸಿತು.

ಸಂಘದ ಪರವಾಗಿ ಮಾಜಿ ಉಪ ಮುಖ್ಯಮಂತ್ರಿ ಡಾ.ಸಿ. ಎನ್. ಅಶ್ವತ್ಥ ನಾರಾಯಣ, ವಿಧಾನ ಪರಿಷತ್‌ನ ವಿರೋಧ ಪಕ್ಷದ ಮುಖ್ಯ ಸಚೇತಕರಾದ ಎನ್.ರವಿಕುಮಾರ್, ಮಾಜಿ ಶಾಸಕ ಎಂ.ಪಿ. ರೇಣುಕಾಚಾರ್ಯ, ಶಾಸಕ ಸಿ.ಕೆ. ರಾಮಮೂರ್ತಿ, ಆಮ್ ಆದ್ಮಿ ಪಾರ್ಟಿ ಮುಖಂಡ ರವಿಕೃಷ್ಣಾ ರೆಡ್ಡಿ ಸೇರಿದಂತೆ ಇತರೆ ರಾಜಕೀಯ ಮುಖಂಡರು ಭಾಗಿಯಾಗಿ ಬೆಂಬಲ ಸೂಚಿಸಿದರು ಹಾಗೂ ಆಡಳಿತ ಸರಕಾರದ ವಿರುದ್ಧ ವಾಗ್ದಾಳಿ ನಡೆಸಿದರು. ಈ ಪ್ರಮುಖ ವಿಚಾರವನ್ನು ವಿಧಾನ ಮಂಡಲ ಕಲಾಪದಲ್ಲಿ ಪ್ರಶ್ನಿಸುವುದಾಗಿ ಭರವಸೆ ನೀಡಿದರು.



ಈ ವೇಳೆ ಪ್ರತಿಭಟನಾಕಾರರನ್ನು ಉದ್ದೇಶಿಸಿ ಮಾತನಾಡಿದ ಮಾಜಿ ಉಪ ಮುಖ್ಯಮಂತ್ರಿ ಡಾ.ಸಿ.ಎನ್.ಅಶ್ವತ್ಥನಾರಾಯಣ, “ಕಾಂಗ್ರೆಸ್ ಸರಕಾರ ಅಧಿಕಾರಕ್ಕೆ ಬಂದ ಮೇಲೆ ಜನರಿಗೆ ನೆಮ್ಮದಿಯೇ ಇಲ್ಲದಂತಾಗಿದೆ. ಪ್ರತಿಯೊಂದು ವಿಚಾರದಲ್ಲಿ ವಸೂಲಿಗೆ ನಿಂತಿದೆ.

ಬಡವರು ಇಂದು ಜೀವನ ಮಾಡುವುದು ದುಸ್ಥರವಾಗಿದೆ. ಬಡವರ ಪರವಾಗಿ ಕೆಲಸ ಮಾಡಲು ಜನರು ಆಯ್ಕೆ ಮಾಡಿದ ಸರಕಾರ, ಜನರ ಮೇಲೆ ಸವಾರಿ ಮಾಡುತ್ತಿದೆ ಎಂದು ಆಕ್ರೋಶ” ವ್ಯಕ್ತಪಡಿಸಿದರು.

“ಕಷ್ಟಪಟ್ಟು ಮನೆಕಟ್ಟಿಕೊಳ್ಳುವುದಕ್ಕೆ ಮುಂದಾಗಿರುವ ಜನರಿಗೆ ಕರೆಂಟ್ ಸಂಪರ್ಕ ನೀಡಲು ಸರಕಾರ ಈ ರೀತಿಯ ಷರತ್ತು, ನಿಯಮಗಳನ್ನು ಹೇರಿಕೆ ಮಾಡುವ ಮೂಲಕ ಜನರ ಜೀವ ಹಿಂಡುವ ಕೆಲಸ ಮಾಡುತ್ತಿದೆ. ಸರಕಾರ ಸುಪ್ರೀಂ ಕೋರ್ಟ್ ನಿಯಮವನ್ನು ಪಾಲಿಸುವ ನೆಪದಲ್ಲಿ ಜನರ ಮೇಲೆ ದೌರ್ಜನ್ಯ ಎಸಗುತ್ತಿದೆ. ಮೊದಲು ಇದು ನಿಲ್ಲಬೇಕು. ಜನರ ಪರವಾಗಿ ಸರಕಾರ ನಿರ್ಧಾರ ತೆಗೆದುಕೊಳ್ಳಬೇಕೆಂದು” ಒತ್ತಾಯಿಸಿದರು.

ಕರ್ನಾಟಕ ರಾಜ್ಯ ಅನುಮತಿ ಪಡೆದ ವಿದ್ಯುತ್ ಗುತ್ತಿಗೆದಾರರ ಸಂಘದ ರಾಜ್ಯಾಧ್ಯಕ್ಷರಾದ ಸಿ.ರಮೇಶ್ ಮಾತನಾಡಿ, “ಸುಪ್ರೀಂ ಕೋರ್ಟ್ ನ ಆದೇಶದ ಅನ್ವಯ 2025 ಏಪ್ರಿಲ್‌ನಲ್ಲಿ ತಾತ್ಕಾಲಿಕ ವಿದ್ಯುತ್ ಸಂಪರ್ಕ ಪಡೆದಿರುವ ಹಾಗೂ ವಿವಿಧ ಹಂತಗಳಲ್ಲಿ ನಿರ್ಮಾಣ ಹಂತದಲ್ಲಿರುವ, ಪೂರ್ಣಗೊಂಡಿರುವ ಕಟ್ಟಡಗಳಿಗೆ ಪೂರ್ಣ ಪ್ರಮಾಣ ಪತ್ರ (ಓ.ಸಿ) ಅಥವಾ ವಾಸಯೋಗ್ಯ ಪ್ರಮಾಣ ಪತ್ರ ನೀಡುವ ಕುರಿತು ಸ್ಪಷ್ಟ ಮಾರ್ಗಸೂಚಿಗಳನ್ನು ನೀಡಬೇಕು” ಎಂದು ಆಗ್ರಹಿಸಿದರು.

“ರಾಜ್ಯಾದ್ಯಂತ ಲಕ್ಷಾಂತರ ಗ್ರಾಹಕರು ತಾತ್ಕಾಲಿಕ ವಿದ್ಯುತ್ ಸಂಪರ್ಕ ಪಡೆದು, ಭೂ ಪರಿವರ್ತಿತ ಹಾಗೂ ಭೂ ಪರಿವರ್ತನೆಯಾಗದ ಪ್ರದೇಶಗಳು ಮತ್ತು ಗ್ರಾಮೀಣ ವ್ಯಾಪ್ತಿಯಲ್ಲಿರುವ ಸ್ಥಳಗಲ್ಲಿ ಕಟ್ಟಡ ನಿರ್ಮಾಣ ಕಾರ್ಯಗಳನ್ನು ಬ್ಯಾಂಕ್‌ಗಳಿಂದ ಸಾಲ ಪಡೆದು ವಿವಿಧ ಹಂತಗಳಲ್ಲಿ ನಡೆಸುತ್ತಿದ್ದಾರೆ. ಇಂತಹ ಪರಿಸ್ಥಿತಿಯಲ್ಲಿ ಸುಪ್ರೀಂ ಕೋರ್ಟ್ ನ್ಯಾಯಾಲಯದ ಆದೇಶವನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸಿದಲ್ಲಿ ರಾಜ್ಯದ ಲಕ್ಷಾಂತರ ನಾಗರಿಕರಿಗೆ ಆರ್ಥಿಕ, ಮಾನಸಿಕ ಮತ್ತು ಸಾಮಾಜಿಕ ಸಮಸ್ಯೆ ಎದುರಾಗುತ್ತದೆ. ಈ ಹಿನ್ನೆಲೆಯಲ್ಲಿ ತಾತ್ಕಾಲಿಕ ವಿದ್ಯುತ್ ಸಂಪರ್ಕ ಪಡೆದಿರುವ, ಅರ್ಜಿ ಸಲ್ಲಿಸಿರುವ, ಮಂಜೂರಾತಿ ಪಡೆದಿರುವ ಕಾರ್ಯಾದೇಶಗೊಂಡಿರುವ ಕಟ್ಟಡಗಳಿಗೆ ಸೂಕ್ತ ವಿನಾಯಿತಿ ನೀಡುವ ಮೂಲಕ ಈಗಾಗಲೇ ನಿರ್ಮಾಣಗೊಂಡಿರುವ ಕಟ್ಟಡಗಳ ಗ್ರಾಹಕರಿಗೆ ಅನುಕೂಲವಾಗುವಂತೆ ಸರಕಾರ ಕ್ರಮಕೈಗೊಳ್ಳಬೇಕೆಂದು” ಒತ್ತಾಯಿಸಿದರು.

# 46 ಅನಾಥ ಗಿಳಿಮರಿಗಳ ಆಪತ್ಬಾಂಧವರು

ಬೆಂಗಳೂರು

ತಾಯಿಯನ್ನು ಕಳೆದುಕೊಂಡು ಅನಾಥವಾಗಿದ್ದ 46 ಗಿಳಿಮರಿಗಳ ರಕ್ಷಣೆಗಾಗಿ ನಗರದ 'ಗೋಪಾಲನ್ ಕಾಲೇಜ್ ಆಫ್ ಎಂಜಿನಿಯರಿಂಗ್ ಮತ್ತು ಮ್ಯಾನೇಜ್‌ಮೆಂಟ್' ವಿದ್ಯಾರ್ಥಿಗಳು ವಿನೂತನ ತಂತ್ರಜ್ಞಾನದ ಮೂಲಕ ಕೃತಕ 'ತಾಯಿ ಗಿಳಿ'ಯ ಮಾದರಿಯೊಂದನ್ನು ಯಶಸ್ವಿಯಾಗಿ ನಿರ್ಮಿಸಿದ್ದಾರೆ. 3ಆ–ಪ್ರಿಂಟಿಂಗ್ ತಂತ್ರಜ್ಞಾನ ಬಳಸಿ ಸಿದ್ಧಪಡಿಸಿರುವ ಈ ವಿಶೇಷ ಸಾಧನವು ವನ್ಯಜೀವಿ ಸಂರಕ್ಷಣಾ ಕಾರ್ಯಕ್ಕೆ ಬಹುದೊಡ್ಡ ವರದಾನವಾಗಿ ಪರಿಣಮಿಸಿದೆ.



ಈ ವರ್ಷದ ಆರಂಭದಲ್ಲಿ ನಗರದ ವನ್ಯಜೀವಿ ರಕ್ಷಣಾ ಕೇಂದ್ರವೊಂದಕ್ಕೆ ಅತಿ ಸೂಕ್ಷ್ಮ ಸ್ಥಿತಿಯಲ್ಲಿದ್ದ 46 ಭಾರತೀಯ ಗಿಳಿಮರಿಗಳನ್ನು ರಕ್ಷಿಸಿ ತರಲಾಗಿತ್ತು. ತೀರಾ ಚಿಕ್ಕದಾಗಿದ್ದ ಈ ಮರಿಗಳಿಗೆ ನಿರಂತರವಾಗಿ ಆಹಾರ ನೀಡುವ ಅಗತ್ಯವಿತ್ತು. ಆದರೆ, ಸಾಂಪ್ರದಾಯಿಕವಾಗಿ ಸಿರಿಂಜ್ ಮೂಲಕ ಆಹಾರ ಉಣಿಸುವುದು ರಕ್ಷಕರಿಗೆ ದೊಡ್ಡ ಸವಾಲಾಗಿ ಪರಿಣಮಿಸಿತ್ತು. ನೇರವಾಗಿ ಸಿರಿಂಜ್ ಬಳಕೆ ಮಾಡುವುದರಿಂದ ಮರಿಗಳು ತೀವ್ರ ಒತ್ತಡಕ್ಕೆ ಸಿಲುಕುವುದಲ್ಲದೆ, ಅವುಗಳ ನೈಸರ್ಗಿಕ ಬೆಳವಣಿಗೆಯ ಮೇಲೂ ದುಷ್ಪರಿಣಾಮ ಬೀರುವ ಅಪಾಯವಿತ್ತು. ಇದರಿಂದ ಭವಿಷ್ಯದಲ್ಲಿ ಆ ಪಕ್ಷಿಗಳನ್ನು ಮರಳಿ ಕಾಡಿಗೆ ಬಿಡುವುದು ಕಷ್ಟಸಾಧ್ಯ ಎಂಬ ಆತಂಕ ಎದುರಾಗಿತ್ತು. ವನ್ಯಜೀವಿ ರಕ್ಷಕರು ಎದುರಿಸುತ್ತಿದ್ದ ಈ ಸವಾಲಿಗೆ ಸ್ಪಂದಿಸಿದ ಅಂತಿಮ ವರ್ಷದ ಏರೋನಾಟಿಕಲ್ ಎಂಜಿನಿಯರಿಂಗ್ ವಿದ್ಯಾರ್ಥಿಗಳ ತಂಡ, ಕರುಣೆ ಹಾಗೂ ತಂತ್ರಜ್ಞಾನವನ್ನು ಮೇಳೈಸಿ ಈ ವಿಶೇಷ ಸಾಧನವನ್ನು ನಿರ್ಮಿಸಿದೆ. ತಮ್ಮ ತಾಂತ್ರಿಕ ಜ್ಞಾನವನ್ನು ಬಳಸಿಕೊಂಡ ವಿದ್ಯಾರ್ಥಿಗಳು 'ಬಯೋಮಿಮೆಟಿಕ್ ಮದರ್ ಪ್ಯಾರಾಕೀಟ್' (ತಾಯಿ ಗಿಳಿಯನ್ನು ಹೋಲುವ ಸಾಧನ) ಎಂಬ ವಿಶಿಷ್ಟ ಮಾದರಿಯನ್ನು ಅಭಿವೃದ್ಧಿಪಡಿಸಿ, ಮರಿಗಳ ಆರೈಕೆಗೆ ನೀಡಿದ್ದಾರೆ.

# ನಾಲ್ಕು ವಿಶೇಷ ಚಿಕಿತ್ಸಾಲಯಗಳ ಪ್ರಾರಂಭ




ಬೆಂಗಳೂರು

ಸೂಕ್ಷ್ಮ ಸ್ವರೂಪದ ಮತ್ತು ಹೆಚ್ಚು ಗಮನಕ್ಕೆ ಬಾರದ ಆರೋಗ್ಯ ಸಮಸ್ಯೆಗಳನ್ನು ಪರಿಹರಿಸಲು ಫೋರ್ಟಿಸ್ ಹೆಲ್ತ್ ಕೇರ್ ಬೆಂಗಳೂರಿನಲ್ಲಿರುವ ತನ್ನ ಆಸ್ಪತ್ರೆಗಳ ಜಾಲದಲ್ಲಿ ನಾಲ್ಕು ವಿಶೇಷ ಚಿಕಿತ್ಸಾಲಯಗಳನ್ನು ಪ್ರಾರಂಭಿಸಿದೆ.

ರೋಗಿ–ಕೇಂದ್ರಿತ ಮತ್ತು ಸಮಗ್ರ ಆರೋಗ್ಯ ರಕ್ಷಣೆ ಒದಗಿಸುವ ಫೋರ್ಟಿಸ್ ಹೆಲ್ತ್ ಕೇರ್ ನ ಬದ್ಧತೆಯನ್ನು ಇದು ಬಲಪಡಿಸುತ್ತದೆ. ಮ್ಯಾನ್ ಕ್ಲಿನಿಕ್, ಇನ್ ಕಂಟಿನೆನ್ಸ್ ಕ್ಲಿನಿಕ್, ರೆಸ್ಟೋರೇಟಿವ್ ಗೈನಕಾಲಜಿ ಕ್ಲಿನಿಕ್ ಮತ್ತು ಮೊಬೈಲ್ ಲಿಥೊ ಟ್ರಿಪ್ಸಿ ಸೇವೆಗಳನ್ನು ಹೊಸದಾಗಿ ಪರಿಚಯಿಸಲಾಗಿದೆ.

ಸಾಮಾಜಿಕ ಕಳಂಕ ಅಥವಾ ಸೀಮಿತ ಅರಿವಿನಿಂದಾಗಿ ನಿಯಮಿತವಾಗಿ ಚಿಕಿತ್ಸೆ ಪಡೆಯದೆ ಉಳಿಯುವ ಸೂಕ್ಷ್ಮ ಮತ್ತು ಹೆಚ್ಚಾಗಿ ಚರ್ಚಿಸದ ಆರೋಗ್ಯ ಸಮಸ್ಯೆಗಳನ್ನು ಪರಿಹರಿಸಲು ಈ ವಿಶೇಷ ಚಿಕಿತ್ಸಾಲಯಗಳನ್ನು ವಿನ್ಯಾಸಗೊಳಿಸಲಾಗಿದೆ.

ಕರ್ನಾಟಕ ಸರ್ಕಾರದ ವೈದ್ಯಕೀಯ ಶಿಕ್ಷಣ ಸಚಿವ ಶರಣ್ ಪ್ರಕಾಶ್ ಪಾಟೀಲ ಅವರು ಕ್ಲಿನಿಕ್ ಗಳನ್ನು ಉದ್ಘಾಟಿಸಿದರು. ಫೋರ್ಟಿಸ್ ನ ಪ್ರಮುಖ ವೈದ್ಯರು, ಆಸ್ಪತ್ರೆಯ ಉನ್ನತ ಅಧಿಕಾರಿಗಳು, ಸಿಬ್ಬಂದಿ, ರೋಗಿಗಳು ಮತ್ತು ಗಣ್ಯ ಅತಿಥಿಗಳು ಸಮಾರಂಭದಲ್ಲಿ ಉಪಸ್ಥಿತರಿದ್ದರು.

ಲೈಂಗಿಕ ಸ್ವಾಸ್ಥ್ಯ, ಪ್ರಾಸ್ಟೇಟ್ ಆರೋಗ್ಯ, ಸಂತಾನೋತ್ಪತ್ತಿ ಸಮಸ್ಯೆ, ಹಾರ್ಮೋನುಗಳ ಅಸಮತೋಲನ ಮತ್ತು ಜೀವನಶೈಲಿ–ಸಂಬಂಧಿತ ಪರಿಸ್ಥಿತಿಗಳು ಸೇರಿದಂತೆ ಪುರುಷರ ಆರೋಗ್ಯ ಕಾಳಜಿಗಳಿಗೆ ಗಮನ ಕೇಂದ್ರೀಕರಿಸಲು ಮೀಸಲಾದ ಕೇಂದ್ರ ಇದಾಗಿದೆ. ಗೌಪ್ಯತೆ, ಕ್ಲಿನಿಕಲ್ ಶ್ರೇಷ್ಠತೆ ಮತ್ತು ಸಮಗ್ರ, ಬಹುಬಗೆಯ ಚಿಕಿತ್ಸಾ ವಿಧಾನದ ಮೇಲೆ ಇದು ಒತ್ತು ನೀಡಲಿದೆ.

# ‘ಹೊಸ ಹ್ಯುಂಡೈ ವರ್ನಾ’ ಬಿಡುಗಡೆ




ಬೆಂಗಳೂರು

ಪ್ರಮುಖ ಕಾರು ತಯಾರಿಕಾ ಸಂಸ್ಥೆಯಾದ ಹ್ಯುಂಡೈ ಮೋಟಾರ್ ಇಂಡಿಯಾ ಲಿಮಿಟೆಡ್, ತನ್ನ ಹೊಚ್ಚ ಹೊಸ ‘ಹೊಸ ಹ್ಯುಂಡೈ ವರ್ನಾ’ ಕಾರನ್ನು ಮಾರುಕಟ್ಟೆಗೆ ಬಿಡುಗಡೆ ಮಾಡಿದೆ. ಅತ್ಯಾಧುನಿಕ ತಂತ್ರಜ್ಞಾನ ಹಾಗೂ ಆಕರ್ಷಕ ವಿನ್ಯಾಸದೊಂದಿಗೆ ಬಂದಿರುವ ಈ ಹೊಸ ಹ್ಯುಂಡೈ ವರ್ನಾ ಮೂಲಕ ಹ್ಯುಂಡೈ ಕಂಪನಿಯು ಪ್ರೀಮಿಯಂ ಸೆಡಾನ್ ವಿಭಾಗದಲ್ಲಿ ತನ್ನ ಪ್ರಾಬಲ್ಯವನ್ನು ಮತ್ತಷ್ಟು ಗಟ್ಟಿಗೊಳಿಸುವ ಗುರಿ ಹೊಂದಿದೆ.

ಹೊಸ ಹ್ಯುಂಡೈ ವರ್ನಾ ಬಿಡುಗಡೆಯ ಕುರಿತು ಮಾತನಾಡಿರುವ ಹ್ಯುಂಡೈ ಮೋಟಾರ್ ಇಂಡಿಯಾ ಲಿಮಿಟೆಡ್‌ನ ವ್ಯವಸ್ಥಾಪಕ ನಿರ್ದೇಶಕ ಮತ್ತು ಸಿಇಒ ಆದ ಶ್ರೀ ತರುಣ್ ಗಾರ್ಗ್ ಅವರು, “ಹೊಸ ಹ್ಯುಂಡೈ ವರ್ನಾ ಕೇವಲ ಒಂದು ಉತ್ಪನ್ನದ ನವೀಕರಣ ರೂಪ ಮಾತ್ರವೇ ಅಲ್ಲ, ಬದಲಿಗೆ ಇದೊಂದು ನಮ್ಮ ಹೆಮ್ಮೆಯ ಪ್ರತಿರೂಪವಾಗಿದೆ. ಟ್ರೆಂಡ್ ಗಳು ಬದಲಾಗುತ್ತಿರುವ ಮಾರುಕಟ್ಟೆಯಲ್ಲಿ, ನಾವು ಇಂಜಿನಿಯರಿಂಗ್ ಶ್ರೇಷ್ಠತೆ ಮತ್ತು ಚಾಲನಾ ಶ್ರೇಷ್ಠತೆ ಒದಗಿಸಲು ಬದ್ಧರಾಗಿದ್ದೇವೆ. ಅದಕ್ಕೆ ಪೂರಕವಾಗಿ ಹೊಸ ಹ್ಯುಂಡೈ ವರ್ನಾ ಒಂದು ನೈಜ ಕಾರು ಹೇಗಿರಬೇಕು ಎನ್ನುವುದಕ್ಕೆ ಸಾಕ್ಷಿಯಾಗಿದ್ದು, ಅತ್ಯುನ್ನತ ಸ್ಥಿರತೆ, ಸುರಕ್ಷತೆ, ಕಾರ್ಯಕ್ಷಮತೆ ಮತ್ತು ಪ್ರೀಮಿಯಂ ಗುಣ ಹೊಂದಿದೆ. ಯಾವುದೇ ರಾಜಿ ಇಲ್ಲದ ಉತ್ಕೃಷ್ಟ ಕಾರ್ಯಕ್ಷಮತೆಯನ್ನು ಬಯಸುವ ಗ್ರಾಹಕರಿಗಾಗಿ ಇದನ್ನು ವಿನ್ಯಾಸಗೊಳಿಸಲಾಗಿದೆ. ತನ್ನ ಬೋಲ್ಡ್ ವಿನ್ಯಾಸ ಮತ್ತು ಸುಧಾರಿತ ಸುರಕ್ಷತೆಯೊಂದಿಗೆ, ಹೊಸ ಹ್ಯುಂಡೈ ವರ್ನಾ ಭಾರತೀಯ ಗ್ರಾಹಕರಿಗೆ ವಿಶ್ವದರ್ಜೆಯ ತಂತ್ರಜ್ಞಾನ ಮತ್ತು ಸಾಟಿಯಿಲ್ಲದ ಮೌಲ್ಯವನ್ನು ನೀಡುವ ಹ್ಯುಂಡೈನ ಬದ್ಧತೆಯನ್ನು ಸಾರುತ್ತದೆ” ಎಂದು ತಿಳಿಸಿದರು.

# ಅಡುಗೆ ಅನಿಲ ಬೆಲೆ ಏರಿಕೆ ಕಾಂಗ್ರೆಸ್ ಪ್ರತಿಭಟನೆ

ಚಿತ್ರದುರ್ಗ

ಅಡುಗೆ ಅನಿಲ ಬೆಲೆ ಏರಿಸಿರುವ ಕೇಂದ್ರ ಬಿಜೆಪಿ ಸರ್ಕಾರದ ಜನ ವಿರೋಧಿ ನೀತಿ ಖಂಡಿಸಿ ಜಿಲ್ಲಾ ಕಾಂಗ್ರೆಸ್‌ನಿಂದ ಒನಕೆ ಓಬವ್ವ ವೃತ್ತದಲ್ಲಿ ಸೌದೆ ಒಲೆಯಲ್ಲಿ ಅಡುಗಡೆ ಮಾಡುವ ಮೂಲಕ ಮಹಿಳೆಯರು ಪ್ರತಿಭಟನೆ ನಡೆಸಿ ಪ್ರಧಾನಿ ಮೋದಿ ವಿರುದ್ದ ಧಿಕ್ಕಾರಗಳನ್ನು ಕೂಗಿದರು.

ನಗರಾಭಿವೃದ್ದಿ ಪ್ರಾಧಿಕಾರದ ಮಾಜಿ ಅಧ್ಯಕ್ಷ ಆರ್.ಕೆ.ಸರ್ದಾರ್ ಪ್ರತಿಭಟನೆಯನ್ನುದ್ದೇಶಿಸಿ ಮಾತನಾಡಿ ಕಾಂಗ್ರೆಸ್ ಹಿಂದಿನಿಂದಲೂ ಬಡವರು, ರೈತರು, ಜನಸಾಮಾನ್ಯರ ಪರವಾಗಿದೆ. ದೇಶದ ಸ್ವಾತಂತ್ರ್ಯಕ್ಕಾಗಿ ಬ್ರಿಟೀಷರ ವಿರುದ್ದ ನಡೆದ ಹೋರಾಟದಲ್ಲಿ ಮುಂಚೂಣಿಯಲ್ಲಿದ್ದ ಕಾಂಗ್ರೆಸ್‌ಗೆ ದೇಶದ ಹಿತ ಮುಖ್ಯ. ಕೇಂದ್ರದಲ್ಲಿ ಬಿಜೆಪಿ. ಅಧಿಕಾರಕ್ಕೆ ಬಂದಾಗಿನಿಂದಲೂ ಜನಸಾಮಾನ್ಯರು ಬಳಸುವ ಅಗತ್ಯ ವಸ್ತುಗಳ ಬೆಲೆ ಏರಿಸುತ್ತಲೆ ಬರುತ್ತಿದೆ. ಪ್ರತಿನಿತ್ಯವೂ ಅಡುಗೆ ಮನೆಯಲ್ಲಿ ಮಹಿಳೆಯರಿಗೆ ಬೇಕಾಗಿರುವ ಅಡುಗೆ ಅನಿಲ ಏರಿಕೆಯಿಂದ ಬಡವರು, ಮಧ್ಯಮ ವರ್ಗದವರು ತತ್ತರಿಸಿದ್ದಾರೆ. ಕೂಡಲೆ ಬೆಲೆ ಏರಿಕೆಯನ್ನು ಹಿಂದಕ್ಕೆ ಪಡೆಯಬೇಕೆಂದು ಒತ್ತಾಯಿಸಿದರು.

ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಎಂ.ಕೆ.ತಾಜ್‌ಪೀರ್ ಮಾತನಾಡಿ ಎಐಸಿಸಿ. ಕೆಪಿಸಿಸಿ. ಸೂಚನೆ ಮೇರೆಗೆ ರಾಜ್ಯಾದ್ಯಂತ ಅಡುಗೆ ಅನಿಲ ಬೆಲೆ ಏರಿಕೆ ವಿರುದ್ದ ಪ್ರತಿಭಟನೆ ನಡೆಸಲಾಗುತ್ತಿದೆ. 2014 ರಲ್ಲಿ ಅಧಿಕಾರಕ್ಕೆ ಬಂದ ಎನ್‌ಡಿಎ ಅಚ್ಚಾದಿನ್ ತರುತ್ತೇವೆಂದು ಹೇಳಿಕೊಳ್ಳುತ್ತ ನಾಲ್ಕು ನೂರು ರೂ.ಗಳಿದ್ದ ಗ್ಯಾಸ್ ಸಿಲಿಂಡರ್ ಬೆಲೆಯನ್ನು ಪ್ರತಿ ವರ್ಷವೂ ಹೆಚ್ಚಿಸುತ್ತಲೆ ಬರುತ್ತಿರುವುದರಿಂದ ಈಗ ಒಂದು ಸಾವಿರ ರೂ.ಗೆ ಮುಟ್ಟಿದೆ. ರಂಜಾನ್ ಮಾಸದಲ್ಲಿ ಅಮೇರಿಕಾ ಇಸ್ರೇಲ್ ಕೂಡಿಕೊಂಡು ಇರಾನ್ ಮೇಲೆ ದಾಳಿ ನಡೆಸುತ್ತಿರುವುದರಿಂದ ಅಪಾರ ಪ್ರಮಾಣದ ಹಾನಿಯಾಗಿದ್ದು, ಅಮಾಯಕರು ಬಲಿಯಾಗುತ್ತಿದ್ದಾರೆಂದು ಹೇಳಿದರು.

ನಮ್ಮ ದೇಶದ ಪ್ರಧಾನಿ ನರೇಂದ್ರಮೋದಿ ಇಸ್ರೇಲ್‌ಗೆ ಹೋಗಿ ಅಮೇರಿಕಾ ಭಾರತದ ಫಾದರ್‌ಲ್ಯಾಂಡ್ ಎಂದು ಹೊಗಳುತ್ತ ಭಾರತಕ್ಕೆ ಅವಮಾನ ಮಾಡುತ್ತಿರುವುದು ಅತ್ಯಂತ ಖಂಡನೀಯ.

ನಮ್ಮ ದೇಶದ ಮೇಲೆ ಅಮೇರಿಕಾ ಅಧ್ಯಕ್ಷ ಟ್ರಂಪ್ ಸವಾರಿ ಮಾಡುತ್ತಿದ್ದರು ಮೋದಿ ಮೌನ ವಹಿಸಿರುವುದು ಏಕೆ? ಅಗತ್ಯ ವಸ್ತುಗಳ ಬೆಲೆ ಏರಿಸಿ ಶ್ರೀಮಂತರಿಗೆ ಅನುಕೂಲ ಮಾಡುತ್ತಿದ್ದಾರೆ. ತಕ್ಷಣವೆ ಗ್ಯಾಸ್ ಸಿಲಿಂಡರ್ ಬೆಲೆ ಏರಿಕೆಯನ್ನು ಹಿಂದಕ್ಕೆ ಪಡೆಯಬೇಕೆಂದು ಆಗ್ರಹಿಸಿದರು.

ಜಿಲ್ಲಾ ಕಾಂಗ್ರೆಸ್ ಕಾರ್ಯಾಧ್ಯಕ್ಷ ಕೆ.ಎಂ. ಹಾಲಸ್ವಾಮಿ ಮಾತನಾಡುತ್ತ ಕೇಂದ್ರದಲ್ಲಿ ಬಿಜೆಪಿ. ಅಧಿಕಾರಕ್ಕೆ ಬಂದಾಗಿನಿಂದಲೂ ಸುಳ್ಳು ಹೇಳಿರುವುದೆ ದೊಡ್ಡ ಸಾಧನೆ. ಕಾಂಗ್ರೆಸ್ ಪಕ್ಷ ಜನರಿಗೆ ನೀಡಿರುವ ಸಬ್ಸಿಡಿಯನ್ನೆಲ್ಲಾ ಕೇಂದ್ರ ಬಿಜೆಪಿ. ರದ್ದುಪಡಿಸಿ ಬಡವರ ತಲೆ ಮೇಲೆ ಚಪ್ಪಡಿ ಹಾಕುತ್ತಿದೆ. ಪೆಟ್ರೋಲ್, ಡೀಸೆಲೆ ಬೆಲೆ ಹೆಚ್ಚಿಸಿದ್ದು, ಸಾಕಾಗದೆ ಅಡುಗೆ ಅನಿಲ ಬೆಲೆಯನ್ನು ಏರಿಸಿ ಜನಸಾಮಾನ್ಯರ ಜೇಬಿಗೆ ಕತ್ತರಿ ಹಾಕಿದೆ ಎಂದು ಪ್ರಧಾನಿ ಮೋದಿರವರ ನಡೆಯನ್ನು ಟೀಕಿಸಿದರು.

ಗ್ಯಾರೆಂಟಿ ಅನುಷ್ಟಾನಗಳ ಸಮಿತಿ ಅಧ್ಯಕ್ಷ ಆರ್.ಶಿವಣ್ಣ ಮಾತನಾಡಿ ಉಜ್ವಲ ಯೋಜನೆಯನ್ನು ಜಾರಿಗೆ ತರುವ ನೆಪದಲ್ಲಿ ಬಿಜೆಪಿ. ಈಗ ಅಡುಗೆ ಅನಿಲ ಬೆಲೆಯನ್ನು ಅರವತ್ತು ರೂ.ಗಳಿಗೆ ಹೆಚ್ಚಿಸಿದೆ. ಮೊದಲೆ ಅಗತ್ಯ ವಸ್ತುಗಳ ಬೆಲೆ ಏರಿಕೆಯಿಂದ ತತ್ತರಿಸಿರುವ ಬಡವರಿಗೆ ಗಾಯದ ಮೇಲೆ ಬರೆ ಎಳೆದಂತಾಗಿದೆ. ಕೇಂದ್ರದಲ್ಲಿ ಬಿಜೆಪಿ.ಅಧಿಕಾರಕ್ಕೆ ಬಂದಾಗಿನಿಂದಲೂ ಬೆಲೆ ಏರಿಕೆ ಬಿಸಿಯಿಂದ ಬಡವರು ತತ್ತರಿಸಿದ್ದಾರೆಂದರು.

# ಕಠಿಣ ಪರಿಶ್ರಮದ ಅಧ್ಯಯನದಿಂದ ಗುರಿ ಮುಟ್ಟಲು ಸಾಧ್ಯ: ಇಓ

ತುಮಕೂರು

"ಇಂದಿನ ತೀವ್ರ ಸ್ಪರ್ಧಾತ್ಮಕ ಯುಗದಲ್ಲಿ ಕೇವಲ ಅಂಕಗಳನ್ನು ಗಳಿಸಿದರೆ ಸಾಲದು. ವಿದ್ಯಾರ್ಥಿಗಳು ದೃಢ ಸಂಕಲ್ಪ ಮತ್ತು ಕಠಿಣ ಪರಿಶ್ರಮದಿಂದ ಅಭ್ಯಾಸ ಮಾಡಿದರೆ ಮಾತ್ರ ಬದುಕಿನಲ್ಲಿ ಉನ್ನತ ಗುರಿ ತಲುಪಲು ಸಾಧ್ಯ," ಎಂದು ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ (ಇಓ) ಲಕ್ಷ್ಮೀನಾರಾಯಣ್ ಹೇಳಿದರು.

ನಗರದ ಡಾ. ಗುಬ್ಬಿ ವೀರಣ್ಣ ರಂಗಮಂದಿರದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳ ನಿಲಯಾರ್ಥಿಗಳಿಗಾಗಿ ಏರ್ಪಡಿಸಿದ್ದ 'ಸ್ಪರ್ಧಾತ್ಮಕ ಪರೀಕ್ಷೆ ಹಾಗೂ ವೃತ್ತಿ ಮಾರ್ಗದರ್ಶನ ತರಬೇತಿ ಕಾರ್ಯಾಗಾರ' ಉದ್ಘಾಟಿಸಿ ಅವರು ಮಾತನಾಡಿದರು.



ಹೆತ್ತವರ ಆಸೆ ಆಸ್ತಿಯಾಗಲಿ: "ಗ್ರಾಮೀಣ ಭಾಗದ ಪೋಷಕರು ತಮ್ಮ ಕಷ್ಟಗಳನ್ನು ಮರೆತು ಮಕ್ಕಳ ಭವಿಷ್ಯಕ್ಕಾಗಿ ನಗರಗಳಿಗೆ ಕಳುಹಿಸಿರುತ್ತಾರೆ. ಹೆತ್ತವರ ಆಸೆಗಳನ್ನು ಈಡೇರಿಸುವುದು ಪ್ರತಿಯೊಬ್ಬ ವಿದ್ಯಾರ್ಥಿಯ ಜವಾಬ್ದಾರಿ. ಈ ಸುವರ್ಣ ಅವಕಾಶವನ್ನು ಕೈಚೆಲ್ಲಿದರೆ ಮುಂದೆ ಪಶ್ಚಾತ್ತಾಪ ಪಡಬೇಕಾಗುತ್ತದೆ. ವಿದ್ಯಾರ್ಥಿಗಳು ಪೋಷಕರಿಗೆ ಹೊರೆಯಾಗದೆ, ಅವರ ಪಾಲಿನ ಆಸ್ತಿಯಾಗಬೇಕು," ಎಂದು ಅವರು ಕರೆ ನೀಡಿದರು.

ಮೊಬೈಲ್ ಗೀಳಿನ ಬಗ್ಗೆ ಎಚ್ಚರಿಕೆ: "ಇತ್ತೀಚಿನ ದಿನಗಳಲ್ಲಿ ಯುವಜನಾಂಗ ಮೊಬೈಲ್ ಗೀಳಿಗೆ ಮಾರುಹೋಗಿ ಅಮೂಲ್ಯ ಸಮಯವನ್ನು ವ್ಯರ್ಥ ಮಾಡುತ್ತಿದೆ. ದಿನಕ್ಕೆ ಕನಿಷ್ಠ 8 ರಿಂದ 10 ಗಂಟೆಗಳ ಕಾಲ ಸತತ ಅಧ್ಯಯನಕ್ಕೆ ಮೀಸಲಿಡಬೇಕು. ಹತ್ತಾರು ಉಳಿ ಏಟು ತಿಂದಾಗ ಮಾತ್ರ ಒಂದು ಕಲ್ಲು ಅದ್ಭುತ ಶಿಲೆಯಾಗಲು ಸಾಧ್ಯ ಎಂಬ ಸತ್ಯವನ್ನು ವಿದ್ಯಾರ್ಥಿಗಳು ಅರಿತುಕೊಳ್ಳಬೇಕು," ಎಂದರು.

ಕಾರ್ಯಾಗಾರದಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧಿಕಾರಿ ರಂಗಸ್ವಾಮಿ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಜಿಲ್ಲಾ ಸಂಯೋಜಕ ಶಶಿಧರ್, ಸಂಪನ್ಮೂಲ ವ್ಯಕ್ತಿಗಳಾದ ನಾಗರಾಜು, ಉದಯ್ ಸಾಗರ್ ಸೇರಿದಂತೆ ಅನೇಕರು ಉಪಸ್ಥಿತರಿದ್ದರು. ನಿಲಯ ಪಾಲಕ ಅನಂತರಾಜು ಸ್ವಾಗತಿಸಿದರು.

**ಇಓ ನೀಡಿದ ಪಂಚಸೂತ್ರಗಳು**

ದೃಢ ಸಂಕಲ್ಪ: ಸೋಲಿಗೆ ಅಂಜದೆ ಗುರಿಯತ್ತ ಸಾಗುವ ಛಲವಿರಲಿ.

ಸಮಯ ಪ್ರಜ್ಞೆ: ದಿನಕ್ಕೆ 8-10 ಗಂಟೆಗಳ ಕಾಲ ನಿರಂತರ ಅಧ್ಯಯನ ಮಾಡಿ.

ಸರಳ ಜೀವನ: ವಿದ್ಯಾರ್ಥಿ ಜೀವನವನ್ನು ಇತಿಮಿತಿಯಲ್ಲಿ ಅನುಭವಿಸಿ.

ತಂತ್ರಜ್ಞಾನದ ಬಳಕೆ: ಮೊಬೈಲ್ ಗೀಳಿನಿಂದ ದೂರವಿದ್ದು, ಅಗತ್ಯ ಮಾಹಿತಿಗೆ ಮಾತ್ರ ಬಳಸಿ.

ಪೋಷಕರ ಗೌರವ: ಹೆತ್ತವರ ತ್ಯಾಗವನ್ನು ಸದಾ ಸ್ಮರಿಸಿ, ಅವರ ನಂಬಿಕೆ ಉಳಿಸಿಕೊಳ್ಳಿ.

# 'ಮಣ್ಣಿನ ಋಣ ತೀರಿಸಲು ಕರವೇ ಸನ್ನದ್ಧ'



ವಿಜಯಪುರ

"ಕನ್ನಡಪರ ಸಂಘಟನೆಗಳು ಕೇವಲ ಭಾಷೆಯ ಉಳಿವಿಗಾಗಿ ಮಾತ್ರವಲ್ಲದೆ, ನಾಡಿನ ಜ್ವಲಂತ ಸಮಸ್ಯೆಗಳ ನಿವಾರಣೆಗಾಗಿಯೂ ಸಕ್ರಿಯವಾಗಿ ಹೋರಾಟ ಮಾಡಬೇಕಿದೆ. ಪ್ರಸ್ತುತ ಸಂದರ್ಭದಲ್ಲಿ ಕನ್ನಡಿಗರು ಒಂದಾಗುವುದು ಅನಿವಾರ್ಯವಾಗಿದೆ," ಎಂದು ಕನ್ನಡಪರ ಹೋರಾಟಗಾರ ಬಿ.ಕೆ. ನಾರಾಯಣಸ್ವಾಮಿ ಅಭಿಪ್ರಾಯಪಟ್ಟರು.

ಪಟ್ಟಣದ ಪ್ರವಾಸಿಮಂದಿರದಲ್ಲಿ ಹಮ್ಮಿಕೊಳ್ಳಲಾಗಿದ್ದ ಕರ್ನಾಟಕ ರಕ್ಷಣಾ ವೇದಿಕೆಯ (ಟಿ.ಎ. ನಾರಾಯಣಗೌಡರ ಬಣ) ಕಾರ್ಯಕರ್ತರ ಸಭೆಯಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಜನಮಾನಸದಲ್ಲಿ ಗೌರವ ಮೂಡಲಿ: "ಸಂಘಟನೆಯ ಹೆಸರಿನಲ್ಲಿ ಯಾರ ಮೇಲೂ ದಬ್ಬಾಳಿಕೆ ಅಥವಾ ದೌರ್ಜನ್ಯ ಮಾಡಬಾರದು. ಕನ್ನಡಪರ ಸಂಘಟನೆ ಎಂದ ಕೂಡಲೇ ಜನರಲ್ಲಿ ಗೌರವದ ಭಾವನೆ ಬರುವಂತೆ ಕೆಲಸ ಮಾಡಬೇಕಿದೆ. ಶೋಷಿತರು, ನಿರ್ಗತಿಕರು ಮತ್ತು ಅನ್ಯಾಯಕ್ಕೆ ಒಳಗಾದ ಕಟ್ಟಕಡೆಯ ವ್ಯಕ್ತಿಗೂ ನ್ಯಾಯ ಕೊಡಿಸುವ ಕೆಲಸವನ್ನು ನಮ್ಮ ಕಾರ್ಯಕರ್ತರು ಮಾಡಬೇಕು. ಅವಕಾಶ ವಂಚಿತರನ್ನು ಮುಖ್ಯವಾಹಿನಿಗೆ ತರಲು ಶಿಕ್ಷಣ ಕ್ಷೇತ್ರಕ್ಕೆ ಹೆಚ್ಚಿನ ಆದ್ಯತೆ ನೀಡಬೇಕು," ಎಂದು ಅವರು ಕರೆ ನೀಡಿದರು.

ಮಣ್ಣಿನ ಋಣ ತೀರಿಸಿ: ತಾಲ್ಲೂಕು ರಕ್ಷಣಾ ವೇದಿಕೆಯ ಗೌರವಾಧ್ಯಕ್ಷ ಲಕ್ಷ್ಮೀಅನಾರಾಯಣ ಮಾತನಾಡಿ, "ಕನ್ನಡಿಗರು ಸ್ವಾಭಿಮಾನಿಗಳು ಮತ್ತು ಶ್ರೀಮಂತ ಹೃದಯದವರು. ಆದರೆ ನೆಲ, ಜಲ, ಗಡಿ ವಿಚಾರದಲ್ಲಿ ಅನ್ಯಾಯವಾದಾಗ ಗಟ್ಟಿ ಧ್ವನಿಯಿಂದ ಹೋರಾಡುವ ಶಕ್ತಿಯೂ ನಮಗಿದೆ. ಈ ಮಣ್ಣಿನಲ್ಲಿ ಹುಟ್ಟಿದ ಪ್ರತಿಯೊಬ್ಬರಿಗೂ ಮಣ್ಣಿನ ಋಣ ತೀರಿಸುವ ಜವಾಬ್ದಾರಿಯಿದೆ. ಕಾರ್ಯಕರ್ತರು ಈ ನಿಟ್ಟಿನಲ್ಲಿ ಕಾರ್ಯಪ್ರವೃತ್ತರಾಗಬೇಕು," ಎಂದರು.

ಸಭೆಯಲ್ಲಿ ತಾಲ್ಲೂಕು ಅಧ್ಯಕ್ಷ ಅನಿಲ್ ಗೌಡ, ಕಾರ್ಯಾಧ್ಯಕ್ಷ ಹುರುಳುಗುರ್ಕಿ ಮಂಜುನಾಥ್, ಉಪಾಧ್ಯಕ್ಷರಾದ ಮುನಿಂದ್ರ, ವೆಂಕಟೇಗೌಡ, ಪ್ರಧಾನ ಕಾರ್ಯದರ್ಶಿ ಮಂಜುನಾಥ್, ವಿಜಯಪುರ ಗೌರವ ಅಧ್ಯಕ್ಷ ಸುರೇಶ್, ಹೋಬಳಿ ಅಧ್ಯಕ್ಷ ಪ್ರೇಮ್ ಕುಮಾರ್ ಹಾಗೂ ಟೌನ್ ಅಧ್ಯಕ್ಷ ರಾಜಣ್ಣ ಸೇರಿದಂತೆ ಅನೇಕರು ಹಾಜರಿದ್ದರು.

# 'ಸಮಾನತೆ ಎನ್ನುವುದು ಕೇವಲ ಭಾಷಣಕ್ಕೆ ಸೀಮಿತವಾಗದಿರಲಿ'

ಮುಳಬಾಗಿಲು

"ಸಮಾನತೆ ಎನ್ನುವುದು ಕೇವಲ ಭಾಷಣಕ್ಕೆ ಸೀಮಿತವಾಗಬಾರದು. ಅದು ನಮ್ಮ ಮನಸ್ಸಿನಲ್ಲಿ ಮತ್ತು ಮನೆಗಳಲ್ಲಿ ಮೂಡಿಬರಬೇಕು. ಜಾತಿ ಭೇದವಿಲ್ಲದೆ, ಮೇಲು– ಕೀಳು ಎಂಬ ಭಾವನೆ ತೊರೆದು ಎಲ್ಲರನ್ನೂ ಸಮಾನವಾಗಿ ಕಂಡಾಗ ಮಾತ್ರ ಸಮ ಸಮಾಜ ನಿರ್ಮಾಣವಾಗುತ್ತದೆ," ಎಂದು ಕೋಲಾರ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರೊಫೆಸರ್ ತಿಲಕ್ ತಿಳಿಸಿದರು.

ತಾಲ್ಲೂಕಿನ ಆಲಂಗೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯ ವಿ. ಅಗ್ರಹಾರ ಗ್ರಾಮದಲ್ಲಿ ಲೇಖಕ ಪಿ. ನಾರಾಯಣಸ್ವಾಮಿ (ಜಯಸಿಂಹ) ಅವರ ಮನೆಯ ಬಳಿ 'ಅರಿವು ಭಾರತ' ಸಂಸ್ಥೆಯ ವತಿಯಿಂದ ಹಮ್ಮಿಕೊಂಡಿದ್ದ 'ಸಮಾನತೆಗಾಗಿ ಸಹಭೋಜನ' ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.




ಅಸ್ಪೃಶ್ಯತೆ ನಿವಾರಣೆಗೆ ಪಣ: "ಇಂದಿಗೂ ಹಳ್ಳಿಗಳಲ್ಲಿ ದಲಿತರನ್ನು ಮನೆಯೊಳಗೆ ಆಹ್ವಾನಿಸದೆ ಹೊರಗೆ ನಿಲ್ಲಿಸಿ ಮಾತನಾಡುವ ಅನಿಷ್ಟ ಪದ್ಧತಿ ಜೀವಂತವಾಗಿದೆ. ಇದರಿಂದ ಆಗುವ ನೋವನ್ನು ಅರಿತುಕೊಂಡಿರುವ ಅರಿವು ಶಿವಪ್ಪ ಅವರು ಕಳೆದ 11 ವರ್ಷಗಳಿಂದ ಅಸ್ಪೃಶ್ಯತೆ ನಿವಾರಣೆ, ದಲಿತರ ಗೃಹಪ್ರವೇಶ ಮತ್ತು ಸಹಭೋಜನದಂತಹ ಕ್ರಾಂತಿಕಾರಿ ಕಾರ್ಯಕ್ರಮಗಳನ್ನು ನಡೆಸುತ್ತಿರುವುದು ಶ್ಲಾಘನೀಯ," ಎಂದು ಪ್ರೊ. ತಿಲಕ್ ಮೆಚ್ಚುಗೆ ವ್ಯಕ್ತಪಡಿಸಿದರು.

ಗ್ರಾಮರತ್ನ ಪುರಸ್ಕಾರ: ವಿದ್ಯಾವಂತ ಪದವೀಧರರಾದ ಪಿ. ನಾರಾಯಣಸ್ವಾಮಿ ಅವರು ತಮ್ಮ ಮನೆಯಲ್ಲಿ ಈ ಸಹಭೋಜನ ಕಾರ್ಯಕ್ರಮ ಆಯೋಜಿಸುವ ಮೂಲಕ ಗ್ರಾಮಕ್ಕೆ ಮಾದರಿಯಾಗಿದ್ದಾರೆ. ಇವರ ಸಮಾಜಮುಖಿ ಸೇವೆಯನ್ನು ಗುರುತಿಸಿ ಅರಿವು ಭಾರತ ಸಂಸ್ಥೆಯ ವತಿಯಿಂದ ಅವರಿಗೆ 'ಗ್ರಾಮರತ್ನ' ಪುರಸ್ಕಾರ ನೀಡಿ ಗೌರವಿಸಲಾಯಿತು. ಸನ್ಮಾನ ಸ್ವೀಕರಿಸಿ ಮಾತನಾಡಿದ ನಾರಾಯಣಸ್ವಾಮಿ, "ಗ್ರಾಮದ ಅಭಿವೃದ್ಧಿ ಮತ್ತು ಸಮಾನತೆಗಾಗಿ ನಾನು ಸದಾ ಕೆಲಸ ಮಾಡುತ್ತೇನೆ," ಎಂದು ಪಣತೊಟ್ಟರು.

ಕಾರ್ಯಕ್ರಮದಲ್ಲಿ ಅರಿವು ಭಾರತ ಮುಖ್ಯಸ್ಥ ಅರಿವು ಶಿವಪ್ಪ, ಪ್ರಾಂಶುಪಾಲ ಡಿ. ಶ್ರೀನಿವಾಸಲು, ವಕೀಲ ಮಂಜು ಕನ್ನಿಕಾ, ಗ್ರಾ.ಪಂ ಸದಸ್ಯ ರಾಮಕೃಷ್ಣಪ್ಪ, ಮುಖಂಡರಾದ ಬಾಬು, ರಘುಪತಿ, ಚಾಮರೆಡ್ಡಿಹಳ್ಳಿ ಗಣೇಶ್ ಸೇರಿದಂತೆ ಗ್ರಾಮದ ನೂರಾರು ಸಾರ್ವಜನಿಕರು ಭಾಗವಹಿಸಿ ಒಟ್ಟಾಗಿ ಸಹಭೋಜನ ಮಾಡಿದರು.

# ಶ್ರೀವ್ಯಾಸರಾಜ ಗುರುಸಾರ್ವಭೌಮರ ಆರಾಧನಾ ಮಹೋತ್ಸವ



ಬಳ್ಳಾರಿ

ಶ್ರೀವ್ಯಾಸರಾಜ ಗುರುಸಾರ್ವಭೌಮರ 487ನೇ ಆರಾಧನಾ ಮಹೋತ್ಸವದ ಅಂಗವಾಗಿ ಆನೆಗುಂದಿಯ ಪವಿತ್ರ ನವವೃಂದಾವನ ಗಡ್ಡೆಯಲ್ಲಿ ಬಳ್ಳಾರಿಯ ಶ್ರೀವ್ಯಾಸರಾಜ ಭಜನಾ ಮಂಡಳಿಯ ವತಿಯಿಂದ 'ಶ್ರೀವ್ಯಾಸನಮನ' ಎಂಬ ವಿಶಿಷ್ಟ ನೃತ್ಯ ರೂಪಕ ಸೇವೆ ಜರುಗಿತು.

ವಿಜಯಲಕ್ಷ್ಮೀ ಸತ್ಯನಾರಾಯಣರಾವ್ ಅವರ ನೇತೃತ್ವದಲ್ಲಿ ನಡೆದ ಈ ಕಾರ್ಯಕ್ರಮದಲ್ಲಿ ಭಜನಾ ಮಂಡಳಿಯ ಸುಮಾರು 70 ಸದಸ್ಯರ ತಂಡವು ಭಾಗವಹಿಸಿ, ಎರಡು ತಾಸುಗಳ ಕಾಲ ಅತ್ಯಂತ ವೈಭವೋಪೇತವಾಗಿ ನೃತ್ಯ ಮತ್ತು ಭಜನಾ ಸೇವೆಯನ್ನು ಸಮರ್ಪಿಸಿದರು.

ಧಾರ್ಮಿಕ ವಿಧಿವಿಧಾನಗಳ ಭಕ್ತಿ ಪರಾಕಾಷ್ಠೆ: ಇತ್ತ ಬಳ್ಳಾರಿಯ ಶ್ರೀ ವ್ಯಾಸರಾಜ ಮಠದಲ್ಲಿ ಆರಾಧನೆಯ ನಿಮಿತ್ತ ವಿಶೇಷ ಧಾರ್ಮಿಕ ಕಾರ್ಯಕ್ರಮಗಳು ಜರುಗಿದವು. ಮುಂಜಾನೆ ಅಷ್ಟೋತ್ತರ ಪಂಚಾಮೃತಾಭಿಷೇಕ, ವಿಶೇಷ ಅಲಂಕಾರ ಹಾಗೂ ಬ್ರಾಹ್ಮಣ ಭೋಜನ ನೆರವೇರಿತು. ಸಂಜೆ ಶ್ರೀ ಸಮೀರಾಚಾರ್ ಅವರಿಂದ ದಾಸವಾಣಿ ಕಾರ್ಯಕ್ರಮ ಹಾಗೂ ನೂತನ ಪಂಚಾಂಗ ಬಿಡುಗಡೆ, ಸ್ವಸ್ತಿವಾಚನ ಮುಂತಾದ ಕಾರ್ಯಕ್ರಮಗಳು ಭಕ್ತರ ಸಮ್ಮುಖದಲ್ಲಿ ಶಾಸ್ತ್ರೋಕ್ತವಾಗಿ ನಡೆದವು.

ಜಾಗತಿಕ ಮಟ್ಟದಲ್ಲಿ ಪ್ರಸಾರ: ಅಮೆರಿಕದ 'ದಿ ವರ್ಲ್ಡ್ ಫೋರಂ ಆಫ್ ವ್ಯಾಸರಾಜ ಡಿವೋಟೀಸ್ ಮುನಿತ್ರಯ' ಯುಟ್ಯೂಬ್ ವಾಹಿನಿಯ ವಿಶೇಷ ಅಪೇಕ್ಷೆಯಂತೆ, ಬಳ್ಳಾರಿ ಭಜನಾ ಮಂಡಳಿಯ ಈ ನೃತ್ಯ ಮತ್ತು ಭಜನಾ ಸೇವೆಯನ್ನು ಉತ್ತರಾಧನೆಯ ಪ್ರಯುಕ್ತ ಜಾಗತಿಕ ಮಟ್ಟದಲ್ಲಿ ಪ್ರಸಾರ ಮಾಡಲಾಯಿತು. ವಿಜಯಲಕ್ಷ್ಮಿ ಸತ್ಯನಾರಾಯಣರಾವ್ ಅವರ ಪರಿಶ್ರಮದಿಂದ ಮೂಡಿಬಂದ ಈ ದೃಶ್ಯಕಾವ್ಯವು ಅಂತರರಾಷ್ಟ್ರೀಯ ಮಟ್ಟದ ವ್ಯಾಸರಾಜ ಭಕ್ತರ ಮೆಚ್ಚುಗೆಗೆ ಪಾತ್ರವಾಗಿದೆ.

# ಒಳಮೀಸಲಾತಿ ಜಾರಿಗೆ ರಣಕಹಳೆ; ಬೈಕ್ ರ್‍ಯಾಲಿ ಮೂಲಕ ಬೃಹತ್ ಪ್ರತಿಭಟನೆ

ತಿಪಟೂರು

"ಒಳಮೀಸಲಾತಿ ಎನ್ನುವುದು ಯಾರೂ ನೀಡುವ ಭಿಕ್ಷೆಯಲ್ಲ, ಅದು ನಮ್ಮ ಸಾಂವಿಧಾನಿಕ ಹಕ್ಕು. ಸರ್ಕಾರವು ಕೂಡಲೇ ಒಳಮೀಸಲಾತಿಯನ್ನು ಪೂರ್ಣ ಪ್ರಮಾಣದಲ್ಲಿ ಜಾರಿಗೊಳಿಸಬೇಕು," ಎಂದು ಒತ್ತಾಯಿಸಿ ಮಾದರ ಮಹಾಸಭಾ ಹಾಗೂ ವಿವಿಧ ದಲಿತ ಸಂಘಟನೆಗಳ ವತಿಯಿಂದ ಪಟ್ಟಣದ ತಾಲ್ಲೂಕು ಆಡಳಿತ ಸೌಧದ ಮುಂಭಾಗ ಬೃಹತ್ ಪ್ರತಿಭಟನೆ ನಡೆಸಲಾಯಿತು.

ನಗರದ ಡಾ. ಬಿ.ಆರ್. ಅಂಬೇಡ್ಕರ್ ವೃತ್ತದಿಂದ ಸಾವಿರಾರು ಸಂಖ್ಯೆಯಲ್ಲಿ ಜಮಾಯಿಸಿದ ಪ್ರತಿಭಟನಾಕಾರರು ಬೈಕ್ ರ್‍ಯಾಲಿ ಮೂಲಕ ತಾಲ್ಲೂಕು ಕಚೇರಿಗೆ ತೆರಳಿ ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗಿದರು.



ಸರ್ಕಾರಕ್ಕೆ ದ್ರೋಹದ ಹಣೆಪಟ್ಟಿ: ಪ್ರತಿಭಟನೆಯನ್ನುದ್ದೇಶಿಸಿ ಮಾತನಾಡಿದ ಮಾದರ ಮಹಾಸಭಾ ಅಧ್ಯಕ್ಷ ಕೆ.ಎಂ. ಶಾಂತಪ್ಪ, "ಮಾದಿಗರ ಮತ ಪಡೆದು ಅಧಿಕಾರಕ್ಕೆ ಬಂದಿರುವ ಕಾಂಗ್ರೆಸ್ ಸರ್ಕಾರ, ಈಗ ಒಳಮೀಸಲಾತಿ ಜಾರಿಗೆ ಕೋರ್ಟ್ ಪ್ರಕರಣಗಳ ನೆಪವೊಡ್ಡಿ ನಾಟಕವಾಡುತ್ತಿದೆ. ತೆಲಂಗಾಣ ಮತ್ತು ಆಂಧ್ರಪ್ರದೇಶಗಳಲ್ಲಿ ಒಳಮೀಸಲಾತಿ ಜಾರಿಯಾಗಿದ್ದರೂ ಕರ್ನಾಟಕದಲ್ಲಿ ವಿಳಂಬ ಮಾಡುತ್ತಿರುವುದು ಸರಿಯಲ್ಲ. ಪಟ್ಟಭದ್ರ ಹಿತಾಸಕ್ತಿಯುಳ್ಳ ಕೆಲವು ಸಚಿವರ ಕುತಂತ್ರಕ್ಕೆ ಸರ್ಕಾರ ಬಲಿಯಾಗುತ್ತಿದೆ," ಎಂದು ಆಕ್ರೋಶ ವ್ಯಕ್ತಪಡಿಸಿದರು.

ನೇಮಕಾತಿ ಪ್ರಕ್ರಿಯೆಗೆ ತಡೆ ನೀಡಲು ಆಗ್ರಹ: ಮಾದಿಗ ದಂಡೋರಾ ಅಧ್ಯಕ್ಷ ಕುಪ್ಪಾಳು ರಂಗಸ್ವಾಮಿ ಮಾತನಾಡಿ, "ಒಳಮೀಸಲಾತಿ ಜಾರಿಯಾಗುವವರೆಗೆ ಯಾವುದೇ ಸರ್ಕಾರಿ ಉದ್ಯೋಗ ನೇಮಕಾತಿ ಪ್ರಕ್ರಿಯೆ ನಡೆಸಬಾರದು. ಸಮುದಾಯದ ಆರ್ಥಿಕ ಪ್ರಗತಿಯನ್ನು ಸಹಿಸದವರು ಒಳಮೀಸಲಾತಿಯನ್ನು ತಡೆಯಲು ಯತ್ನಿಸುತ್ತಿದ್ದಾರೆ. ನಮ್ಮ ಸಮುದಾಯದ ಶೇ 6ರಷ್ಟು ಪಾಲನ್ನು ನ್ಯಾಯಯುತವಾಗಿ ನೀಡಬೇಕು," ಎಂದು ಒತ್ತಾಯಿಸಿದರು.

ಆಯೋಗಗಳ ವರದಿ ಜಾರಿಯಾಗಲಿ: ದಲಿತ ಸಂಘರ್ಷ ಸಮಿತಿ ಜಿಲ್ಲಾ ಸಂಚಾಲಕ ನಾಗತೀಹಳ್ಳಿ ಕೃಷ್ಣಮೂರ್ತಿ ಮಾತನಾಡಿ, "ನ್ಯಾ. ಎ.ಜೆ. ಸದಾಶಿವ ಆಯೋಗ ಸೇರಿದಂತೆ ಹಲವು ಸಮಿತಿಗಳು ಮಾದಿಗರಿಗೆ ಆಗಿರುವ ಅನ್ಯಾಯವನ್ನು ಎತ್ತಿ ತೋರಿಸಿವೆ. ಸಾಮಾಜಿಕ ನ್ಯಾಯದ ಬಗ್ಗೆ ಮಾತನಾಡುವ ಸಿಎಂ ಸಿದ್ದರಾಮಯ್ಯ ಅವರು ತಮ್ಮ ಬದ್ಧತೆಯನ್ನು ತೋರಿಸಲು ಇದು ಸುಸಂದರ್ಭ," ಎಂದರು.

ನಂತರ ಪ್ರತಿಭಟನಾಕಾರರು ತಹಶೀಲ್ದಾರ್ ಮೂಲಕ ಸರ್ಕಾರಕ್ಕೆ ಮನವಿ ಪತ್ರ ಸಲ್ಲಿಸಿದರು. ಪ್ರತಿಭಟನೆಯಲ್ಲಿ ಆದಿಜಾಂಬವ ಮಹಾಸಭಾ ಅಧ್ಯಕ್ಷ ಪೆದ್ದಿಹಳ್ಳಿ ನರಸಿಂಹಯ್ಯ, ಹರೀಶ್ ಗೌಡ, ಜಗದಾರ್ಯಸ್ವಾಮಿ, ಡಾ. ಅಂಬೇಡ್ಕರ್ ಸೇವಾ ಸಮಿತಿ ಅಧ್ಯಕ್ಷ ಶಿವಕುಮಾರ್ ಸೇರಿದಂತೆ ಮಧುಗಿರಿ, ಮಾರನಗೆರೆ ಹಾಗೂ ಸುತ್ತಮುತ್ತಲ ಗ್ರಾಮಗಳ ನೂರಾರು ಮುಖಂಡರು ಭಾಗವಹಿಸಿದ್ದರು.

# 'ವಿಕಲಚೇತನ ಮಕ್ಕಳನ್ನು ಕೂಡಿ ಹಾಕುವುದು ಶಿಕ್ಷಾರ್ಹ ಅಪರಾಧ'



ತುಮಕೂರು

"ವಿಕಲಚೇತನ ಮತ್ತು ಬುದ್ಧಿಮಾಂದ್ಯ ಮಕ್ಕಳನ್ನು ಮನೆಯಿಂದ ಹೊರಗೆ ಬಾರದಂತೆ ಕಟ್ಟಿ ಹಾಕುವುದು ಅಥವಾ ಬಂಧಿಸಿ ಕೂಡಿ ಹಾಕುವುದು ಕಾನೂನುಬದ್ಧವಾಗಿ ಶಿಕ್ಷಾರ್ಹ ಅಪರಾಧ. ಇಂತಹ ಅನಿಷ್ಟ ಪದ್ಧತಿಗಳನ್ನು ಅನುಸರಿಸುವವರ ವಿರುದ್ಧ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲು ಕಾನೂನಿನಲ್ಲಿ ಅವಕಾಶವಿದೆ," ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ನೂರುನ್ನೀಸ ತಿಳಿಸಿದರು.

ನಗರದ ಬಾಲಭವನ ಸಭಾಂಗಣದಲ್ಲಿ ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ವಿವಿಧ ಇಲಾಖೆಗಳ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಳ್ಳಲಾಗಿದ್ದ 'ವಿಕಲಚೇತನ ಮಕ್ಕಳು ಹಾಗೂ ಆರೈಕೆದಾರರ ಸಂವಾದ' ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಜಾಗೃತಿ ಮತ್ತು ಆರೈಕೆ ಅಗತ್ಯ: "ಪೋಷಕರು ವಿಕಲಚೇತನ ಮಕ್ಕಳನ್ನು ಕೂಡಿ ಹಾಕುವ ಬದಲು ಸರ್ಕಾರಿ ಡೇ ಕೇರ್ ಸೆಂಟರ್ ಮತ್ತು ವಸತಿ ಶಾಲೆಗಳಿಗೆ ಸೇರಿಸಬೇಕು. ಈ ಮಕ್ಕಳನ್ನು ಜೀವನಪೂರ್ತಿ ಆರೈಕೆ ಮಾಡುವ ಪೋಷಕರ ಸೇವೆ ಶ್ಲಾಘನೀಯ. ಆದರೆ, ಸರ್ಕಾರದ ಯೋಜನೆಗಳ ಮಾಹಿತಿ ಕೊರತೆಯಿಂದಾಗಿ ಅನೇಕ ಸೌಲಭ್ಯಗಳು ಅರ್ಹರಿಗೆ ತಲುಪುತ್ತಿಲ್ಲ. ಈ ಬಗ್ಗೆ ಅಧಿಕಾರಿಗಳು ಮತ್ತು ಪೋಷಕರು ಹೆಚ್ಚಿನ ಗಮನ ಹರಿಸಬೇಕು," ಎಂದರು.

ಸಂವಾದದಲ್ಲಿ ಕೇಳಿಬಂದ ಸಮಸ್ಯೆಗಳು: ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ಡಾ. ಕೆ.ಟಿ. ತಿಪ್ಪೇಸ್ವಾಮಿ ಅವರೊಂದಿಗೆ ಪೋಷಕರು ಸಂವಾದ ನಡೆಸಿದರು. ಕೆಎಸ್ಆರ್ಟಿಸಿ ಮತ್ತು ಬಿಎಂಟಿಸಿ ಬಸ್‌ಗಳಲ್ಲಿ ವಿಕಲಚೇತನರಿಗೆ ಆಗುತ್ತಿರುವ ತೊಂದರೆಗಳು, ಯುಡಿಐಡಿ ಕಾರ್ಡ್ ಪಡೆಯುವಲ್ಲಿ ಆಗುತ್ತಿರುವ ವಿಳಂಬ ಹಾಗೂ ಶಾಲಾ ದಾಖಲಾತಿ ಸಂದರ್ಭದ ಸಮಸ್ಯೆಗಳ ಬಗ್ಗೆ ಪೋಷಕರು ಪ್ರಶ್ನೆಗಳನ್ನು ಕೇಳಿದರು. ಇದಕ್ಕೆ ಉತ್ತರಿಸಿದ ತಿಪ್ಪೇಸ್ವಾಮಿ ಅವರು, "ಮಧ್ಯವರ್ತಿಗಳ ಹಾವಳಿ ತಪ್ಪಿಸಲು ಕ್ರಮ ಕೈಗೊಳ್ಳಲಾಗುವುದು ಹಾಗೂ ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಚರ್ಚಿಸಿ ಸಮಸ್ಯೆಗಳನ್ನು ಪರಿಹರಿಸಲಾಗುವುದು," ಎಂದು ಭರವಸೆ ನೀಡಿದರು.

ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಪವಿತ್ರ ಮಾತನಾಡಿ, "ವಿಕಲಚೇತನ ಮಕ್ಕಳಿಗೆ ಸಮಾಜದಿಂದ ಅನುಕಂಪ (ಸಿಂಪತಿ) ಬೇಕಾಗಿಲ್ಲ, ಬದಲಾಗಿ ಬದುಕು ಕಟ್ಟಿಕೊಳ್ಳಲು ಅಗತ್ಯ ಸಹಕಾರ ಬೇಕಿದೆ," ಎಂದರು. ಮೊಬಿಲಿಟಿ ಇಂಡಿಯಾ ಸಂಸ್ಥೆಯ ಅಲ್ಬಿನಾ ಶಂಕರ್ ಮಕ್ಕಳ ಹಕ್ಕುಗಳ ರಕ್ಷಣೆಯ ಪ್ರಾಮುಖ್ಯತೆಯನ್ನು ವಿವರಿಸಿದರು.

ಕಾರ್ಯಕ್ರಮದಲ್ಲಿ ಅಧಿಕಾರಿಗಳಾದ ಬಿ.ಎಸ್. ಚಿದಾನಂದಮೂರ್ತಿ, ಸಬ್‌ಇನ್ಸ್ಪೆಕ್ಟರ್ ಬಾಬು ಕಿಲಾರಿ, ಎಂ.ಎಸ್. ಗಾಯತ್ರಿ ಸೇರಿದಂತೆ ತುಮಕೂರು, ತುರುವೇಕೆರೆ, ಚಿಕ್ಕನಾಯಕನಹಳ್ಳಿ ಹಾಗೂ ಕೊರಟಗೆರೆಯಿಂದ ನೂರಾರು ಪೋಷಕರು ಭಾಗವಹಿಸಿದ್ದರು.

# 'ಧೈರ್ಯ, ಶಾಂತ ಮನಸ್ಸಿನಿಂದ ಪರೀಕ್ಷೆ ಬರೆಯಿರಿ'



ಬಳ್ಳಾರಿ

ನಗರ ಕ್ಷೇತ್ರದ ಶಾಸಕ ನಾರಾ ಭರತ್ ರೆಡ್ಡಿಯವರು ಪರೀಕ್ಷೆಗೆ ಸಜ್ಜಾಗಿರುವ ವಿದ್ಯಾರ್ಥಿಗಳನ್ನು ಪ್ರೋತ್ಸಾಹಿಸುವ ಉದ್ದೇಶದಿಂದ ಪತ್ರ ಬರೆದಿದ್ದಾರೆ.

ನಗರ ಕ್ಷೇತ್ರದ 45ಕ್ಕೂ ಹೆಚ್ಚು ಶಾಲೆಗಳ ಅಂದಾಜು ಮೂರು ಸಾವಿರ ವಿದ್ಯಾರ್ಥಿಗಳಿಗೆ ಪತ್ರ ಬರೆದಿರುವ ಅವರು ಧೈರ್ಯ ಮತ್ತು ಶಾಂತ ಮನಸ್ಸಿನಿಂದ ಪರೀಕ್ಷೆ ಬರೆಯಿರಿ ಎಂದು ಸಲಹೆ ನೀಡಿದ್ದಾರೆ. ಅವರು ಪ್ರತಿ ವಿದ್ಯಾರ್ಥಿಗಳಿಗೆ ವೈಯಕ್ತಿಕವಾಗಿ ಕಳಿಸಿರುವ ಪತ್ರದ ಒಕ್ಕಣೆ ಈ ರೀತಿ ಇದೆ.

ಪ್ರೀತಿಯ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳೇ ಮತ್ತು ಗೌರವಾನ್ವಿತ ಪೋಷಕರೇ, ಬಳ್ಳಾರಿ ಜಿಲ್ಲೆಯ ಭವಿಷ್ಯವಾಗಿರುವ ನನ್ನ ಪ್ರೀತಿಯ ವಿದ್ಯಾರ್ಥಿಗಳೇ, ನಿಮ್ಮ ಶಿಕ್ಷಣ ಯಾತ್ರೆಯ ಮಹತ್ವದ ಘಟ್ಟವೊಂದು ನಿಮ್ಮ ಮುಂದೆ ಬಂದುನಿಂತಿದೆ. ಇದುವರೆಗಿನ ಕಲಿಕೆಯ ಶ್ರಮವು ಸಾರ್ಥಕವಾಗುವುದು ಪರೀಕ್ಷೆಯ ಫಲಿತಾಂಶದಲ್ಲಿ. ಮಾರ್ಚ್ 18 ರಿಂದ ಎಸ್‌ಎಸ್‌ಎಲ್‌ಸಿ ಪರೀಕ್ಷೆಗಳು ಆರಂಭವಾಗುತ್ತಿರುವ ಈ ಸಂದರ್ಭದಲ್ಲಿ, ನಿಮ್ಮೆಲ್ಲರಿಗೂ ನನ್ನ ಹೃದಯಪೂರ್ವಕ ಶುಭಾಶಯಗಳು.

# ಮಹಿಳೆ ಕುಟುಂಬದ ಭಾಗವಲ್ಲ, ಸಮಾಜದ ಶಕ್ತಿ: ಮಂಜುಳಾ

ಕೋಲಾರ

"ಮಹಿಳೆ ಎಂಬ ಬಲವೇ ಪುರುಷನಿಗೆ ಶಕ್ತಿ ತುಂಬುವ ಮಹಾ ಚೈತನ್ಯ. ಹೆಣ್ಣಿಲ್ಲದೆ ಜೀವವಿಲ್ಲ, ಹೆಣ್ಣಿಲ್ಲದೆ ಜೀವನವೇ ಇಲ್ಲ. ತನ್ನ ಸುತ್ತಲಿನ ಎಲ್ಲರಿಗೂ ಸ್ಫೂರ್ತಿ ನೀಡುವ ದೃಢಸಂಕಲ್ಪದ ಶಕ್ತಿ ಮಹಿಳೆಯಾಗಿದ್ದಾಳೆ," ಎಂದು ನಿವೃತ್ತ ಎಎಸ್‌ಐ ರವೀಂದ್ರನಾಥ್ ಬಣ್ಣಿಸಿದರು.

ನಗರದ ಕೀಲುಕೋಟೆಯ ಅರುಣ್ ಲೇಔಟ್‌ನಲ್ಲಿ ಜಿಲ್ಲಾ ಚುಟುಕು ಸಾಹಿತ್ಯ ಪರಿಷತ್ತಿನ ವತಿಯಿಂದ ಹಮ್ಮಿಕೊಂಡಿದ್ದ ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು. ಇದೇ ಸಂದರ್ಭದಲ್ಲಿ ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಕಲ್ಯಾಣ ಅಧಿಕಾರಿ ಆರ್. ಮಂಜುಳಾ ಅವರನ್ನು ಪರಿಷತ್ತಿನ ವತಿಯಿಂದ ಆತ್ಮೀಯವಾಗಿ ಅಭಿನಂದಿಸಲಾಯಿತು.



ಲಿಂಗ ಸಮಾನತೆಗೆ ಜಾಗೃತಿ ಅಗತ್ಯ: ಜಿಲ್ಲಾ ಚುಟುಕು ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಪಿ. ನಾರಾಯಣಪ್ಪ ಮಾತನಾಡಿ, "ಮಹಿಳೆಯರ ಸಾಮಾಜಿಕ, ಆರ್ಥಿಕ ಮತ್ತು ಸಾಂಸ್ಕೃತಿಕ ಸಾಧನೆಗಳನ್ನು ಗೌರವಿಸುವ ಮೂಲಕ ಲಿಂಗ ಸಮಾನತೆಯ ಬಗ್ಗೆ ಜಾಗೃತಿ ಮೂಡಿಸುವುದು ಇಂದಿನ ಅಗತ್ಯವಾಗಿದೆ," ಎಂದರು. ಬೆಮೆಲ್ ಶ್ರೀನಿವಾಸ ಮಾತನಾಡಿ, ಮಹಿಳೆಯರ ಮೇಲಿನ ದೌರ್ಜನ್ಯದ ವಿರುದ್ಧ ಹೋರಾಡುವ ಸಾಧಕಿಯರನ್ನು ಗೌರವಿಸುವುದು ನಮ್ಮೆಲ್ಲರ ಆದ್ಯ ಕರ್ತವ್ಯ ಎಂದು ತಿಳಿಸಿದರು.

ಸೇವೆಗೆ ಸಂದ ಗೌರವ: ಅಭಿನಂದನೆ ಸ್ವೀಕರಿಸಿ ಮಾತನಾಡಿದ ಜಿಲ್ಲಾ ಅಧಿಕಾರಿ ಆರ್. ಮಂಜುಳಾ, "ನನ್ನ ಅಧಿಕಾರಾವಧಿಯಲ್ಲಿ ಸರ್ಕಾರದ ಸೌಲಭ್ಯಗಳನ್ನು ಜನರಿಗೆ ತಲುಪಿಸುವಲ್ಲಿ ಪ್ರಾಮಾಣಿಕವಾಗಿ ಶ್ರಮಿಸಿದ್ದೇನೆ ಎನ್ನುವ ತೃಪ್ತಿ ನನಗಿದೆ. ಇಂದಿನ ಆಧುನಿಕ ಕಾಲಘಟ್ಟದಲ್ಲಿ ಮಹಿಳೆ ಕುಟುಂಬದಿಂದ ಹಿಡಿದು ಅಧಿಕಾರಿ ಗದ್ದುಗೆಯವರೆಗೂ ಅನನ್ಯ ಸೇವೆ ಸಲ್ಲಿಸುತ್ತಿದ್ದಾಳೆ. ಪುರುಷ ಸಮಾಜ ಮಹಿಳೆಯರನ್ನು ಗೌರವಿಸುವ ಮನೋಭಾವ ಬೆಳೆಸಿಕೊಳ್ಳಬೇಕು," ಎಂದು ಆಶಯ ವ್ಯಕ್ತಪಡಿಸಿದರು.

ಸ್ವರ್ಣಭೂಮಿ ಫೌಂಡೇಶನ್ ಅಧ್ಯಕ್ಷ ಬಿ. ಶಿವಕುಮಾರ್, ಟಿ. ಸುಬ್ಬರಾಮಯ್ಯ ಹಾಗೂ ಕವಿ ಡಾ. ಶರಣಪ್ಪ ಗಬ್ಬೂರು ಮಹಿಳೆಯರ ಹಕ್ಕುಗಳು ಮತ್ತು ಜಾಗತಿಕ ಇತಿಹಾಸದ ಬಗ್ಗೆ ಬೆಳಕು ಚೆಲ್ಲಿದರು. ಕಾರ್ಯಕ್ರಮದಲ್ಲಿ ಬಾಲಕೃಷ್ಣ, ಕೃಷ್ಣಪ್ಪ, ಶಾಂತಮ್ಮ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

# ಶಿವಪುರ ಡೈರಿ ಚುನಾವಣೆ; 'ಕರಡಿ ದೇವರಾಜು' ಬಣಕ್ಕೆ ಭರ್ಜರಿ ಜಯ

ತಿಪಟೂರು

ತಾಲ್ಲೂಕಿನ ಕಿಬ್ಬನಹಳ್ಳಿ ಹೋಬಳಿಯ ಶಿವಪುರ ಹಾಲು ಉತ್ಪಾದಕರ ಸಹಕಾರ ಸಂಘಕ್ಕೆ ನಡೆದ ಚುನಾವಣೆಯಲ್ಲಿ ಸಹಕಾರಿ ಮುಖಂಡ ಕರಡಿ ದೇವರಾಜು ಅವರ ಬಣ ಭರ್ಜರಿ ಜಯ ದಾಖಲಿಸಿದೆ. ಒಟ್ಟು 11 ಸ್ಥಾನಗಳನ್ನು ಗೆಲ್ಲುವ ಮೂಲಕ ಸಂಘದ ಅಧಿಕಾರದ ಚುಕ್ಕಾಣಿಯನ್ನು ಕರಡಿ ದೇವರಾಜು ಬಣ ಹಿಡಿದಿದೆ.

ಹಲವು ಅಡೆತಡೆಗಳ ನಂತರ ಚುನಾವಣೆ: ಸದರಿ ಸಂಘಕ್ಕೆ ಸುಮಾರು ಮೂರು ತಿಂಗಳ ಹಿಂದೆಯೇ ಚುನಾವಣೆ ನಡೆಯಬೇಕಿತ್ತು. ಆದರೆ, ಕೆಲವು ರಾಜಕಾರಣಿಗಳ ಹಿತಾಸಕ್ತಿ ಹಾಗೂ ಸೋಲಿನ ಭೀತಿಯಿಂದ ಚುನಾವಣೆಯನ್ನು ಮುಂದೂಡಿ ಆಡಳಿತಾಧಿಕಾರಿಯನ್ನು ನೇಮಿಸಲಾಗಿತ್ತು. ಇದನ್ನು ಪ್ರಶ್ನಿಸಿದ ಗ್ರಾಮದ ಪ್ರಬುದ್ಧ ಸಹಕಾರಿಗಳು ಅಧಿಕಾರಿಗಳಿಗೆ ಕಾನೂನು ಹೋರಾಟದ ಎಚ್ಚರಿಕೆ ನೀಡಿದ್ದರು. ಈ ಹಿನ್ನೆಲೆಯಲ್ಲಿ ಎಚ್ಚೆತ್ತ ಇಲಾಖೆಯು ಚುನಾವಣೆಯನ್ನು ನಡೆಸಿದೆ.



ಗೆದ್ದವರ ವಿವರ: ಚುನಾವಣೆಯಲ್ಲಿ ಕರಡಿ ದೇವರಾಜು ಬಣದ ಶಾಂತರಾಜು, ಗೌರಮ್ಮ, ಕೃಷ್ಣಯ್ಯ, ಮಂಜುನಾಥ ಮತ್ತು ಚಿಕ್ಕಮ್ಮ ಗೆಲುವು ಸಾಧಿಸಿದರು. ಇನ್ನು ಮಹಾಲಿಂಗಯ್ಯ ಹಾಗೂ ಗಂಗಮ್ಮ ಸಮಬಲದ ಮತ ಪಡೆದಿದ್ದು, ಲಾಟರಿ ಮೂಲಕ ಮಹಾಲಿಂಗಯ್ಯ ನಿರ್ದೇಶಕರಾಗಿ ಆಯ್ಕೆಯಾದರು. ಮಹಿಳಾ ಮೀಸಲು ಕ್ಷೇತ್ರದಿಂದ ಸುಜಾತ, ಮಹಾಲಕ್ಷ್ಮಿ ಹಾಗೂ ಹಿಂದುಳಿದ ವರ್ಗಗಳ ಕ್ಷೇತ್ರದಿಂದ ಲತಾ ಮತ್ತು ಹರೀಶ್ ಆಯ್ಕೆಯಾಗಿದ್ದಾರೆ. ವಿಶೇಷವೆಂದರೆ, ವಿರೋಧಿ ಬಣದಿಂದ ಗೆದ್ದಿದ್ದ ಹರೀಶ್ ಅವರು ನಂತರ ಕರಡಿ ದೇವರಾಜು ಬಣಕ್ಕೆ ಬೆಂಬಲ ಸೂಚಿಸಿ ಸೇರ್ಪಡೆಯಾದರು.

ರೈತರ ಋಣ ತೀರಿಸಿ – ಕರಡಿ ದೇವರಾಜು: ಸನ್ಮಾನ ಸ್ವೀಕರಿಸಿ ಮಾತನಾಡಿದ ಕರಡಿ ದೇವರಾಜು ಅವರು, "ಮತ ನೀಡಿದ ಸದಸ್ಯರ ಋಣ ತೀರಿಸಲು ಸಹಕಾರ ಸಂಘದಿಂದ ರೈತರಿಗೆ ದೊರೆಯಬೇಕಾದ ಎಲ್ಲಾ ಸೌಲಭ್ಯಗಳನ್ನು ನಿಷ್ಪಕ್ಷಪಾತವಾಗಿ ದೊರಕಿಸಿಕೊಡಬೇಕು. ಗ್ರಾಮದ ರೈತರ ಅಭಿವೃದ್ಧಿಗೆ ಸೇವೆ ಸಲ್ಲಿಸಿದಾಗ ಮಾತ್ರ ನಿಮ್ಮ ಗೆಲುವಿಗೆ ಸಾರ್ಥಕತೆ ದೊರೆಯುತ್ತದೆ," ಎಂದು ನೂತನ ನಿರ್ದೇಶಕರಿಗೆ ಕಿವಿಮಾತು ಹೇಳಿದರು.

ಕಾರ್ಯಕ್ರಮದಲ್ಲಿ ಕರಡಿ ಪ್ರಾಥಮಿಕ ಕೃಷಿ ಸಹಕಾರ ಸಂಘದ ಮಾಜಿ ಅಧ್ಯಕ್ಷ ಕೆ. ಬಸವರಾಜು, ನಿರ್ದೇಶಕರಾದ ಶೇಷಣ್ಣ, ಡಿ. ಲಿಂಗರಾಜು ಹಾಗೂ ಗ್ರಾಮದ ಪ್ರಮುಖ ಮುಖಂಡರು ಉಪಸ್ಥಿತರಿದ್ದರು.

ಭಾರತ ಸಾರಥಿ
12/03/2026
ಬೆಂಗಳೂರು । ಬೆಂ.ಗ್ರಾಮಾಂತರ । ತುಮಕೂರು । ಮೈಸೂರು । ಮಂಡ್ಯ । ರಾಮನಗರ । ಕೋಲಾರ । ಚಿಕ್ಕಬಳ್ಳಾಪುರ । ಚಿತ್ರದುರ್ಗ । ದಾವಣಗೆರೆ । ಶಿವಮೊಗ್ಗ । ಮಂಗಳೂರು । ಉಡುಪಿ । ಹುಬ್ಬಳ್ಳಿ । ಮಡಿಕೇರಿ । ಚಿಕ್ಕಮಗಳೂರು । ಹಾಸನ । ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಗೌರವ ಧನ ಹೆಚ್ಚಳಕ್ಕೆ ಆಗ್ರಹಿಸಿ ಸರ್ಕಾರಕ್ಕೆ ಮನವಿ

ಬಳ್ಳಾರಿ

ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಸಹಾಯಕಿಯರ ಗೌರವಧನ ಹೆಚ್ಚಿಸುವಂತೆ ಆಗ್ರಹಿಸಿ ಇಂದು ಅಂಗನವಾಡಿ ಕಾರ್ಯಕರ್ತೆಯರು ಮತ್ತು ಸಹಾಯಕಿಯರ ಫೆಡರೇಷನ್ ಪ್ರತಿಭಟನೆ ನಡೆಸಿ ಸರ್ಕಾರಕ್ಕೆ ಮನವಿ ಪತ್ರ ಸಲ್ಲಿಸಿದರು.



ಫೆಡರೇಷನ್‌ನ ಜಿಲ್ಲಾಧ್ಯಕ್ಷೆ ಎಸ್.ಅರ್ಕಾಣಿ ಅವರು ಈ ವೇಳೆ ಮಾತನಾಡಿ, ರಾಜ್ಯ ಸರ್ಕಾರ ಮಂಡಿಸಿರುವ ಇತ್ತೀಚಿನ ಬಜೆಟ್‌ನಲ್ಲಿ ಅಂಗನವಾಡಿ ಕಾರ್ಯಕರ್ತೆಯರು ಮತ್ತು ಸಹಾಯಕಿಯರ ಗೌರವಧನ ಹೆಚ್ಚಳ ಕುರಿತು ಯಾವುದೇ ಘೋಷಣೆ ಮಾಡಿಲ್ಲ. ಕೇವಲ ಸೀರೆ ವಿತರಿಸುವ ಮಾತಾಗಿದೆ. ಇದು ನಿರಾಶೆ ಉಂಟುಮಾಡಿದೆ ಎಂದು ಫೆಡರೇಷನ್ ಆರೋಪಿಸಿದೆ. ಚುನಾವಣಾ ಪ್ರಣಾಳಿಕೆಯಲ್ಲಿ ನೀಡಿದ್ದ ಭರವಸೆಯಂತೆ ಅಂಗನವಾಡಿ, ಬಿಸಿ ಊಟ ಹಾಗೂ ಆಶಾ ಕಾರ್ಯಕರ್ತೆಯರ ಗೌರವಧನ ಹೆಚ್ಚಿಸುವ ಬಗ್ಗೆ ಘೋಷಣೆ ಮಾಡಲಾಗಿತ್ತು. ಸರ್ಕಾರ ಅಧಿಕಾರಕ್ಕೆ ಬಂದ ನಂತರ ಮೂರು ವರ್ಷ ಕಳೆದರೂ ಆ ಭರವಸೆ ಈಡೇರಿಲ್ಲ ಎಂದು ಅವರು ಆಕ್ಷೇಪ ವ್ಯಕ್ತಪಡಿಸಿದರು.

ಹಿಂದಿನ ಸರ್ಕಾರದ ಅವಧಿಯಲ್ಲಿ ಕಾರ್ಯಕರ್ತೆಯರ ಗೌರವಧನವನ್ನು ಹೆಚ್ಚಿಸುವ ಬಗ್ಗೆ ಘೋಷಣೆ ಮಾಡಲಾಗಿತ್ತು. ಇದುವರೆಗೆ ಅನುಷ್ಠಾನಕ್ಕೆ ತರಲಾಗಲಿಲ್ಲ. ನಂತರದ ಬಜೆಟ್‌ನಲ್ಲಿ ಕೇವಲ ಸಾವಿರ ರೂಪಾಯಿ ಮಾತ್ರ ಹೆಚ್ಚಳ ಮಾಡಲಾಗಿದೆ. ಸರ್ಕಾರ ನೀಡಿದ ಭರವಸೆಯಂತೆ ಮಾಸಿಕ ರೂ. 15,000 ಗೌರವಧನ ನೀಡುವ ಘೋಷಣೆ ಇನ್ನೂ ಜಾರಿಯಾಗಿಲ್ಲ. 2011ರಿಂದ ಸೇವೆ ಸಲ್ಲಿಸಿ ನಿವೃತ್ತರಾದ ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಸಹಾಯಕಿಯರಿಗೆ ಗ್ರಾಚ್ಯುಟಿ ಸೌಲಭ್ಯ ನೀಡಲಾಗಿಲ್ಲ. 2020ರ ನಂತರ ನಿವೃತ್ತರಾದವರಿಗೆ ಮಾತ್ರ ಈ ಸೌಲಭ್ಯ ಅನ್ವಯವಾಗುತ್ತಿದೆ. ಇದರಿಂದ ಸಾವಿರಾರು ವಯೋವೃದ್ಧರಿಗೆ ನ್ಯಾಯ ಸಿಗುತ್ತಿಲ್ಲ. ಈ ಹಿನ್ನೆಲೆ ಬಜೆಟ್ ಅಂಗೀಕಾರಗೊಳ್ಳುವ ಮೊದಲು ಸೀರೆ ನೀಡುವ ಪ್ರಸ್ತಾಪವನ್ನು ಕೈಬಿಟ್ಟು ಅದೇ ಅನುದಾನವನ್ನು ಗೌರವಧನ ಹೆಚ್ಚಳಕ್ಕೆ ಬಳಸುವಂತೆ ಫೆಡರೇಷನ್ ಸರ್ಕಾರವನ್ನು ಒತ್ತಾಯಿಸಿದೆ. ಈ ಕುರಿತು ಮಾರ್ಚ್ 7ರಂದು ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಸಹಾಯಕಿಯರು 'ಸೀರೆ ಬೇಡ, ಗೌರವಧನ ಹೆಚ್ಚಿಸಿ' ಎಂಬ ಘೋಷಣೆಗಳೊಂದಿಗೆ ಪ್ರತಿಭಟನೆ ನಡೆಸಿ ಸರ್ಕಾರದ ಗಮನ ಸೆಳೆದಿರುವುದಾಗಿ ಹೇಳಿದರು.

ಅಂಗನವಾಡಿ ಕಾರ್ಯಕರ್ತೆಯರು ಮತ್ತು ಸಹಾಯಕಿಯರ ಫೆಡರೇಷನ್ ನ ಕಾನೂನು ಸಲಹೆಗಾರರಾದ ಎ.ಆರ್.ಎಂ.ಇಸ್ಮಾಯಿಲ್, ತಾಲೂಕು ಘಟಕದ ಅಧ್ಯಕ್ಷೆ ಇ.ಮಂಗಮ್ಮ, ಪದಾಧಿಕಾರಿಗಳಾದ ರ್ರೆಮ್ಮ, ಮೀನಾ, ಇಂದಿರಾ, ವೀರಮ್ಮ ಹಿರೇಮಠ ಮತ್ತಿತರರು ಜಿಲ್ಲಾಡಳಿತದ ಮೂಲಕ ಸರ್ಕಾರಕ್ಕೆ ಮನವಿ ಸಲ್ಲಿಸಿದರು.

# ಒಳಮೀಸಲಾತಿ ಬೃಹತ್ ಪ್ರತಿಭಟನೆಯಲ್ಲಿ ಭಾಗವಹಿಸುವಂತೆ ಕರೆ



ಪೀಣ್ಯ,ದಾಸರಹಳ್ಳಿ

ಒಳ ಮೀಸಲಾತಿಯಿಲ್ಲದೇ ಉದ್ಯೋಗ ಭರ್ತಿ ಮಾಡುವ ಕಾಂಗ್ರೆಸ್ ಸರ್ಕಾರದ ಮಹಾದ್ರೋಹ ಖಂಡಿಸಿ ಮಾ.12ರಂದು ಫ್ರೀಡಂ ಪಾರ್ಕ್‌ನಲ್ಲಿ ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದು ದಲಿತ ಸಂಘರ್ಷ ಸಮಿತಿಯ ರಾಜ್ಯ ಕಾರ್ಯಕಾರಿ ಸಮಿತಿ ಸದಸ್ಯ ಹೆಗ್ಗನಹಳ್ಳಿಯ ಜಿ ಮೂರ್ತಿ ಪತ್ರಿಕಾ ಗೋಷ್ಠಿಯಲ್ಲಿ ಹೇಳಿದರು.

ಕಳೆದ 35 ವರ್ಷಗಳಿಂದ ಮೀಸಲಾತಿಯ ಹೋರಾಟದಲ್ಲಿ ಸಕ್ರಿಯರಾಗಿ ಪಾಲ್ಗೊಂಡಿದ್ದು ಈಗಾಗಲೇ ಹೆಗ್ಗನ ಹಳ್ಳಿ, ಪೀಣ್ಯ, ಅಂದ್ರಹಳ್ಳಿ, ತಿಗಳರಪಾಳ್ಯ, ದಾಸರಹಳ್ಳಿ ಭಾಗದ ಸಾವಿರಾರು ಜನಸಂಖ್ಯೆ ದಲಿತರಿಗೆ ಕರಪತ್ರ ಹಂಚಿ ಮನವರಿಕೆ ಮಾಡಿ ಕೊಟ್ಟಿದ್ದು ಪ್ರತಿಭಟನೆಯಲ್ಲಿ ಭಾಗವಹಿಸುವಂತೆ ಮನವಿ ಮಾಡಿದ್ದು ಸಾವಿರಾರು ಸಂಖ್ಯೆಯಲ್ಲಿ ಭಾಗವಹಿಸಲಿದ್ದಾರೆ ಜಿ.ಮೂರ್ತಿ ಹೇಳಿದರು.

ಒಳ ಮೀಸಲಾತಿ ವಿಧೇಯಕವು ರಾಜ್ಯಪಾಲರ ಸಹಿ ಪಡೆದು ಅನುಮೋದನೆಗೊಂಡಿದೆ ಎಂದು ಸಂತೋಷ ಪಡುವ ಸಂದರ್ಭದಲ್ಲಿ ಒಳ ಮೀಸಲಾತಿ ಅನ್ವಯವಾಗದಂತೆ 56 ಸಾವಿರ ಹುದ್ದೆಗಳನ್ನು ಭರ್ತಿ ಮಾಡುತ್ತೇವೆ ಎಂಬ ಫೆಬ್ರವರಿ 26ರ ಸಚಿವ ಸಂಪುಟದ ತೀರ್ಮಾನ ಸಂವಿಧಾನ ಮತ್ತು ಸಾಮಾಜಿಕ ನ್ಯಾಯಕ್ಕೆ ಬಗೆದ ಘೋರ ಅನ್ಯಾಯವಾಗಿದೆ. ಆ ಮೂಲಕ 35 ವರ್ಷಗಳ ಒಳ ಮೀಸಲಾತಿ ಹೋರಾಟಕ್ಕೆ ಮಹಾದ್ರೋಹ ಎಸಗಲಾಗಿದೆ. ಸರ್ಕಾರದ ಈ ತೀರ್ಮಾನವನ್ನು ಒಳ ಮೀಸಲಾತಿ ಹೋರಾಟಗಾರರು, ಸಾಮಾಜಿಕ ನ್ಯಾಯದ ಪರವಿರುವ ಪ್ರಜ್ಞಾವಂತರೆಲ್ಲರೂ ಒಕ್ಕೊರಲಿನಿಂದ ಉಗ್ರವಾಗಿ ಖಂಡಿಸಲು ಫ್ರೀಡಂ ಪಾರ್ಕ್‌ನಲ್ಲಿ ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ', ಎಂದರು.

ಒಳ ಮೀಸಲಾತಿಯನ್ನು ತಪ್ಪಿಸುವ ಹುನ್ನಾರದಿಂದ ತರಾತುರಿಯಲ್ಲಿ ಹೊರಡಿಸಿರುವ ಸರ್ಕಾರದ ಆದೇಶ ಸಂಖ್ಯೆ ಸಿಬಿ 1 ಸುಇ–1ನೇಹಿಮ 2026, ದಿನಾಂಕ 27.02.2026 ಅನ್ನು ತಕ್ಷಣವೆ ಹಿಂಪಡೆಯಬೇಕು ಮತ್ತು ನೇಮಕಾತಿಯಲ್ಲಿ ಒಳಮೀಸಲಾತಿ ಕಡ್ಡಾಯಗೊಳಿಸಿ ಜಾರಿಗೆ ತರಬೇಕು ಎಂದರು

ರಾಜ್ಯದ 56% ಮೀಸಲಾತಿ ಸಂರಕ್ಷಣೆಗಾಗಿ ಕೇಂದ್ರ ಸರ್ಕಾರಕ್ಕೆ ಶಿಫಾರಸ್ಸು ಮಾಡಿ, ಸರ್ವ ಪಕ್ಷಗಳ ನಿಯೋಗದೊಂದಿಗೆ ಕೇಂದ್ರ ಸರ್ಕಾರಕ್ಕೆ ಮನವರಿಕೆ ಮಾಡಿ, ಸಂವಿಧಾನದ 9ನೇ ಅನುಸೂಚಿಯಲ್ಲಿ ಸೇರಿಸಲು ಅಗತ್ಯ ಕ್ರಮ ಕೈಗೊಳ್ಳಬೇಕು', ಎಂದು ಹೇಳಿದರು.

# ಬೆಸ್ಕಾಂ ಅಧಿಕಾರಿಗಳ ನಿರ್ಲಕ್ಷ್ಯಕ್ಕೆ ಯುವಕ ಬಲಿ!

ತಿಪಟೂರು

ಇನ್ನು 2 ಮೂರು ದಿನಗಳಲ್ಲಿ ತಂದೆಯಾಗಬೇಕಿದ್ದ ಯುವಕನೊಬ್ಬ ಬೆಸ್ಕಾಂ ಅಧಿಕಾರಿಗಳ ಬೇಜವಾಬ್ದಾರಿಗೆ ಬಲಿಯಾಗಿದ್ದಾನೆ. ತಾಲ್ಲೂಕಿನ ಚೌಡ್ಲಾಪುರ ಗ್ರಾಮದ ಬಳಿ ವಿದ್ಯುತ್ ಪರಿವರ್ತಕ (ಟಿಸಿ) ಅಳವಡಿಸುವ ವೇಳೆ ವಿದ್ಯುತ್ ಪ್ರವಹಿಸಿ ಕಲ್ಲುಶೆಟ್ಟಿಹಳ್ಳಿ ಗ್ರಾಮದ ನಿವಾಸಿ, ಲೈನ್‌ಮ್ಯಾನ್ ಕೆ.ಪಿ. ಮನು (26) ದುರ್ಮರಣಕ್ಕೀಡಾಗಿದ್ದಾರೆ.

ಘಟನೆಯ ವಿವರ: ಒಂದೂವರೆ ವರ್ಷದ ಹಿಂದೆಯಷ್ಟೇ ಮದುವೆಯಾಗಿದ್ದ ಮನು, ಕಳೆದ ವಾರವಷ್ಟೇ ತನ್ನ ಪತ್ನಿಗೆ ಅದ್ಧೂರಿಯಾಗಿ ಸೀಮಂತ ಕಾರ್ಯ ಮಾಡಿದ್ದರು. ಪತ್ನಿಯ ಹೆರಿಗೆಗೆ ಆಸ್ಪತ್ರೆಯಲ್ಲಿ ದಿನಾಂಕ ನಿಗದಿಯಾಗಿದ್ದು, ಮಗುವಿನ ಸ್ವಾಗತಕ್ಕೆ ಮನೆಯವರೆಲ್ಲರೂ ಸಂಭ್ರಮದಿಂದ ಕಾಯುತ್ತಿದ್ದರು. ಆದರೆ, ವಿಧಿಯ ಆಟವೇ ಬೇರೆಯಾಗಿತ್ತು. ಎಂದಿನಂತೆ ಕೆಲಸಕ್ಕೆ ತೆರಳಿದ್ದ ಮನು, ಟಿಸಿ ಬದಲಾಯಿಸುವ ವೇಳೆ ಹಠಾತ್ತನೆ ವಿದ್ಯುತ್ ಹರಿದ ಪರಿಣಾಮ ಕಂಬದಿಂದ ಕೆಳಕ್ಕೆ ಬಿದ್ದು ಸ್ಥಳದಲ್ಲೇ ಮೃತಪಟ್ಟಿದ್ದಾರೆ.

ಅಧಿಕಾರಿಗಳ ನಿರ್ಲಕ್ಷ್ಯಕ್ಕೆ ಆಕ್ರೋಶ: ಟಿಸಿ ಬದಲಾಯಿಸುವ ಸಂದರ್ಭದಲ್ಲಿ ಬೆಸ್ಕಾಂ ಅಧಿಕಾರಿಗಳು ಲೈನ್ ಕ್ಲಿಯರ್ (ಮಾರ್ಗಮುಕ್ತತೆ) ನೀಡದೆ ಕೆಲಸಕ್ಕೆ ಹಚ್ಚಿರುವುದು ಈ ದುರಂತಕ್ಕೆ ನೇರ ಕಾರಣ ಎಂದು ಸಾರ್ವಜನಿಕರು ಆರೋಪಿಸಿದ್ದಾರೆ. ಬೆಸ್ಕಾಂ ಬಿಳಿಗೆರೆ ಶಾಖೆಯ ಕಿರಿಯ ಇಂಜಿನಿಯರ್ ಕುಶಲಾಕ್ಷ ಅವರ ನಿರ್ಲಕ್ಷ್ಯದಿಂದ ಈ ಹಿಂದೆಯೂ ಮೂರು ಅಪಘಾತಗಳು ಸಂಭವಿಸಿದ್ದರೂ ಇಲಾಖೆ ಎಚ್ಚೆತ್ತುಕೊಂಡಿಲ್ಲ ಎಂದು ಪ್ರತಿಭಟನಾಕಾರರು ಕಿಡಿಕಾರಿದ್ದಾರೆ.

# ನಿವೇಶನ ಹಂಚಿಕೆಯಲ್ಲಿ ಪಾರದರ್ಶಕತೆ ಇರಲಿ: ಜಿಲ್ಲಾಧಿಕಾರಿ ಜಿ.ಪ್ರಭು

ಚಿಕ್ಕಬಳ್ಳಾಪುರ

ಜಿಲ್ಲೆಯಲ್ಲಿ ಅನುಷ್ಠಾನಗೊಳ್ಳುತ್ತಿರುವ 'ಮುಖ್ಯಮಂತ್ರಿಗಳ ಗ್ರಾಮೀಣ ಆಶ್ರಯ ನಿವೇಶನ ಯೋಜನೆ'ಯಡಿ ಫಲಾನುಭವಿಗಳ ಆಯ್ಕೆಯು ಯಾವುದೇ ಪ್ರಭಾವಕ್ಕೆ ಒಳಗಾಗದೆ, ಕೇವಲ ಅರ್ಹರಿಗೆ ಮಾತ್ರ ತಲುಪಬೇಕು ಎಂದು ಜಿಲ್ಲಾಧಿಕಾರಿ ಜಿ. ಪ್ರಭು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ನಿರ್ದೇಶನ ನೀಡಿದರು.



ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಬಡವರಿಗೆ ನಿವೇಶನ ನೀಡುವ ಪ್ರಕ್ರಿಯೆಯಲ್ಲಿ ಸಣ್ಣ ಲೋಪವಾದರೂ ಸಹಿಸುವುದಿಲ್ಲ ಎಂದು ಎಚ್ಚರಿಸಿದರು.

ಗ್ರಾಮ ಸಭೆಗಳ ಮೂಲಕವೇ ಆಯ್ಕೆ ಕಡ್ಡಾಯ: "ಆಶ್ರಯ ಯೋಜನೆಗಳಿಗೆ ಫಲಾನುಭವಿಗಳನ್ನು ಗ್ರಾಮ ಸಭೆಗಳ ಮೂಲಕವೇ ನಿಯಮಾನುಸಾರ ಆಯ್ಕೆ ಮಾಡಬೇಕು. ಇನ್ನು ಮುಂದೆ ನಡೆಯುವ ಗ್ರಾಮ ಸಭೆಗಳು ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳ ಸಮ್ಮುಖದಲ್ಲೇ ನಡೆಯಬೇಕು. ಇಡೀ ಪ್ರಕ್ರಿಯೆಯನ್ನು ವಿಡಿಯೋಗ್ರಫಿ ಹಾಗೂ ಛಾಯಾಚಿತ್ರಗಳ ಮೂಲಕ ದಾಖಲಿಸಬೇಕು. ಯಾವುದೇ ರಾಜಕೀಯ ಒತ್ತಡ ಅಥವಾ ಶಿಫಾರಸ್ಸುಗಳಿಗೆ ಮಣಿಯದೆ ಪಾರದರ್ಶಕತೆ ಕಾಪಾಡಬೇಕು" ಎಂದು ಅವರು ಸೂಚಿಸಿದರು.

30x40 ಅಡಿಗಿಂತ ಕಡಿಮೆ ನಿವೇಶನ ನೀಡುವಂತಿಲ್ಲ: ನಿವೇಶನಗಳ ಅಳತೆಯ ಬಗ್ಗೆ ಪ್ರಸ್ತಾಪಿಸಿದ ಜಿಲ್ಲಾಧಿಕಾರಿಗಳು, "ಫಲಾನುಭವಿಗಳಿಗೆ ಕನಿಷ್ಠ 30x40 ಅಡಿ ಅಳತೆಯ ನಿವೇಶನಗಳನ್ನೇ ನೀಡಬೇಕು. ಇದಕ್ಕಿಂತ ಕಡಿಮೆ ಅಳತೆಯ ನಿವೇಶನಗಳನ್ನು ವಿಂಗಡಿಸಿ ಬಡಾವಣೆ ನಿರ್ಮಿಸಿದರೆ ಅಂತಹ ಪ್ರಸ್ತಾವನೆಗಳನ್ನು ಸ್ಥಳೀಯ ಅಧಿಕಾರಿಗಳೇ ತಿರಸ್ಕರಿಸಬೇಕು. ಈ ಬಗ್ಗೆ ಯಾವುದೇ ಕಾರಣಕ್ಕೂ ಅನುಮೋದನೆ ನೀಡಬಾರದು" ಎಂದರು.

ಜಿಲ್ಲೆಯಲ್ಲಿ 959 ಎಕರೆ ಜಮೀನು ಲಭ್ಯ: ಒಟ್ಟು ಲಭ್ಯವಿರುವ ಜಮೀನು: 959.11 ಎಕರೆ.

ಸ್ಥಳಗಳ ವಿವರ: ಜಿಲ್ಲೆಯ ಒಟ್ಟು 358 ಸ್ಥಳಗಳಲ್ಲಿ ಈ ಜಮೀನು ಲಭ್ಯವಿದೆ.

ಜಿ.ಪಿ.ಎಸ್ ನಕ್ಷೆ: ಈಗಾಗಲೇ 758.14 ಎಕರೆ ಜಮೀನಿಗೆ ಜಿ.ಪಿ.ಎಸ್ ಆಧಾರಿತ ನಕ್ಷೆ ಸಿದ್ಧಪಡಿಸಲಾಗಿದೆ.

ಆದ್ಯತೆ: 2018ರಲ್ಲಿ ಸಮೀಕ್ಷೆ ನಡೆಸಿ ಅರ್ಜಿ ಸಲ್ಲಿಸಿದ ಅರ್ಹರಿಗೆ ಮೊದಲ ಆದ್ಯತೆ ನೀಡಲು ಸೂಚಿಸಲಾಗಿದೆ.

ವಾಸಕ್ಕೆ ಯೋಗ್ಯವಾದ ಜಾಗ ಮಾತ್ರ ಆಯ್ಕೆ ಮಾಡಿ: ನಿವೇಶನಕ್ಕಾಗಿ ಜಮೀನು ಆಯ್ಕೆ ಮಾಡುವಾಗ ಕಲ್ಲುಬಂಡೆ, ಹಳ್ಳಕೊಳ್ಳ ಅಥವಾ ಬೆಟ್ಟಗುಡ್ಡಗಳಿರುವ ವಾಸಕ್ಕೆ ಅಯೋಗ್ಯವಾದ ಜಾಗಗಳನ್ನು ಆಯ್ಕೆ ಮಾಡಬಾರದು. ಭೂ ಮಾಪಕರು ಸ್ಥಳ ತನಿಖೆ ನಡೆಸಿ ಸಮರ್ಪಕ ವರದಿ ನೀಡಬೇಕು. ಸರ್ಕಾರಿ ಅಥವಾ ಖಾಸಗಿ ಬಡಾವಣೆಗಳಿಗೆ ನಗರ ಮತ್ತು ಗ್ರಾಮಾಂತರ ಯೋಜನಾ ಪ್ರಾಧಿಕಾರದಿಂದ ಕಡ್ಡಾಯವಾಗಿ ನಕ್ಷೆ ಅನುಮೋದನೆ ಪಡೆಯಬೇಕು ಎಂದು ತಿಳಿಸಿದರು. ಸಭೆಯಲ್ಲಿ ಜಿಲ್ಲಾ ಪಂಚಾಯತ್ ಸಿಇಒ ಡಾ. ವೈ. ನವೀನ್ ಭಟ್, ಅಪರ ಜಿಲ್ಲಾಧಿಕಾರಿ ಡಾ. ಎನ್. ಭಾಸ್ಕರ್ ಸೇರಿದಂತೆ ಜಿಲ್ಲೆಯ ಎಲ್ಲಾ ತಹಸೀಲ್ದಾರರು ಮತ್ತು ಪೌರಾಯುಕ್ತರು ಉಪಸ್ಥಿತರಿದ್ದರು.

# 'ಚಿಕ್ಕಬಳ್ಳಾಪುರಕ್ಕೆ ಸಿಗಲಿ ಬಜೆಟ್ ಭಾಗ್ಯ'

ಬಯಲುಸೀಮೆ ಪ್ರದೇಶವಾದ ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಕುಡಿಯುವ ಹಾಗೂ ಬಳಕೆಯ ನೀರಿನ ಸಮಸ್ಯೆ ಗಂಭೀರವಾಗಿದ್ದು, ಮುಂಬರುವ ಬಜೆಟ್‌ನಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಈ ಭಾಗದ ನೀರಾವರಿ ಯೋಜನೆಗಳಿಗೆ ಹೆಚ್ಚಿನ ಅನುದಾನ ನೀಡುವ ಮೂಲಕ ಆದ್ಯತೆ ನೀಡಲಿದ್ದಾರೆ ಎಂಬ ಆಶಾಭಾವನೆ ಇದೆ ಎಂದು ಕೆಪಿಸಿಸಿ ಸದಸ್ಯ ಹಾಗೂ ಜಿಹೆಚ್‌ಎನ್ ಫೌಂಡೇಶನ್ ಸಂಸ್ಥಾಪಕ ಅಧ್ಯಕ್ಷ ಎನ್. ವಿನಯ್ (ಶ್ಯಾಮ್) ತಿಳಿಸಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, "ರಾಜ್ಯ ಬಜೆಟ್‌ನಲ್ಲಿ ನೀರಾವರಿ ಕ್ಷೇತ್ರಕ್ಕೆ ಹೆಚ್ಚಿನ ಒತ್ತು ನೀಡಲಾಗಿದೆ. ಆದರೂ ಜಿಲ್ಲೆಗೆ ಹರಿದು ಬರಬೇಕಿರುವ ಎಚ್.ಎನ್. ವ್ಯಾಲಿ ಹಾಗೂ ಎತ್ತಿನಹೊಳೆ ಯೋಜನೆಗಳ ಕಾಮಗಾರಿ ತ್ವರಿತಗತಿಯಲ್ಲಿ ಪೂರ್ಣಗೊಂಡು ನೀರು ಹರಿಸಲು ಸರ್ಕಾರ ಕೂಡಲೇ ಕ್ರಮ ಕೈಗೊಳ್ಳಬೇಕು. ಜಿಲ್ಲೆಯ ಸಮಗ್ರ ಅಭಿವೃದ್ಧಿಗೆ ಪೂರಕವಾದ ಯೋಜನೆಗಳನ್ನು ಘೋಷಿಸುವ ಭರವಸೆ ನಮಗಿದೆ," ಎಂದರು.

ರಾಜ್ಯಾದ್ಯಂತ ಜನಪರ ಬಜೆಟ್ ಮಂಡನೆಯಾಗಿದ್ದು, ಇದು ಆಶಾದಾಯಕ ಬೆಳವಣಿಗೆಯಾಗಿದೆ ಎಂದು ಅವರು ಈ ಸಂದರ್ಭದಲ್ಲಿ ಅಭಿಪ್ರಾಯಪಟ್ಟರು.

# 56,432 ಹುದ್ದೆಗಳ ನೇಮಕಾತಿಗೆ ತಡೆ ನೀಡಿ; ಸುಪ್ರೀಂ ಆದೇಶ ಪಾಲಿಸಲು ಒತ್ತಾಯ

ಕೊರಟಗೆರೆ

ಸುಪ್ರೀಂ ಕೋರ್ಟ್ ಆದೇಶವನ್ನು ಉಲ್ಲಂಘಿಸಿ, ಒಳ ಮೀಸಲಾತಿ ಜಾರಿಗೊಳಿಸದೆಯೇ 56,432 ಹುದ್ದೆಗಳನ್ನು ನೇರ ನೇಮಕಾತಿ ಮಾಡಲು ಹೊರಟಿರುವ ರಾಜ್ಯ ಸರ್ಕಾರದ ಕ್ರಮವನ್ನು ವಿರೋಧಿಸಿ ಕರ್ನಾಟಕ ಮಾದರ ಮಹಾಸಭಾ ಕೊರಟಗೆರೆ ತಾಲ್ಲೂಕು ಘಟಕದ ವತಿಯಿಂದ ಮಂಗಳವಾರ ಪ್ರತಿಭಟನೆ ನಡೆಸಲಾಯಿತು.




ಪಟ್ಟಣದ ತಹಶೀಲ್ದಾರ್ ಕಚೇರಿ ಮುಂದೆ ಜಮಾಯಿಸಿದ ಪ್ರತಿಭಟನಾಕಾರರು, ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ನಂತರ ತಹಶೀಲ್ದಾರ್ ಅವರಿಗೆ ಮನವಿ ಪತ್ರ ಸಲ್ಲಿಸಿ, ಕೂಡಲೇ ನೇಮಕಾತಿ ಪ್ರಕ್ರಿಯೆಯನ್ನು ಸ್ಥಗಿತಗೊಳಿಸಿ ಒಳ ಮೀಸಲಾತಿ ಜಾರಿಗೊಳಿಸುವಂತೆ ಆಗ್ರಹಿಸಿದರು.

ಬಡ ವಿದ್ಯಾರ್ಥಿಗಳ ಬದುಕಿನೊಂದಿಗೆ ಚೆಲ್ಲಾಟ: ಪ್ರತಿಭಟನೆಯಲ್ಲಿ ಮಾತನಾಡಿದ ತಾಲ್ಲೂಕು ಅಧ್ಯಕ್ಷ ಸಿದ್ದೇಶ್ (ವಿಭೂತಿ), "ಕಳೆದ 35 ವರ್ಷಗಳಿಂದ ಶೋಷಿತ ಸಮುದಾಯಗಳು ಒಳ ಮೀಸಲಾತಿಗಾಗಿ ಹೋರಾಡುತ್ತಿವೆ. ಸುಪ್ರೀಂ ಕೋರ್ಟ್ ಆದೇಶದಂತೆ ಸಾಮಾಜಿಕ ಮತ್ತು ಆರ್ಥಿಕ ಹಿಂದುಳಿದಿರುವಿಕೆಯ ಆಧಾರದ ಮೇಲೆ ಪೂರ್ಣ ಪ್ರಮಾಣದ ಒಳ ಮೀಸಲಾತಿ ಜಾರಿಯಾಗಬೇಕು. ಆದರೆ ಸರ್ಕಾರ ಕಣ್ಣೊರೆಸುವ ತಂತ್ರ ಮಾಡುತ್ತಿದೆ," ಎಂದು ದೂರಿದರು.

ಜಿಲ್ಲಾ ಪದಾಧಿಕಾರಿ ದಾಡಿ ವೆಂಕಟೇಶ್ ಮಾತನಾಡಿ, "ಒಳ ಮೀಸಲಾತಿ ಇಲ್ಲದೆ 56,432 ಹುದ್ದೆಗಳನ್ನು ಹಳೇ ಪದ್ಧತಿಯಲ್ಲೇ ಭರ್ತಿ ಮಾಡಲು ಸರ್ಕಾರ ಮುಂದಾಗಿದೆ. ಇದರಿಂದ ಮಾದಿಗ ಮತ್ತು ಸಂಬಂಧಿತ 16 ಉಪಜಾತಿಗಳನ್ನು ಒಳಗೊಂಡ ಪ್ರವರ್ಗ– ಎ ಗುಂಪಿನ ಸುಮಾರು 3,500 ಹುದ್ದೆಗಳು ಕೈತಪ್ಪಲಿವೆ. ಇದು ನಿರುದ್ಯೋಗಿ ಯುವಕರ ಬದುಕನ್ನು ಸರ್ವನಾಶ ಮಾಡುವ ಸಂಚು," ಎಂದು ಆಕ್ರೋಶ ಹೊರಹಾಕಿದರು.

ಪ್ರಮುಖ ಬೇಡಿಕೆಗಳು:

ಪ್ರಸ್ತುತ ನಡೆಯುತ್ತಿರುವ ನೇರ ನೇಮಕಾತಿಯನ್ನು ತಕ್ಷಣ ರದ್ದುಗೊಳಿಸಬೇಕು. ಸುಪ್ರೀಂ ಕೋರ್ಟ್ ಆದೇಶದಂತೆ ಒಳ ಮೀಸಲಾತಿಯನ್ನು ಸಮರ್ಪಕವಾಗಿ ಜಾರಿಗೊಳಿಸಬೇಕು. ಹೊಸ ಮೀಸಲಾತಿಯನ್ನು ಸಂವಿಧಾನದ 9ನೇ ಶೆಡ್ಯೂಲ್‌ಗೆ ಸೇರಿಸಲು ಸರ್ವಪಕ್ಷಗಳ ಸಭೆ ಕರೆಯಬೇಕು.

ಪ್ರತಿಭಟನೆಯಲ್ಲಿ ಸಂಘಟನೆಯ ಉಪಾಧ್ಯಕ್ಷ ಮಂಜುನಾಥ್, ಕಾರ್ಯದರ್ಶಿ ಆರ್. ಲಕ್ಷ್ಮೀನರಸಯ್ಯ, ಖಜಾಂಚಿ ವೀರಕ್ಯಾತರಾಯ ಸೇರಿದಂತೆ ನಾಗರಾಜು, ಭೀಮರಾಜು, ರವಿಕುಮಾರ್ ಹಾಗೂ ನೂರಾರು ಕಾರ್ಯಕರ್ತರು ಪಾಲ್ಗೊಂಡಿದ್ದರು.

# ಏರುತ್ತಿದೆ ಬಿಸಿಲ ಬೇಗೆ: ಸಾರ್ವಜನಿಕರಿಗೆ ಆರೋಗ್ಯ ಇಲಾಖೆಯಿಂದ ಸಲಹೆ

ರಾಮನಗರ

ಜಿಲ್ಲೆಯಲ್ಲಿ ದಿನದಿಂದ ದಿನಕ್ಕೆ ಸೂರ್ಯನ ತಾಪಮಾನ ಏರುತ್ತಿದ್ದು, ತೀವ್ರ ಉಷ್ಣಾಂಶದಿಂದ ಉಂಟಾಗುವ ಆರೋಗ್ಯ ಸಮಸ್ಯೆಗಳನ್ನು ತಡೆಗಟ್ಟಲು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯು ಸಾರ್ವಜನಿಕರಿಗೆ ಕಟ್ಟುನಿಟ್ಟಿನ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳಲು ಸೂಚಿಸಿದೆ.

ಬಾಯಾರಿಕೆ ಇಲ್ಲದಿದ್ದರೂ ನೀರು ಕುಡಿಯಿರಿ: ಬೇಸಿಗೆಯಲ್ಲಿ ದೇಹದ ನಿರ್ಜಲೀಕರಣ ತಡೆಯಲು ಬಾಯಾರಿಕೆ ಇಲ್ಲದಿದ್ದರೂ ಆಗಾಗ್ಗೆ ನೀರು ಕುಡಿಯಬೇಕು. ಮನೆಯಲ್ಲೇ ತಯಾರಿಸಿದ ನಿಂಬೆ ಹಣ್ಣಿನ ಶರಬತ್ತು, ಮಜ್ಜಿಗೆ, ಲಸ್ಸಿ ಹಾಗೂ ನೀರಿನ ಅಂಶ ಹೆಚ್ಚಿರುವ ಕಲ್ಲಂಗಡಿ, ಸೌತೆಕಾಯಿ, ಎಳನೀರು ಸೇವಿಸುವುದು ಉತ್ತಮ ಎಂದು ಆರೋಗ್ಯ ಇಲಾಖೆ ತಿಳಿಸಿದೆ.

ಬಿಸಿಲಿನಲ್ಲಿ ಹೊರಹೋಗುವ ಮುನ್ನ ಗಮನಿಸಿ: ಮಧ್ಯಾಹ್ನ 11 ರಿಂದ ಸಂಜೆ 4 ಗಂಟೆಯ ಅವಧಿಯಲ್ಲಿ ಸಾಧ್ಯವಾದಷ್ಟು ಮನೆಯೊಳಗೇ ಇರಿ. ಅನಿವಾರ್ಯವಾಗಿ ಹೊರಹೋಗುವ ಸಂದರ್ಭದಲ್ಲಿ ಛತ್ರಿ, ಟೋಪಿ ಮತ್ತು ಪಾದರಕ್ಷೆಗಳನ್ನು ಕಡ್ಡಾಯವಾಗಿ ಬಳಸಿ. ತಿಳಿ ಬಣ್ಣದ, ಸಡಿಲವಾದ ಹತ್ತಿ ಬಟ್ಟೆಗಳನ್ನು ಧರಿಸುವುದು ಶರೀರಕ್ಕೆ ತಂಪು ನೀಡುತ್ತದೆ.

ಏನು ಮಾಡಬಾರದು? ಮಧ್ಯಾಹ್ನ 2 ರಿಂದ 3 ಗಂಟೆಯ ಅವಧಿಯಲ್ಲಿ ಶ್ರಮದಾಯಕ ಹೊರಾಂಗಣ ಕೆಲಸಗಳನ್ನು ಮಾಡಬೇಡಿ. ಮದ್ಯಪಾನ, ಟೀ, ಕಾಫಿ ಮತ್ತು ಅತಿಯಾದ ಸಕ್ಕರೆ ಅಂಶವಿರುವ ಪಾನೀಯಗಳಿಂದ ದೂರವಿರಿ. ಇವು ದೇಹವನ್ನು ಮತ್ತಷ್ಟು ನಿರ್ಜಲೀಕರಣಗೊಳಿಸುತ್ತವೆ. ನಿಲುಗಡೆ ಮಾಡಿರುವ ವಾಹನಗಳ ಒಳಗೆ ಮಕ್ಕಳನ್ನು ಅಥವಾ ಸಾಕುಪ್ರಾಣಿಗಳನ್ನು ಬಿಟ್ಟು ಹೋಗಬೇಡಿ.

ತುರ್ತು ಚಿಕಿತ್ಸೆಗೆ 108 ಬಳಸಿ: ಯಾರಿಗಾದರೂ ತೀವ್ರ ಜ್ವರ, ಪ್ರಜ್ಞೆ ತಪ್ಪುವುದು ಅಥವಾ ಬೆವರುವಿಕೆ ನಿಂತುಹೋಗುವಂತಹ ತಾಪಾಘಾತದ ಲಕ್ಷಣಗಳು ಕಂಡುಬಂದಲ್ಲಿ ತಕ್ಷಣವೇ 108 ಅಥವಾ 102 ಸಂಖ್ಯೆಗೆ ಕರೆ ಮಾಡಿ ವೈದ್ಯಕೀಯ ನೆರವು ಪಡೆಯಬೇಕು. ವೈದ್ಯರು ಬರುವವರೆಗೂ ಅಂತಹ ವ್ಯಕ್ತಿಯನ್ನು ತಂಪಾದ ಜಾಗಕ್ಕೆ ಸ್ಥಳಾಂತರಿಸಿ, ದೇಹದ ಮೇಲೆ ತಣ್ಣೀರು ಚಿಮುಕಿಸಿ ಗಾಳಿ ಹಾಕಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸುಲಭ ಟಿಪ್ಸ್‌ಗಳ ಪಟ್ಟಿ; ಮಾಡಬೇಕಾದ್ದು: ಓ.ಆರ್.ಎಸ್, ಮಜ್ಜಿಗೆ ಸೇವಿಸಿ, ಪ್ರಯಾಣದಲ್ಲಿ ನೀರಿನ ಬಾಟಲಿ ಇಟ್ಟುಕೊಳ್ಳಿ, ರಾತ್ರಿ ವೇಳೆ ಕಿಟಕಿಗಳನ್ನು ತೆರೆದಿಡಿ, ಹಣ್ಣಿನ ಜ್ಯೂಸ್‌ಗಳಿಗೆ ಚಿಟಿಕೆ ಉಪ್ಪು ಸೇರಿಸಿ ಕುಡಿಯಿರಿ.

ಸುಲಭ ಟಿಪ್ಸ್‌ಗಳ ಪಟ್ಟಿ; ಮಾಡಬಾರದ್ದು:

ಮಧ್ಯಾಹ್ನದ ಬಿಸಿಲಿನಲ್ಲಿ ಅಡುಗೆ ಮಾಡಬೇಡಿ,

# ಆಕ್ಷೇಪಣೆ ಸಲ್ಲಿಕೆಗೆ ಗಡುವು

ಕೋಲಾರ

ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ವತಿಯಿಂದ ಜಾರಿಯಲ್ಲಿರುವ 'ಭೂ ಒಡೆತನ ಯೋಜನೆ'ಯಡಿ, ಭೂ ರಹಿತ ಕೃಷಿ ಕಾರ್ಮಿಕ ಮಹಿಳಾ ಫಲಾನುಭವಿಗಳಿಗಾಗಿ ಮಾಲೂರು ತಾಲ್ಲೂಕಿನ ಲಕ್ಕೂರು ಹೋಬಳಿಯ ಬಂಟಹಳ್ಳಿ ಗ್ರಾಮದ ಜಮೀನುಗಳನ್ನು ಖರೀದಿಸಲು ಉದ್ದೇಶಿಸಲಾಗಿದೆ.

ಈ ಜಮೀನುಗಳಿಗೆ ಸಂಬಂಧಿಸಿದಂತೆ ಯಾವುದೇ ವ್ಯಕ್ತಿಗಳಿಗೆ ಅಥವಾ ವಾರಸುದಾರರಿಗೆ ತಕರಾರುಗಳಿದ್ದಲ್ಲಿ ಆಕ್ಷೇಪಣೆ ಸಲ್ಲಿಸಲು ನಿಗಮವು ಅವಕಾಶ ನೀಡಿದೆ.

ಖರೀದಿಸಲು ಉದ್ದೇಶಿಸಿರುವ ಈ ಜಮೀನುಗಳ ಮೇಲೆ ಆರಂಭದಿಂದ ಇಂದಿನವರೆಗೆ ಮಾಲೀಕರ ವಂಶವೃಕ್ಷದಂತೆ ವಾರಸುದಾರರು ನ್ಯಾಯಾಲಯಗಳಲ್ಲಿ ದಾವೆ ಹೂಡಿದ್ದಲ್ಲಿ ಅಥವಾ ಯಾವುದೇ ರೀತಿಯ ತಂಟೆ–ತಕರಾರುಗಳಿದ್ದಲ್ಲಿ, ಈ ಪ್ರಕಟಣೆ ಹೊರಬಂದ 10 ದಿನಗಳ ಒಳಗಾಗಿ ಅಗತ್ಯ ದಾಖಲೆಗಳೊಂದಿಗೆ ನಿಗಮದ ಜಿಲ್ಲಾ ವ್ಯವಸ್ಥಾಪಕರ ಕಚೇರಿಗೆ ಸಲ್ಲಿಸಬೇಕಿದೆ ಎಂದು ಜಿಲ್ಲಾ ವ್ಯವಸ್ಥಾಪಕರು ಸ್ಪಷ್ಟಪಡಿಸಿದ್ದಾರೆ.

# 'ದುಷ್ಟಶಕ್ತಿಗಳ ಹುನ್ನಾರಕ್ಕೆ ಬಲಿಯಾಗಬೇಡಿ, ಸಂಘಟಿತರಾಗಿ'

ವಿಜಯಪುರ

"ಯಾವುದೇ ಸಮುದಾಯ ಸಮಾಜದ ಮುಖ್ಯವಾಹಿನಿಗೆ ಬರಬೇಕಾದರೆ ಸಂಘಟನೆ ಅತ್ಯಗತ್ಯ. ಛಲವಾದಿ ಸಮುದಾಯವು ಒಗ್ಗಟ್ಟನ್ನು ಕಾಪಾಡಿಕೊಳ್ಳುವ ಮೂಲಕ ತನ್ನ ಅಸ್ತಿತ್ವವನ್ನು ಗಟ್ಟಿಗೊಳಿಸಿಕೊಳ್ಳಬೇಕು," ಎಂದು ತಾಲ್ಲೂಕು ಪಂಚಾಯಿತಿ ಮಾಜಿ ಸದಸ್ಯ ಕಾರಹಳ್ಳಿ ಶ್ರೀನಿವಾಸ್ ಹೇಳಿದರು.

ಹೋಬಳಿಯ ಹೊಲೇರಹಳ್ಳಿಯ ಮುನೇಶ್ವರಸ್ವಾಮಿ ದೇವಾಲಯದ ಆವರಣದಲ್ಲಿ ಆಯೋಜಿಸಿದ್ದ ಛಲವಾದಿ ಮಹಾಸಭಾದ ತಾಲ್ಲೂಕು ಘಟಕದ ಸಭೆಯಲ್ಲಿ ಅವರು ಮಾತನಾಡಿದರು.

ಶಿಕ್ಷಣದಿಂದಲೇ ಬದಲಾವಣೆ ಸಾಧ್ಯ: "ಸ್ವಾತಂತ್ರ್ಯ ಪೂರ್ವದಿಂದಲೂ ಅನುಭವಿಸುತ್ತಾ ಬಂದಿರುವ ಅಸ್ಪೃಶ್ಯತೆಯ ನೋವಿಗೆ ಪೂರ್ಣವಿರಾಮ ಹಾಕಬೇಕಾದರೆ ನಮ್ಮ ಮಕ್ಕಳು ಉನ್ನತ ಶಿಕ್ಷಣ ಪಡೆಯಬೇಕು. ಸಮುದಾಯದ ಮುಖಂಡರು ಮಕ್ಕಳ ವಿದ್ಯಾಭ್ಯಾಸಕ್ಕೆ ಹೆಚ್ಚಿನ ಪ್ರೋತ್ಸಾಹ ನೀಡಬೇಕು. ನಮ್ಮ ಒಗ್ಗಟ್ಟನ್ನು ಮುರಿಯಲು ಯತ್ನಿಸುವ ಶಕ್ತಿಗಳ ವಿರುದ್ಧ ನಾವು ಎಚ್ಚರದಿಂದ ಇರಬೇಕು," ಎಂದು ಅವರು ಕರೆ ನೀಡಿದರು.

ಹೋರಾಟದ ಹಾದಿ ಶೋಚನೀಯ: ಗೊಡ್ಲುಮುದ್ದೇನಹಳ್ಳಿ ಗ್ರಾ.ಪಂ. ಮಾಜಿ ಅಧ್ಯಕ್ಷ ಎಂ. ಮುರಳೀಧರ್ ಮಾತನಾಡಿ, "ದೇಶಕ್ಕೆ ಸ್ವಾತಂತ್ರ್ಯ ಬಂದು 80 ವರ್ಷಗಳಾಗುತ್ತಿದ್ದರೂ ನಮ್ಮ ಹಕ್ಕುಗಳಿಗಾಗಿ ಇಂದಿಗೂ ಹೋರಾಟ ಮಾಡಬೇಕಾದ ಪರಿಸ್ಥಿತಿ ಇರುವುದು ಶೋಚನೀಯ. ಪ್ರತಿಯೊಬ್ಬರೂ ಸ್ವಾಭಿಮಾನದಿಂದ ಬದುಕುವುದನ್ನು ಕಲಿಯಬೇಕು. ಸಮುದಾಯ ಭವನಗಳ ನಿರ್ಮಾಣ ಹಾಗೂ ಮಕ್ಕಳ ಶೈಕ್ಷಣಿಕ ಪ್ರಗತಿಗೆ ಮಹಾಸಭಾ ಬೆನ್ನೆಲುಬಾಗಿ ನಿಲ್ಲಬೇಕು," ಎಂದರು.

ಹೋರಾಟದ ಹಾದಿ ಶೋಚನೀಯ: ಗೊಡ್ಲುಮುದ್ದೇನಹಳ್ಳಿ ಗ್ರಾ.ಪಂ. ಮಾಜಿ ಅಧ್ಯಕ್ಷ ಎಂ. ಮುರಳೀಧರ್ ಮಾತನಾಡಿ, "ದೇಶಕ್ಕೆ ಸ್ವಾತಂತ್ರ್ಯ ಬಂದು 80 ವರ್ಷಗಳಾಗುತ್ತಿದ್ದರೂ ನಮ್ಮ ಹಕ್ಕುಗಳಿಗಾಗಿ ಇಂದಿಗೂ ಹೋರಾಟ ಮಾಡಬೇಕಾದ ಪರಿಸ್ಥಿತಿ ಇರುವುದು ಶೋಚನೀಯ. ಪ್ರತಿಯೊಬ್ಬರೂ ಸ್ವಾಭಿಮಾನದಿಂದ ಬದುಕುವುದನ್ನು ಕಲಿಯಬೇಕು. ಸಮುದಾಯ ಭವನಗಳ ನಿರ್ಮಾಣ ಹಾಗೂ ಮಕ್ಕಳ ಶೈಕ್ಷಣಿಕ ಪ್ರಗತಿಗೆ ಮಹಾಸಭಾ ಬೆನ್ನೆಲುಬಾಗಿ ನಿಲ್ಲಬೇಕು," ಎಂದರು.

ಸಭೆಯಲ್ಲಿ ಛಲವಾದಿ ಮಹಾಸಭಾದ ತಾಲ್ಲೂಕು ಅಧ್ಯಕ್ಷ ನಾಗನಾಯಕನಹಳ್ಳಿ ನಾಗರಾಜ್, ಪ್ರಧಾನ ಕಾರ್ಯದರ್ಶಿ ಮಹೇಶ್ ದಾಸ್, ನಿರ್ದೇಶಕರಾದ ಯಲುವಹಳ್ಳಿ ಮುನಿಕೃಷ್ಣ, ವಿಜಯ ಕುಮಾರ್, ಮುನಿಕೃಷ್ಣಪ್ಪ, ಪ್ರಕಾಶ್ ಸೇರಿದಂತೆ ಮುದ್ದೇನಹಳ್ಳಿ ಮುನಿಶಾಮಪ್ಪ, ಸತೀಶ್ ಮತ್ತಿತರರು ಉಪಸ್ಥಿತರಿದ್ದರು.

# ಅಪೌಷ್ಟಿಕತೆ ಇರುವ ಮಕ್ಕಳಿಗೆ ಉಚಿತ ಔಷಧ ವಿತರಣೆ

ರಾಮನಗರ

ತಾಲ್ಲೂಕಿನ ಬಿಡದಿ ಪಟ್ಟಣದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಭಾರತೀಯ ಶಿಶುವೈದ್ಯ ಸಂಘ (ಬೆಂಗಳೂರು ಘಟಕ), ಅನಿಕೇತನ ಫೌಂಡೇಷನ್ ಹಾಗೂ ಆಸರೆ ಫೌಂಡೇಷನ್ ಟ್ರಸ್ಟ್ ವತಿಯಿಂದ ಮಕ್ಕಳಿಗಾಗಿ ಬೃಹತ್ ಆರೋಗ್ಯ ತಪಾಸಣಾ ಶಿಬಿರವನ್ನು ಆಯೋಜಿಸಲಾಗಿತ್ತು.



ಶಾಲೆಯ ಎಲ್‌ಕೆಜಿಯಿಂದ 4ನೇ ತರಗತಿಯ ಒಟ್ಟು 116 ಪುಟಾಣಿಗಳಿಗೆ ಬೆಂಗಳೂರಿನ ನುರಿತ ಶಿಶುವೈದ್ಯರು ತಪಾಸಣೆ ನಡೆಸಿದರು. ಮಕ್ಕಳ ಎತ್ತರ, ತೂಕ, ದೃಷ್ಟಿ ಹಾಗೂ ಶ್ರವಣ ಸಾಮರ್ಥ್ಯವನ್ನು ವೈಜ್ಞಾನಿಕವಾಗಿ ಪರೀಕ್ಷಿಸಲಾಯಿತು. ಈ ಸಂದರ್ಭದಲ್ಲಿ ಕೆಲವು ಮಕ್ಕಳಲ್ಲಿ ಅಪೌಷ್ಟಿಕತೆಯ ಲಕ್ಷಣಗಳು ಕಂಡುಬಂದಿದ್ದು, ಅಂತಹ ಮಕ್ಕಳ ಪೋಷಕರನ್ನು ಕರೆಯಿಸಿ ತಜ್ಞ ವೈದ್ಯರಿಂದ ಆಪ್ತ ಸಮಾಲೋಚನೆ ನಡೆಸಲಾಯಿತು. ಅಲ್ಲದೆ, ಟ್ರಸ್ಟ್ ವತಿಯಿಂದ ಅಗತ್ಯ ಔಷಧ ಹಾಗೂ ಪೌಷ್ಟಿಕಾಂಶದ ಕಿಟ್‌ಗಳನ್ನು ಉಚಿತವಾಗಿ ವಿತರಿಸಲಾಯಿತು.

ಆರಂಭಿಕ ಹಂತದಲ್ಲೇ ಚಿಕಿತ್ಸೆ ಮುಖ್ಯ: ಆಸರೆ ಫೌಂಡೇಷನ್ ಟ್ರಸ್ಟ್ ಮುಖ್ಯಸ್ಥ ನಟರಾಜ್ ಮಾತನಾಡಿ, "ನಮ್ಮ ಟ್ರಸ್ಟ್ ಹಲವು ವರ್ಷಗಳಿಂದ ಸಮಾಜಮುಖಿ ಕಾರ್ಯಗಳನ್ನು ಮಾಡುತ್ತಾ ಬಂದಿದೆ. ಮಕ್ಕಳಲ್ಲಿ ಯಾವುದಾದರೂ ಆರೋಗ್ಯ ಸಮಸ್ಯೆಗಳಿದ್ದರೆ ಅವುಗಳನ್ನು ಆರಂಭಿಕ ಹಂತದಲ್ಲೇ ಪತ್ತೆಹಚ್ಚಿ ಚಿಕಿತ್ಸೆ ಕೊಡಿಸುವುದು ಶಿಬಿರದ ಮುಖ್ಯ ಉದ್ದೇಶ. ಮಕ್ಕಳ ದೈಹಿಕ ಮತ್ತು ಮಾನಸಿಕ ಬೆಳವಣಿಗೆಯ ಬಗ್ಗೆ ಪೋಷಕರಿಗೆ ಅರಿವು ಮೂಡಿಸಲಾಗುತ್ತಿದೆ," ಎಂದು ತಿಳಿಸಿದರು.

ಈ ಶಿಬಿರದಲ್ಲಿ ಬೆಂಗಳೂರಿನ ತಜ್ಞ ವೈದ್ಯರಾದ ಡಾ. ಸೋಮಶೇಖರ್, ಡಾ. ಅರ್ಪಿತಾ, ಡಾ.ಆಶಿಶ್‌ಗೌಡ, ಡಾ. ಶಶಾಂಕ್ ಹಾಗೂ ಟ್ರಸ್ಟ್‌ನ ಡಾ. ನಂಜುಂಡಯ್ಯ ಭಾಗವಹಿಸಿದ್ದರು. ಕಾರ್ಯಕ್ರಮದಲ್ಲಿ ರೇಖಾ, ಪ್ರೀತಿ, ಸುನಿತಾ, ಸವಿತಾ, ವೇದರತ್ನ, ಪಂಕಜಾ, ಶಾಲಾ ಮುಖ್ಯ ಶಿಕ್ಷಕ ಗುರುಮೂರ್ತಿ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ

ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

ಭಾರತ ಸಾರಥಿ

12/03/2026

# ಚಿಮ್ಮಿದ ಜಲಧಾರೆ!

ಬೇತಮಂಗಲ

ರೈತರ ಬದುಕಿನಲ್ಲಿ ಬೆಳಕು ಚೆಲ್ಲುವ ನಿಟ್ಟಿನಲ್ಲಿ ಸರ್ಕಾರ ಜಾರಿಗೆ ತಂದಿರುವ ಗಂಗಾ ಕಲ್ಯಾಣ ಯೋಜನೆಯು ಬಡ ರೈತ ಮಹಿಳೆಯೊಬ್ಬರ ಬಾಳಿನಲ್ಲಿ ಹೊಸ ಭರವಸೆ ಮೂಡಿಸಿದೆ. ಪಟ್ಟಣದ ಸಮೀಪದ ಬೆಟ್ಕೂರು ಗ್ರಾಮದ ರೈತ ಮಹಿಳೆ ವೆಂಕಟಮ್ಮ ಅವರ ಹಲವು ದಿನಗಳ ಕನಸಾಗಿದ್ದ ಕೊಳವೆಬಾವಿಯಲ್ಲಿ ಇದೀಗ ಯಥೇಚ್ಛವಾಗಿ ನೀರು ಹರಿಯುತ್ತಿದ್ದು, ಅವರ ಮೊಗದಲ್ಲಿ ಮಂದಹಾಸ ಮೂಡಿದೆ.

ನೀರಿನ ಅಭಾವಕ್ಕೆ ಮುಕ್ತಿ: ಹುಲ್ಕೂರು ಗ್ರಾಪಂ ವ್ಯಾಪ್ತಿಯ ಬೆಟ್ಕೂರು ಗ್ರಾಮದ ವೆಂಕಟಮ್ಮ ಅವರು ತಮ್ಮ ಜಮೀನಿನಲ್ಲಿ ಕೃಷಿ ಚಟುವಟಿಕೆ ಕೈಗೊಳ್ಳಲು ನೀರಿನ ಅಭಾವದಿಂದ ಪರದಾಡುತ್ತಿದ್ದರು. ಗಂಗಾ ಕಲ್ಯಾಣ ಯೋಜನೆಯಡಿ ಫಲಾನುಭವಿಯಾಗಿ ಆಯ್ಕೆಯಾದ ಅವರು, ಇದೀಗ ಕೊಳವೆಬಾವಿ ಕೊರೆಸಿದ್ದಾರೆ. ಉತ್ತಮ ಪ್ರಮಾಣದ ನೀರು ಲಭ್ಯವಾಗಿರುವುದು ಅವರ ಕೃಷಿ ಬದುಕಿಗೆ ಆಸರೆಯಾಗಿದೆ.

ಶಾಸಕರಿಗೆ ಕೃತಜ್ಞತೆ: ಈ ಸಂದರ್ಭದಲ್ಲಿ ಹರ್ಷ ವ್ಯಕ್ತಪಡಿಸಿದ ರೈತ ಮಹಿಳೆ ವೆಂಕಟಮ್ಮ, "ನನ್ನಂತಹ ಬಡ ರೈತ ಮಹಿಳೆಯ ಕಷ್ಟಕ್ಕೆ ಸ್ಪಂದಿಸಿ, ಜಮೀನಿಗೆ ಗಂಗಾ ಕಲ್ಯಾಣ ಯೋಜನೆಯಡಿ ನೀರು ಒದಗಿಸಿಕೊಟ್ಟ ಕ್ಷೇತ್ರದ ಶಾಸಕಿ ರೂಪಕಲಾ ಶಶಿಧರ್ ಅವರಿಗೆ ತುಂಬಾ ಹೃದಯದ ಕೃತಜ್ಞತೆಗಳನ್ನು ಸಲ್ಲಿಸುತ್ತೇನೆ. ಈ ನೀರಿನ ಸಹಾಯದಿಂದ ಉತ್ತಮ ಬೆಳೆ ಬೆಳೆದು ಸ್ವಾವಲಂಬಿ ಜೀವನ ಸಾಗಿಸಲು ಸಾಧ್ಯವಾಗುತ್ತದೆ," ಎಂದು ತಿಳಿಸಿದರು.

ಕಾರ್ಯಕ್ರಮದ ಸಂದರ್ಭದಲ್ಲಿ ಮಾಜಿ ಗ್ರಾಪಂ ಅಧ್ಯಕ್ಷ ವೆಂಕಟರಮಪ್ಪ, ಮುಖಂಡರಾದ ಮಾರಸಂದ್ರ ರಾಮಕೃಷ್ಣಪ್ಪ, ಬೆಟ್ಕೂರು ಶ್ರೀನಿವಾಸ್, ಗೋವಿಂದಪ್ಪ, ಮುನಿಸ್ವಾಮಿ ರೆಡ್ಡಿ, ರಮಣರೆಡ್ಡಿ, ಬಾರ್ಲಿ ಚಂದು ಸೇರಿದಂತೆ ಹಲವು ಗ್ರಾಮಸ್ಥರು ಉಪಸ್ಥಿತರಿದ್ದರು.

# 27ರಿಂದ ಬೃಹತ್ ಶ್ರೀರಾಮೋತ್ಸವದ ಕೇಸರಿ ಸಂಭ್ರಮ

ದೊಡ್ಡಬಳ್ಳಾಪುರ

ಹಿಂದೂ ಧರ್ಮದ ಜಾಗೃತಿ ಹಾಗೂ ಸಾಂಸ್ಕೃತಿಕ ನೆಲೆಗಟ್ಟಿನಲ್ಲಿ ಹಿಂದೂ ಸಮಾಜವನ್ನು ಸಂಘಟಿಸುವ ಉದ್ದೇಶದಿಂದ ವಿಶ್ವ ಹಿಂದೂ ಪರಿಷತ್ ಮತ್ತು ಬಜರಂಗದಳದ ವತಿಯಿಂದ ನಗರದಲ್ಲಿ ಮಾರ್ಚ್ 27 ರಿಂದ ಮೂರು ದಿನಗಳ ಕಾಲ 'ಶ್ರೀರಾಮೋತ್ಸವ' ಹಾಗೂ 'ಬೃಹತ್ ಶ್ರೀರಾಮ ಶೋಭಾಯಾತ್ರೆ'ಯನ್ನು ಹಮ್ಮಿಕೊಳ್ಳಲಾಗಿದೆ ಎಂದು ಬಜರಂಗದಳದ ಪ್ರಾಂತ ಬಲೋಪಾಸನ ಪ್ರಮುಖ್ ನರೇಶ್ ರೆಡ್ಡಿ ತಿಳಿಸಿದರು.

ನಗರದ ಮುತ್ಯಾಲಮ್ಮ ದೇವಾಲಯದಲ್ಲಿ ಕಾರ್ಯಕ್ರಮದ ಆಮಂತ್ರಣ ಪತ್ರಿಕೆಗಳನ್ನು ಬಿಡುಗಡೆ ಮಾಡಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಳೆದ 11 ವರ್ಷಗಳಿಂದ ಯಶಸ್ವಿಯಾಗಿ ನಡೆಯುತ್ತಿರುವ ಈ ಬೃಹತ್ ಕೇಸರಿ ಹಬ್ಬವು ಈ ಬಾರಿ ಮತ್ತಷ್ಟು ವೈಭವದಿಂದ ಜರುಗಲಿದೆ ಎಂದರು.

ಹಿಂದೂ ಸಮಾಜದ ಶಕ್ತಿ ಪ್ರದರ್ಶನವಾಗಿ ನಡೆಯುವ ಈ ಕಾರ್ಯಕ್ರಮದಲ್ಲಿ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕೆಂದು ಮನವಿ ಮಾಡಿದರು.

ಪತ್ರಿಕಾಗೋಷ್ಠಿಯಲ್ಲಿ ಮುಖಂಡರಾದ ಮಲ್ಲಿಕಾರ್ಜುನ್, ರಾಮ ಕಿಟ್ಟಿ, ಶ್ರೀನಿವಾಸ್, ಭಾಸ್ಕರ್ ಭಗತ್, ರವಿಕುಮಾರ್ ಹಾಗೂ ದುರ್ಗಾ ವಾಹಿನಿ ಮುಖಂಡರು ಉಪಸ್ಥಿತರಿದ್ದರು.



**ಮೂರು ದಿನಗಳ ಕಾರ್ಯಕ್ರಮದ ವಿವರ:**

ಮಾ. 27 (ವಾಹನ ಜಾಥಾ): ಅಂದು ಸಂಜೆ 4 ಗಂಟೆಗೆ ಪಾಲನಜೋಗಹಳ್ಳಿಯ ವಿನಾಯಕ ದೇವಾಲಯದಿಂದ ನಗರದ ಪ್ರಮುಖ ಬೀದಿಗಳಲ್ಲಿ ಬೈಕ್ ಹಾಗೂ ಕಾರುಗಳ ಬೃಹತ್ ಜಾಥಾ ನಡೆಯಲಿದೆ. ತಾಲ್ಲೂಕಿನ ಎಲ್ಲಾ ಗ್ರಾಮಗಳಲ್ಲಿ ಶ್ರೀರಾಮ ರಥಯಾತ್ರೆ ಸಂಚರಿಸಲಿದೆ.

ಮಾ. 28 (ಧಾರ್ಮಿಕ ಹಾಗೂ ಸೇವಾ ಕಾರ್ಯಗಳು): ಬೆಳಿಗ್ಗೆ ಗಣಪತಿ ಹೋಮ ಹಾಗೂ ಉಚಿತ ಸಂಜೀವಿನಿ ಆರೋಗ್ಯ ತಪಾಸಣಾ ಶಿಬಿರ ಜರುಗಲಿದೆ. ಸಂಜೆ 5 ಗಂಟೆಗೆ ಆನಂದ ಗುರೂಜಿ ಅವರ ನೇತೃತ್ವದಲ್ಲಿ ಬೃಹತ್ 'ದೀಪ ಲಕ್ಷ್ಮೀ ಪೂಜೆ' ನಡೆಯಲಿದ್ದು, ಮಹಿಳೆಯರು ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಲು ಕೋರಲಾಗಿದೆ.

ಮಾ. 29 (ಬೃಹತ್ ಶೋಭಾಯಾತ್ರೆ): ಮ. 11.30ಕ್ಕೆ ಭಗತ್ ಸಿಂಗ್ ಕ್ರೀಡಾಂಗಣದಿಂದ ಶೋಭಾಯಾತ್ರೆ ಆರಂಭವಾಗಲಿದೆ. ಮೆರವಣಿಗೆಯಲ್ಲಿ ಭಾರತ ಮಾತೆ, ಶ್ರೀರಾಮ, ಹನುಮ, ಶಿವ, ಅಂಬೇಡ್ಕರ್ ಹಾಗೂ ಇಮ್ಮಡಿ ಪುಲಿಕೇಶಿಯ ಪ್ರತಿಮೆಗಳು ಮತ್ತು ವಿವಿಧ ಕಲಾತಂಡಗಳು ಪಾಲ್ಗೊಳ್ಳಲಿವೆ.

ರಾವಣ ದಹನ: ಮೆರವಣಿಗೆಯ ನಂತರ ಬಜರಂಗದಳದ ದಕ್ಷಿಣ ಪ್ರಾಂತ ಸಂಯೋಜಕ ಪ್ರಭಂಜನ್ ಸೂರ್ಯ ಅವರಿಂದ ದಿಕ್ಸೂಚಿ ಭಾಷಣ ನಡೆಯಲಿದೆ. ಅಂತಿಮವಾಗಿ ಭಗತ್ ಸಿಂಗ್ ಕ್ರೀಡಾಂಗಣದಲ್ಲಿ ಆಕರ್ಷಕ ಲೇಸರ್ ಶೋ, ಬೃಹತ್ ರಾವಣ ದಹನ, ಸಿಡಿಮದ್ದುಗಳ ಪ್ರದರ್ಶನ ಇರಲಿದೆ.

# ಮನೆ ಮುಂದೆ ರಂಗೋಲಿ ಹಾಕುವಾಗ ಎಚ್ಚರ: ಪಿಎಸ್ಐ



ಶ್ರೀನಿವಾಸಪುರ

"ಇತ್ತೀಚಿನ ದಿನಗಳಲ್ಲಿ ಕಳ್ಳತನದಂತಹ ಅಪರಾಧಗಳು ಹೊಸ ಹೊಸ ರೂಪದಲ್ಲಿ ನಡೆಯುತ್ತಿದ್ದು, ಮಹಿಳೆಯರು ತಮ್ಮ ಸುರಕ್ಷತೆಯ ಬಗ್ಗೆ ಹೆಚ್ಚಿನ ಜಾಗರೂಕತೆ ವಹಿಸಬೇಕು," ಎಂದು ಶ್ರೀನಿವಾಸಪುರ ಪೊಲೀಸ್ ಠಾಣೆಯ ಪಿಎಸ್ಐ ಜಯರಾಮ್ ತಿಳಿಸಿದರು.

ಪಟ್ಟಣದ ಕೆಎಸ್ಆರ್‌ಟಿಸಿ ಹೊಸ ಬಸ್ ನಿಲ್ದಾಣದಲ್ಲಿ ಮಂಗಳವಾರ ಪೊಲೀಸ್ ಇಲಾಖೆ ವತಿಯಿಂದ ಹಮ್ಮಿಕೊಂಡಿದ್ದ 'ಅಪರಾಧ ತಡೆ ಕಾರ್ಯಕ್ರಮ'ಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಕಳ್ಳರ ತಂತ್ರದ ಬಗ್ಗೆ ಎಚ್ಚರಿಕೆ: "ವಿಶೇಷವಾಗಿ ಮಹಿಳೆಯರು ಬೆಳಿಗ್ಗೆ ಎದ್ದು ಮನೆಯ ಮುಂದೆ ಕಸ ಗುಡಿಸಿ, ರಂಗೋಲಿ ಹಾಕುವ ಸಮಯದಲ್ಲಿ ಕಳ್ಳರು ಸಕ್ರಿಯರಾಗಿರುತ್ತಾರೆ. ಆ ಸಮಯದಲ್ಲಿ ಕಳ್ಳರು ವಿಳಾಸ ಕೇಳುವ ನೆಪದಲ್ಲಿ ಬಂದು ಮಾತು ಬೆಳೆಸಬಹುದು. ನಿಮ್ಮ ಗಮನ ಬೇರೆಡೆ ಸೆಳೆದು ಅಥವಾ ಅಮಲು ಬರುವಂತಹ ವಸ್ತುಗಳನ್ನು ನೀಡಿ, ಮೈಮೇಲಿರುವ ಬಂಗಾರದ ಒಡವೆಗಳನ್ನು ಕಿತ್ತುಕೊಂಡು ಹೋಗುವ ಸಾಧ್ಯತೆ ಇರುತ್ತದೆ. ಇಂತಹ ಅಪರಿಚಿತರ ಬಗ್ಗೆ ತೀವ್ರ ಎಚ್ಚರಿಕೆ ವಹಿಸಬೇಕು," ಎಂದು ಅವರು ಸಲಹೆ ನೀಡಿದರು.

ಬಸ್ ನಿಲ್ದಾಣದಲ್ಲಿ ಪ್ರಯಾಣಿಕರಿಗೆ ಸುರಕ್ಷತಾ ಕ್ರಮಗಳ ಕುರಿತು ಮಾಹಿತಿ ನೀಡಿದ ಪೊಲೀಸರು, ಯಾವುದೇ ಸಂಶಯಾಸ್ಪದ ವ್ಯಕ್ತಿಗಳು ಅಥವಾ ಘಟನೆಗಳು ಕಂಡುಬಂದಲ್ಲಿ ತಕ್ಷಣ ಠಾಣೆಗೆ ಮಾಹಿತಿ ನೀಡುವಂತೆ ಕೋರಿದರು.

ಈ ಸಂದರ್ಭದಲ್ಲಿ ಪೊಲೀಸ್ ಠಾಣೆಯ ಎಸ್‌ಬಿ ರಾಜು, ಜೀಪ್ ಚಾಲಕ ಮೇಘರಾಜ್ ಹಾಗೂ ಪೊಲೀಸ್ ಸಿಬ್ಬಂದಿ ಉಪಸ್ಥಿತರಿದ್ದರು.

# ಮಾಲೂರು: ಮುಷ್ಕರಕ್ಕೆ ವೈದ್ಯರ ಅನುಮತಿಗೆ ಮನವಿ

ಮಾಲೂರು

ಕರ್ನಾಟಕ ಸರ್ಕಾರಿ ವೈದ್ಯಾಧಿಕಾರಿಗಳ ಸಂಘ ಹಾಗೂ ರಾಜ್ಯ ಆರೋಗ್ಯ ಮತ್ತು ವೈದ್ಯಕೀಯ ಶಿಕ್ಷಣ ಇಲಾಖೆ ನೌಕರರ ಸಂಘದ ಜಂಟಿ ಆಶ್ರಯದಲ್ಲಿ ವಿವಿಧ ಬೇಡಿಕೆಗಳ ಈಡೇರಿಕೆಗಾಗಿ ಇದೇ 11ರಿಂದ ರಾಜ್ಯಾದ್ಯಂತ ಅನಿರ್ದಿಷ್ಟಾವಧಿ ಮುಷ್ಕರಕ್ಕೆ ಕರೆ ನೀಡಲಾಗಿದೆ. ಇದರ ಅಂಗವಾಗಿ ಮಾಲೂರು ತಾಲ್ಲೂಕು ಘಟಕದ ವತಿಯಿಂದ ತಹಶೀಲ್ದಾರ್ ಕಚೇರಿ ಹಾಗೂ ಪೊಲೀಸ್ ಠಾಣೆಗೆ ಭೇಟಿ ನೀಡಿ ಮುಷ್ಕರಕ್ಕೆ ಅನುಮತಿ ಕೋರಿ ಮನವಿ ಪತ್ರ ಸಲ್ಲಿಸಲಾಯಿತು.



ಹಂತ ಹಂತವಾಗಿ ಹೋರಾಟ: ಈ ಕುರಿತು ಮಾಹಿತಿ ನೀಡಿದ ತಾಲ್ಲೂಕು ಆರೋಗ್ಯ ಅಧಿಕಾರಿ ಡಾ. ರಮೇಶ್ ಬಾಬು, "ಆರೋಗ್ಯ ಇಲಾಖೆಯ ಅಧಿಕಾರಿಗಳು ಮತ್ತು ನೌಕರರ ಹಲವು ವರ್ಷಗಳ ನ್ಯಾಯಯುತ ಬೇಡಿಕೆಗಳನ್ನು ಸರ್ಕಾರ ಈಡೇರಿಸಿಲ್ಲ. ಹೀಗಾಗಿ ಇದೇ 11 ರಿಂದ ಅನಿರ್ದಿಷ್ಟಾವಧಿ ಮುಷ್ಕರ ನಡೆಸಲು ತೀರ್ಮಾನಿಸಲಾಗಿದೆ. ಮೊದಲ ದಿನ ಕಪ್ಪು ಪಟ್ಟಿ ಧರಿಸಿ ಕರ್ತವ್ಯ ನಿರ್ವಹಿಸಲಾಗುವುದು ಹಾಗೂ ಹೊರರೋಗಿ (OPD) ಸೇವೆಗಳನ್ನು ಸ್ಥಗಿತಗೊಳಿಸಿ ಕೇವಲ ತುರ್ತು ಸೇವೆಗಳನ್ನು ಮಾತ್ರ ಒದಗಿಸಲಾಗುವುದು," ಎಂದು ತಿಳಿಸಿದರು.

ಸೋಮವಾರದಿಂದ ಕರ್ತವ್ಯಕ್ಕೆ ಗೈರು: ಮುಂದುವರಿದು ಮಾತನಾಡಿದ ಅವರು, "ಸೋಮವಾರದಿಂದ ಅನಿರ್ದಿಷ್ಟ ಅವಧಿಯವರೆಗೆ ಎಲ್ಲಾ ನೌಕರರು ಕರ್ತವ್ಯಕ್ಕೆ ಗೈರು ಹಾಜರಾಗುವ ಮೂಲಕ ಸರ್ಕಾರದ ಗಮನ ಸೆಳೆಯಲಿದ್ದೇವೆ. ಸಾರ್ವಜನಿಕರಿಗೆ ಆಗುವ ತೊಂದರೆಗೆ ಸರ್ಕಾರವೇ ನೇರ ಹೊಣೆ," ಎಂದು ಎಚ್ಚರಿಸಿದರು.

ಈ ಸಂದರ್ಭದಲ್ಲಿ ಸರ್ಕಾರಿ ಸಾರ್ವಜನಿಕ ಆಸ್ಪತ್ರೆಯ ವೈದ್ಯಾಧಿಕಾರಿ ಡಾ. ಶ್ರೀನಿವಾಸ್, ವೈದ್ಯರುಗಳಾದ ರಂಗನಾಥ್, ಸಂಗೀತ, ರಾಮರಾಜೇಶ್, ಮಧುಸೂದನ್ ಸೇರಿದಂತೆ ಹಲವು ಆರೋಗ್ಯ ಸಿಬ್ಬಂದಿಗಳು ಹಾಜರಿದ್ದರು.

# ಕೃಷಿ ಪರಿಕರಗಳ ಅಕ್ರಮ ಮಾರಾಟಕ್ಕೆ ಬೀಳಲಿದೆ ಬ್ರೇಕ್!



ಶ್ರೀನಿವಾಸಪುರ

"ತಾಲ್ಲೂಕಿನಲ್ಲಿ ಕೃಷಿ ಪರಿಕರಗಳನ್ನು ನಿಗದಿತ ಬೆಲೆಗಿಂತ ಹೆಚ್ಚಿನ ದರಕ್ಕೆ ಮಾರಾಟ ಮಾಡುತ್ತಿರುವ ಬಗ್ಗೆ ದೂರುಗಳು ಕೇಳಿಬಂದಿವೆ. ಈ ಕುರಿತು ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಚರ್ಚಿಸಿ, ತಪ್ಪಿತಸ್ಥ ಅಂಗಡಿ ಮಾಲೀಕರ ವಿರುದ್ಧ ಕಾನೂನು ಕ್ರಮ ಜರುಗಿಸಲಾಗುವುದು," ಎಂದು ಜಿಲ್ಲಾಧಿಕಾರಿ ಎಂ.ಆರ್. ರವಿ ಎಚ್ಚರಿಕೆ ನೀಡಿದರು.

ಮಂಗಳವಾರ ಪಟ್ಟಣದ ತಹಶೀಲ್ದಾರ್ ಕಚೇರಿಗೆ ಭೇಟಿ ನೀಡಿ, ವಿವಿಧ ಇಲಾಖಾ ದಾಖಲೆಗಳನ್ನು ಪರಿಶೀಲಿಸಿದ ನಂತರ ರೈತರ ಅಹವಾಲುಗಳನ್ನು ಆಲಿಸಿ ಅವರು ಮಾತನಾಡಿದರು.

ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ರಾಜ್ಯ ಪ್ರಧಾನ ಕಾರ್ಯದರ್ಶಿ ವೀರಭದ್ರಸ್ವಾಮಿ ಮಾತನಾಡಿ, "ಅಂಗಡಿ ಮಾಲೀಕರು ರೈತರ ಸಂಕಷ್ಟದ ಲಾಭ ಪಡೆಯುತ್ತಿದ್ದಾರೆ. ಮಂಚಿಂಗ್ ಪೇಪರ್‌ನ ಒಂದು ರೋಲ್ ಮೇಲೆ 600 ರಿಂದ 1,000 ರೂಪಾಯಿಗಳವರೆಗೆ ಹೆಚ್ಚಿನ ಬೆಲೆ ವಸೂಲಿ ಮಾಡುತ್ತಿದ್ದಾರೆ. ಹಳೆ ದಾಸ್ತಾನನ್ನು ಇಟ್ಟುಕೊಂಡು ಹೊಸ ಬೆಲೆಯಲ್ಲಿ ಮಾರಿ ದುಡ್ಡು ಮಾಡಿಕೊಳ್ಳುತ್ತಿರುವ ದಂಧೆ ಅವ್ಯಾಹತವಾಗಿ ನಡೆಯುತ್ತಿದೆ," ಎಂದು ಆಕ್ರೋಶ ವ್ಯಕ್ತಪಡಿಸಿದರು.

ಜಿಲ್ಲಾಧಿಕಾರಿಗಳ ಮಾರ್ಗದರ್ಶನದಲ್ಲಿ ಸಂಬಂಧಪಟ್ಟ ಕೃಷಿ ಇಲಾಖೆ ಅಧಿಕಾರಿಗಳು ತಕ್ಷಣವೇ ಅಂಗಡಿಗಳ ಮೇಲೆ ದಾಳಿ ನಡೆಸಬೇಕು. ಅಕ್ರಮವಾಗಿ ಸಂಗ್ರಹಿಸಿಟ್ಟಿರುವ ದಾಸ್ತಾನುಗಳನ್ನು ಮುಟ್ಟುಗೋಲು ಹಾಕಿಕೊಂಡು ರೈತರಿಗೆ ನ್ಯಾಯ ಒದಗಿಸಬೇಕು ಎಂದು ರೈತ ಮುಖಂಡರು ಒತ್ತಾಯಿಸಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಮಂಗಳ, ರೈತ ಸಂಘದ ಜಿಲ್ಲಾಧ್ಯಕ್ಷ ಯಲವಕುಂಟೆ ಬೈರಾರೆಡ್ಡಿ, ತಾಲ್ಲೂಕು ಅಧ್ಯಕ್ಷ ಮಾಸ್ತೇನಹಳ್ಳಿ ನಾರಾಯಣಸ್ವಾಮಿ, ಪ್ರಧಾನ ಕಾರ್ಯದರ್ಶಿ ಅಸ್ಲಾಮ್ ಪಾಷ, ಕಾರ್ಯದರ್ಶಿ ನಾರಾಯಣರೆಡ್ಡಿ ಹಾಗೂ ಸಂಘಟನಾ ಕಾರ್ಯದರ್ಶಿ ದೇವರಾಜಗೌಡ ಉಪಸ್ಥಿತರಿದ್ದರು.

# ಧರ್ಮಸ್ಥಳ ಯೋಜನೆಯ 907ನೇ ಕೆರೆ ಜೀರ್ಣೋದ್ಧಾರ: ರೈತರಿಗೆ ಹಸ್ತಾಂತರ

ಮಧುಗಿರಿ

"ಶ್ರೀ ಕ್ಷೇತ್ರ ಧರ್ಮಸ್ಥಳದ ಧರ್ಮಾಧಿಕಾರಿಗಳ ಆಶಯದಂತೆ ರಾಜ್ಯಾದ್ಯಂತ ಹಮ್ಮಿಕೊಂಡಿರುವ 'ನಮ್ಮೂರು ನಮ್ಮ ಕೆರೆ' ಯೋಜನೆಯಡಿ ಮಧುಗಿರಿ ತಾಲ್ಲೂಕಿನ ವೆಂಕಟಾಪುರದ ಸುತ್ತುಕಟ್ಟೆ ಕೆರೆಯನ್ನು 907ನೇ ಕೆರೆಯಾಗಿ ಜೀರ್ಣೋದ್ಧಾರಗೊಳಿಸಿ ಸಮಿತಿಗೆ ಹಸ್ತಾಂತರಿಸಲಾಗಿದೆ," ಎಂದು ಜಿಲ್ಲಾ ಜನಜಾಗೃತಿ ವೇದಿಕೆ ಅಧ್ಯಕ್ಷ ಲಾಲಪೇಟೆ ಮಂಜುನಾಥ್ ತಿಳಿಸಿದರು.

ತಾಲ್ಲೂಕಿನ ಕಸಬಾ ಹೋಬಳಿ ವೆಂಕಟಾಪುರದಲ್ಲಿ ನಡೆದ ಕೆರೆ ಅಭಿವೃದ್ಧಿ ಹಾಗೂ ಹಸ್ತಾಂತರ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ರೈತಪರ ಕಾರ್ಯಕ್ರಮ:

"ಮಧುಗಿರಿ ತಾಲ್ಲೂಕಿನಲ್ಲಿಯೇ ಖಾವಂದರು ಈಗಾಗಲೇ 8 ಕೆರೆಗಳನ್ನು ಜೀರ್ಣೋದ್ಧಾರ ಮಾಡಿಸಿದ್ದಾರೆ. ಈ ಭಾಗದ ರೈತರ ಬಗ್ಗೆ ಅವರಿಗೆ ವಿಶೇಷ ಕಾಳಜಿಯಿದೆ. ಕೆರೆಯಿಂದ ತೆಗೆದ ಫಲವತ್ತಾದ ಹೂಳು ರೈತರ ಜಮೀನು ಸೇರಿದ್ದು, ಮಳೆಗಾಲದಲ್ಲಿ ಕೆರೆ ತುಂಬಿ ಹರಿಯುವ ಮೂಲಕ ಅಂತರ್ಜಲ ಮಟ್ಟ ವೃದ್ಧಿಯಾಗಲಿದೆ. ಪೂಜ್ಯ ದಂಪತಿಗಳು ಆಲದ ಮರದಂತೆ ಲಕ್ಷಾಂತರ ಕುಟುಂಬಗಳಿಗೆ ಆಧಾರವಾಗಿದ್ದಾರೆ," ಎಂದು ಅವರು ಹರ್ಷ ವ್ಯಕ್ತಪಡಿಸಿದರು.

ಯೋಜನೆಯ ಹೆಜ್ಜೆಗುರುತು:



ತುಮಕೂರು ಜಿಲ್ಲಾ–2 ನಿರ್ದೇಶಕ ಪ್ರವೀಣ್ ಕುಮಾರ್ ಮಾತನಾಡಿ, "ಈ ಯೋಜನೆ ಆರಂಭವಾಗಿ 10 ವರ್ಷಗಳಾಗಿದ್ದು, ಮಾರ್ಚ್ ವೇಳೆಗೆ ರಾಜ್ಯದಲ್ಲಿ 1,000 ಕೆರೆಗಳನ್ನು ಅಭಿವೃದ್ಧಿಪಡಿಸುವ ಗುರಿ ಹೊಂದಲಾಗಿದೆ. ಸರ್ಕಾರ 50 ಲಕ್ಷ ರೂ. ಖರ್ಚು ಮಾಡಿ ಮಾಡುವ ಕೆಲಸವನ್ನು ನಮ್ಮ ಯೋಜನೆ ಕೇವಲ 10 ಲಕ್ಷ ರೂ.ಗಳಲ್ಲಿ ಅತ್ಯಂತ ದಕ್ಷತೆಯಿಂದ ಪೂರೈಸುತ್ತಿದೆ. ಕೆರೆಗಳ ಒತ್ತುವರಿ ತಡೆದು ಪರಿಸರ ಉಳಿಸುವುದು ಪೂಜ್ಯರ ಮುಖ್ಯ ಉದ್ದೇಶ," ಎಂದರು.

ಸಮಾಜಮುಖಿ ಸೇವೆ: "ಶುದ್ಧ ಕುಡಿಯುವ ನೀರಿನ ಘಟಕದ ಪರಿಕಲ್ಪನೆಯನ್ನು ಸರ್ಕಾರಕ್ಕಿಂತ ಮೊದಲೇ 2007–08ರಲ್ಲಿ ಅಮೇರಿಕಾ ಮತ್ತು ನಾರ್ವೆಯಿಂದ ಯಂತ್ರಗಳನ್ನು ತರಿಸಿ ರಾಜ್ಯಕ್ಕೆ ಪರಿಚಯಿಸಿದವರು ಖಾವಂದರು. ಇಂದು ರಾಜ್ಯದಾದ್ಯಂತ 600 ಘಟಕಗಳ ಮೂಲಕ ಸೇವೆ ನೀಡಲಾಗುತ್ತಿದೆ. ಬ್ಯಾಂಕುಗಳಿಂದ ಲಕ್ಷಾಂತರ ಜನರು ಪಡೆದ ಸಾಲಕ್ಕೆ ಸ್ವತಃ ಖಾವಂದರೇ ಜಾಮೀನು ನೀಡುವ ಮೂಲಕ ಜನರ ಆರ್ಥಿಕ ಸಬಲೀಕರಣಕ್ಕೆ ಶ್ರಮಿಸುತ್ತಿದ್ದಾರೆ," ಎಂದು ಪ್ರವೀಣ್ ಕುಮಾರ್ ಯೋಜನೆಯ ವಿಸ್ತಾರವನ್ನು ವಿವರಿಸಿದರು. ಕಾರ್ಯಕ್ರಮದಲ್ಲಿ ಕೆರೆ ಅಭಿವೃದ್ಧಿ ಸಮಿತಿ ಪದಾಧಿಕಾರಿಗಳು, ಯೋಜನೆಯ ಸಿಬ್ಬಂದಿ ಹಾಗೂ ವೆಂಕಟಾಪುರದ ಗ್ರಾಮಸ್ಥರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದರು.

# ಶಿಕ್ಷಣ, ಕಾನೂನಿನ ಬಲದಿಂದಲೇ ಮಹಿಳಾ ಸಬಲೀಕರಣ ಸಾಧ್ಯ: ವಕೀಲೆ ಸುಜಾತಾ

ದೊಡ್ಡಬಳ್ಳಾಪುರ

"ಸಮಾಜದಲ್ಲಿ ಮಹಿಳೆಯರ ಸ್ಥಾನಮಾನವು ಇತಿಹಾಸದುದ್ದಕ್ಕೂ ಅನೇಕ ಏರಿಳಿತಗಳನ್ನು ಕಂಡಿದೆ. ಇಂದು ಮಹಿಳೆಯರು ಶಿಕ್ಷಣ ಮತ್ತು ಕಾನೂನಿನ ಬಲದಿಂದ ಸಬಲೀಕರಣದತ್ತ ಸಾಗುತ್ತಿದ್ದಾರೆ," ಎಂದು ಖ್ಯಾತ ವಕೀಲೆ ಸುಜಾತಾ ಅಭಿಪ್ರಾಯಪಟ್ಟರು.

ನಗರದ ಭಗತ್ ಸಿಂಗ್ ಕ್ರೀಡಾಂಗಣದ ಪಕ್ಕದಲ್ಲಿರುವ ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿನ ವತಿಯಿಂದ ಹಮ್ಮಿಕೊಂಡಿದ್ದ 'ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆ'ಯನ್ನು ಗಿಡಕ್ಕೆ ನೀರೆರೆಯುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು.

ಸವಾಲುಗಳನ್ನು ಎದುರಿಸಿ ಮುನ್ನಡೆಯಿರಿ: "ಒಂದು ಕಾಲದಲ್ಲಿ ಮನೆಗೆ ಸೀಮಿತವಾಗಿದ್ದ ಮಹಿಳೆ ಇಂದು ವಿಜ್ಞಾನ, ರಾಜಕೀಯ ಮತ್ತು ಉದ್ಯಮ ಕ್ಷೇತ್ರಗಳಲ್ಲಿ ಮುಂಚೂಣಿಯಲ್ಲಿದ್ದಾಳೆ. ಆದಾಗ್ಯೂ, ಇಂದಿಗೂ ಲಿಂಗ ತಾರತಮ್ಯ ಮತ್ತು ಸುರಕ್ಷತೆಯ ಸವಾಲುಗಳು ಎದುರಾಗುತ್ತಿವೆ. ಸಮಾನ ಅವಕಾಶ ಮತ್ತು ಗೌರವದ ಮೂಲಕವೇ ನಿಜವಾದ ಸಬಲೀಕರಣ ಸಾಧ್ಯ," ಎಂದು ವಿದ್ಯಾರ್ಥಿನಿಯರಿಗೆ ಕರೆ ನೀಡಿದರು.



1908ರಲ್ಲಿ ಅಮೇರಿಕಾದ ಕಾರ್ಮಿಕ ಚಳವಳಿ ಹಾಗೂ ರಷ್ಯಾದ ಮಹಿಳೆಯರ 'ಬ್ರೆಡ್ ಮತ್ತು ಶಾಂತಿ' ಪ್ರತಿಭಟನೆಯ ಹಿನ್ನೆಲೆಯಲ್ಲಿ ಈ ದಿನ ಉದ್ಭವಿಸಿತು. ನಂತರ, ಮಹಿಳೆಯರಿಗೆ ಉನ್ನತ ಸ್ಥಾನಮಾನ ನೀಡುವ ನಿಟ್ಟಿನಲ್ಲಿ ವಿಶ್ವಸಂಸ್ಥೆಯು 1975ರಲ್ಲಿ ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆಯನ್ನು ಅಧಿಕೃತವಾಗಿ ಘೋಷಿಸಿತು.

- ಮಾಯಾ ಸಾರಂಗಪಾಣಿ, ಪ್ರಾಂಶುಪಾಲರು.

ಸಮಾಜದ ಬೆನ್ನೆಲುಬು ಮಹಿಳೆ: ಕಾಲೇಜಿನ ಪ್ರಾಂಶುಪಾಲೆ ಶ್ರೀಮತಿ ಮಾಯಾ ಸಾರಂಗಪಾಣಿ ಮಾತನಾಡಿ, "ಮಹಿಳೆ ಪ್ರೀತಿ, ತ್ಯಾಗ ಮತ್ತು ಧೈರ್ಯದ ಮೂರ್ತಿಯಾಗಿದ್ದು ಸಮಾಜದ ಬೆನ್ನೆಲುಬಾಗಿದ್ದಾಳೆ. ಹೆಣ್ಣು ಕಲಿತರೆ ಒಂದು ಶಾಲೆಯನ್ನು ತೆರೆದಂತೆ ಎಂಬ ಮಾತು ಅಕ್ಷರಶಃ ಸತ್ಯ. ಸಮಾಜದಲ್ಲಿ ಹೆಣ್ಣಿನ ಪಾತ್ರ ಬಹುಮುಖ್ಯವಾಗಿದೆ," ಎಂದರು.

ಕಾರ್ಯಕ್ರಮದಲ್ಲಿ ಐಕ್ಯೂಎಸಿ ಘಟಕದ ಸಂಚಾಲಕರಾದ ಡಾ. ಸುಷ್ಮಾ ಹೆಚ್., ಡಾ. ಜ್ಯೋತಿ ಬನ್ನಿಹಟ್ಟಿ ಹಾಗೂ ಕಾಲೇಜಿನ ಬೋಧಕ–ಬೋಧಕೇತರ ಸಿಬ್ಬಂದಿ ಮತ್ತು ನೂರಾರು ವಿದ್ಯಾರ್ಥಿನಿಯರು ಉಪಸ್ಥಿತರಿದ್ದರು.

# ಕ್ರೀಡಾಕೂಟ ಮುಂದೂಡಿಕೆ

ರಾಮನಗರ

2025– 26ನೇ ಸಾಲಿನ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಅಂಗವಾಗಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ವತಿಯಿಂದ ಜಿಲ್ಲಾ ಮಟ್ಟದ ಮಹಿಳಾ ಕ್ರೀಡಾಕೂಟವನ್ನು ಇದೇ 12 ರಂದು ಬೆಂಗಳೂರು ದಕ್ಷಿಣ ಜಿಲ್ಲಾ ಕ್ರೀಡಾಂಗಣದಲ್ಲಿ ಸಂಘಟಿಸಲು ಈಗಾಗಲೇ ತೀರ್ಮಾನಿಸಲಾಗಿದ್ದು, ಕಾರಣಾಂತರಗಳಿಂದ ಈ ಕ್ರೀಡಾಕೂಟವನ್ನು ಮುಂದೂಡಲಾಗಿರುತ್ತದೆ.

ಕ್ರೀಡಾಕೂಟದ ಮುಂದಿನ ದಿನಾಂಕವನ್ನು ಶೀಘ್ರದಲ್ಲಿ ತಿಳಿಸಲಾಗುವುದು. ಹೆಚ್ಚಿನ ಮಾಹಿತಿಗೆ ಸಹಾಯಕ ನಿರ್ದೇಶಕರು, ಬೆಂಗಳೂರು ದಕ್ಷಿಣ ಜಿಲ್ಲೆ. ಇಲ್ಲಿ ಖುದ್ದು ಅಥವಾ ಅಧೀಕ್ಷಕರ ದೂ.ಸಂಖ್ಯೆ: 9945533431 ಅಥವಾ ದ್ವಿತೀಯ ದರ್ಜೆ ಸಹಾಯಕರ ದೂ.ಸಂಖ್ಯೆ: 7892712502 ಅನ್ನು ಸಂಪರ್ಕಿಸುವಂತೆ ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸರ್ಕಾರಿ ಆಸ್ಪತ್ರೆಗಳಿಗೆ ಮುಷ್ಕರದ ಬಿಸಿ; ತುರ್ತು ಸೇವೆ ಮಾತ್ರ ಲಭ್ಯ

ವಿಜಯಪುರ

ಆರೋಗ್ಯ ಇಲಾಖೆಯ ಅಧಿಕಾರಿಗಳು ಹಾಗೂ ನೌಕರರು ಇದೇ 11 ರಿಂದ ಅನಿರ್ದಿಷ್ಟಾವಧಿ ಮುಷ್ಕರ ಹಮ್ಮಿಕೊಳ್ಳುತ್ತಿರುವುದರ ಪರಿಣಾಮವಾಗಿ, ಸಮುದಾಯ ಆರೋಗ್ಯ ಕೇಂದ್ರಗಳು ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ, ಹೊರರೋಗಿಗಳು ಹಾಗೂ ಒಳರೋಗಿಗಳಿಗೆ ತುರ್ತು ಚಿಕಿತ್ಸೆ ಮಾತ್ರ ಸಿಗಲಿದೆ.

ಇದೇ 11 ರಿಂದ 15 ರವರೆಗೆ ಕಪ್ಪುಪಟ್ಟಿ ಧರಿಸಿಕೊಂಡು ಹೊರರೋಗಿ ಸೇವೆ ನೀಡದೆ ತುರ್ತು ಸೇವೆ ಮಾತ್ರ ನೀಡಲಿದ್ದಾರೆ. ಮಾ. 16 ರಿಂದ ಅನಿರ್ದಿಷ್ಟಾವಧಿವರೆಗೆ ಕರ್ತವ್ಯಕ್ಕೆ ಹಾಜರಾಗದೇ ವೈದ್ಯರು ಹಾಗೂ ಸಿಬ್ಬಂದಿಯವರು ಮುಷ್ಕರದಲ್ಲಿ ಪಾಲ್ಗೊಳ್ಳಲಿದ್ದಾರೆ.

ಪಟ್ಟಣದ ಸಮುದಾಯ ಆರೋಗ್ಯ ಕೇಂದ್ರಕ್ಕೆ ಪ್ರತಿನಿತ್ಯ 400 ಕ್ಕೂ ಹೆಚ್ಚು ಮಂದಿ ಹೊರರೋಗಿಗಳು ಚಿಕಿತ್ಸೆಯನ್ನು ಪಡೆದುಕೊಳ್ಳುತ್ತಿದ್ದು, ವೈದ್ಯರು, ಹಾಗೂ ಸಿಬ್ಬಂದಿಯವರು, ಮುಷ್ಕರದಲ್ಲಿ ಭಾಗಿಯಾಗುವುದರಿಂದ ರೋಗಿಗಳಿಗೆ ತೊಂದರೆಯಾಗಲಿದೆ.





ವೈದ್ಯರ ಮುಷ್ಕರಕ್ಕೆ ಕಾರಣ: ರಾಜ್ಯದ ಎಲ್ಲಾ ಸರ್ಕಾರಿ ಆಸ್ಪತ್ರೆಗಳಿಗೆ ಕಾಲಕಾಲಕ್ಕೆ ಸಮರ್ಪಕವಾಗಿ ಇಲಾಖೆಯಿಂದ ಔಷಧಿಗಳನ್ನು ಸರಬರಾಜು ಮಾಡದೇ ಇರುವುದರಿಂದ ರೋಗಿಗಳಿಗೆ ತುಂಬಾ ತೊಂದರೆಯಾಗುತ್ತಿದ್ದರೂ ಇಲಾಖೆಯ ಎಚ್ಚೆತ್ತುಕೊಂಡಿಲ್ಲ.

ವೃಂದ ಮತ್ತು ನೇಮಕಾತಿ ನಿಯಮಗಳನ್ನು ಪ್ರತಿ 3 ವರ್ಷಕ್ಕೊಮ್ಮೆ ತಿದ್ದುಪಡಿ ಮಾಡಲು ಸರ್ಕಾರಿ ಆದೇಶವಿದ್ದರೂ, ಅದನ್ನು ಉಲ್ಲಂಘಿಸಿ, 1973 ರಿಂದ ಇಲ್ಲಿಯವರೆಗೆ ಆರೋಗ್ಯ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳನ್ನು ತಿದ್ದುಪಡಿ ಮಾಡದೇ ಇರುವುದು. ಇಲಾಖೆಯ ಎಲ್ಲಾ ವೃಂದಗಳ ಜೇಷ್ಠತಾ ಪಟ್ಟಿಯನ್ನು ಇದುವರೆವಿಗೂ ಪ್ರಕಟಿಸದೇ ಇರುವುದು.

ಇಲಾಖೆಯ ಎಲ್ಲಾ ವೃಂದದ ಯಾವುದೇ ಅಧಿಕಾರಿ–ನೌಕರರಿಗೆ 5 ವರ್ಷಗಳಿಂದ ಮುಂಬಡ್ತಿಗಳನ್ನು ನೀಡದೇ ಇರುವುದು. ನಿಯಮಗಳಲ್ಲಿ ಅವಕಾಶವಿದ್ದರೂ, ಸೇವಾನಿರತ ವೈದ್ಯರು, ಅಧಿಕಾರಿ–ನೌಕರರ ಉನ್ನತ ವ್ಯಾಸಂಗ/ಸ್ನಾತಕೋತ್ತರ ವ್ಯಾಸಂಗಕ್ಕೆ ಅವಕಾಶ ನೀಡದೇ ಇರುವುದು. ಇಲಾಖೆಯ ವರ್ಗಾವಣೆ ಕಾಯಿದೆಯಲ್ಲಿನ ನ್ಯೂನತೆಗಳನ್ನು ಸರಿಪಡಿಸದೇ ಅವೈಜ್ಞಾನಿಕವಾಗಿ ಕೌನ್ಸಿಲಿಂಗ್ ವರ್ಗಾವಣೆ ಮಾಡುತ್ತಿರುವುದು.

ತಾಲೂಕಿನಲ್ಲಿನ ಸಾರ್ವಜನಿಕ ಆಸ್ಪತ್ರೆ, ಸಮುದಾಯ ಆರೋಗ್ಯ ಕೇಂದ್ರಗಳು, ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ತುರ್ತು ಚಿಕಿತ್ಸೆಗೆ ಯಾವುದೇ ತೊಡಕುಂಟಾಗದಂತೆ, ರೋಗಿಗಳೊಂದಿಗೆ ಸೌಜನ್ಯದಿಂದ ವರ್ತಿಸಬೇಕು, ಅಗತ್ಯ ತುರ್ತು ಚಿಕಿತ್ಸೆಗಳನ್ನು ನೀಡುವಂತೆ ಸೂಚನೆ ನೀಡಲಾಗಿದೆ. ಸಾರ್ವಜನಿಕರೂ ಸಹಕಾರ ನೀಡಬೇಕು.

- ಮುತಾಫೀರ್ ಅಫೀಜ್ ತಾಲೂಕು ಆರೋಗ್ಯಾಧಿಕಾರಿ ದೇವನಹಳ್ಳಿ

ವೈದ್ಯಕೀಯ ಶಿಕ್ಷಣ ಇಲಾಖೆಯ ಸ್ವಾಯತ್ತ ಸಂಸ್ಥೆಗಳಲ್ಲಿ ಹಾಗೂ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆ, ಮಹಾನಗರ ಪಾಲಿಕೆ ಹಾಗೂ ನಗರ ಪಾಲಿಕೆಗಳಲ್ಲಿ ಮಂಜೂರಾಗಿರುವ ಆರೋಗ್ಯ ಇಲಾಖೆಯ ಎಸ್–ಕೇಡರ್ ಹುದ್ದೆಗಳಿಗೆ ನೇಮಕಾತಿ, ಮುಂಬಡ್ತಿ ಮತ್ತು ವರ್ಗಾವಣೆಗಳಿಗೆ ಆರೋಗ್ಯ ಇಲಾಖೆಯ ವೈದ್ಯರು, ಅಧಿಕಾರಿ–ನೌಕರರನ್ನೇ ನಿಯೋಜಿಸಬಾರದು. ಸಾರ್ವಜನಿಕರಿಗೆ ಉತ್ತಮ ಸೇವೆ ನೀಡುವ ದೃಷ್ಟಿಯಿಂದ, ಇಲಾಖೆಯಲ್ಲಿ ಖಾಲಿ ಇರುವ ವೈದ್ಯರು, ಅರೆ ವೈದ್ಯಕೀಯ ಹಾಗೂ ಇತರೆ ವೃಂದದ ಹುದ್ದೆಗಳನ್ನು ಭರ್ತಿ ಮಾಡಬೇಕು.

ಗುತ್ತಿಗೆ ವೈದ್ಯರು–ನೌಕರರು ಹಾಗೂ ಎನ್.ಹೆಚ್.ಎಂ. ಗುತ್ತಿಗೆ ನೌಕರರಿಗೆ ಸೇವಾ ಭದ್ರತೆ ಹಾಗೂ ಕಾಲ ಕಾಲಕ್ಕೆ ಸೂಕ್ತ ವೇತನ ಹೆಚ್ಚಳ ಮಾಡಬೇಕು. ಇಲಾಖೆಯಲ್ಲಿ ಕೇಂದ್ರ ಪುರಸ್ಕೃತ ಯೋಜನೆಯಡಿ ಕಾರ್ಯನಿರತ ಸುಮಾರು 6000 ನೌಕರರಿಗೆ ಹಲವಾರು ವರ್ಷಗಳಿಂದ 3–4 ತಿಂಗಳಿಗೊಮ್ಮೆ ವೇತನ ಭತ್ಯೆಗಳನ್ನು ನೀಡುತ್ತಿರುವುದು. ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ವೈದ್ಯರು, ತಜ್ಞವೈದ್ಯರು ಇತರೆ ಸಿಬ್ಬಂದಿಯವರಿಗೆ ಸಿಜಿಹೆಚ್‌ಎಸ್, ಎಐಸಿಟಿಇ (ವೈದ್ಯಕೀಯ ಶಿಕ್ಷಣ ಇಲಾಖೆಯ ಮಾದರಿಯಲ್ಲಿ) ವೇತನ ನೀಡುವುದು ಎಂಬ ಬೇಡಿಕೆಗಳನ್ನು ಇಟ್ಟುಕೊಂಡು ವೈದ್ಯರು ಹಾಗೂ ಸಿಬ್ಬಂದಿ ಮುಷ್ಕರ ಕೈಗೊಳ್ಳಲಿದ್ದಾರೆ.

# 13ರಂದು ಜನಸಂಪರ್ಕ ಸಭೆ

ತುಮಕೂರು

ಜಿಲ್ಲೆಯ ನಾಗರಿಕರಿಂದ ಅಹವಾಲು ಸ್ವೀಕರಿಸಿ/ಸಮಸ್ಯೆಗಳನ್ನು ಆಲಿಸಿ ಸಮಸ್ಯೆಗಳಿಗೆ ಪರಿಹಾರೋಪಾಯಗಳನ್ನು ಒದಗಿಸುವ ಸಲುವಾಗಿ ಮಾರ್ಚ್ 13ರಂದು ಕೊರಟಗೆರೆ ತಾಲ್ಲೂಕು ಕಚೇರಿ ಸಭಾಂಗಣದಲ್ಲಿ ಬೆಳಿಗ್ಗೆ 10 ರಿಂದ ಮಧ್ಯಾಹ್ನ 1 ಗಂಟೆಯವರೆಗೆ ಹಾಗೂ ಶಿರಾ ತಾಲ್ಲೂಕು ಕಚೇರಿ ಸಭಾಂಗಣದಲ್ಲಿ ಮಧ್ಯಾಹ್ನ 2.30 ರಿಂದ ಸಂಜೆ 5.30 ಗಂಟೆಯವರೆಗೆ 'ಜನಸಂಪರ್ಕ ಸಭೆ'ಯನ್ನು ಏರ್ಪಡಿಸಲಾಗಿದೆ.

ಕೊರಟಗೆರೆ ಹಾಗೂ ಶಿರಾ ತಾಲ್ಲೂಕಿನ ನಾಗರಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕೆಂದು ಜಿಲ್ಲಾಧಿಕಾರಿ ಶುಭ ಕಲ್ಯಾಣ್ ತಿಳಿಸಿದ್ದಾರೆ.

12/03/2026
# ಭಾರತ ಸಾರಥಿ
BHARATHA SARATHI KANNADA DAILY NEWS PAPER
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com



ರಾಮನಗರ ಜಿಲ್ಲೆಯ ಕನಕಪುರ ತಾಲ್ಲೂಕಿನ ಶಿವನಹಳ್ಳಿ ವೀರಭದ್ರಸ್ವಾಮಿ ದೇವಾಲಯದ ಜೀರ್ಣೋದ್ಧಾರ ಕಾಮಗಾರಿಗಳನ್ನು ಸಿದ್ದಗಂಗಾ ಮಠದ ಸಿದ್ಧಲಿಂಗ ಮಹಾಸ್ವಾಮಿಗಳು ಹಾಗೂ ದೇಗುಲ ಮಠದ ಚನ್ನಬಸವ ಸ್ವಾಮೀಜಿ ವೀಕ್ಷಿಸಿದರು.



ತುಮಕೂರು ಜಿಲ್ಲೆಯ ಮಧುಗಿರಿ ತಾಲ್ಲೂಕು ಕೇಂದ್ರದಲ್ಲಿ ಯೋಗಿವರ್ಯ ಶ್ರೀ ಕೈವಾರ ತಾತಯ್ಯನವರ ಜಯಂತಿಯನ್ನು ಬಲಿಜ ಸಮುದಾಯದ ವತಿಯಿಂದ ಅತ್ಯಂತ ಶ್ರದ್ಧಾಭಕ್ತಿ ಹಾಗೂ ಸಡಗರದಿಂದ ಆಚರಿಸಲಾಯಿತು. ಕಾರ್ಯಕ್ರಮದಲ್ಲಿ ಸಮುದಾಯದ ಹಿರಿಯರು, ಯುವಕರು ಹಾಗೂ ಮಹಿಳೆಯರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.



ಕನಕಪುರ ಸಾತನೂರಿನ ಗ್ರಾಮಾಂತರ ಪ್ರೌಢಶಾಲೆಯಲ್ಲಿ 2001-02 ರಲ್ಲಿ ಎಸ್ಎಸ್ಎಲ್‌ಸಿಯಲ್ಲಿ ವ್ಯಾಸಂಗ ಮಾಡಿದ 148 ವಿದ್ಯಾರ್ಥಿಗಳಿಂದ ತಮಗೆ ಬೋಧನೆ ಮಾಡಿದ ಗುರುಗಳಿಗೆ ಗುರುವಂದನೆ ಹಾಗೂ ಸ್ನೇಹ ಸಮ್ಮಿಲನ ಕಾರ್ಯಕ್ರಮವನ್ನು ಗ್ರಾಮಾಂತರ ಪ್ರೌಢಶಾಲೆಯಲ್ಲಿ ಹಮ್ಮಿಕೊಳ್ಳಲಾಯಿತು.

## ಕಾಡುಪ್ರಾಣಿಗಳು ನಾಡಿಗೆ ಬರದಂತೆ ತಡೆಯಲು ಅರಣ್ಯೀಕರಣವೇ ಮದ್ದು: ಪ್ರವೀಣ್ ಕುಮಾರ್

ಮಧುಗಿರಿ

"ಇತ್ತೀಚಿನ ದಿನಗಳಲ್ಲಿ ಆಹಾರ ಅರಸಿ ಕಾಡುಪ್ರಾಣಿಗಳು ನಾಡಿಗೆ ಬರುವುದು ಹೆಚ್ಚಾಗುತ್ತಿದೆ. ಇದನ್ನು ತಡೆಯಲು ಹಾಗೂ ಭೂಮಿಗೆ ಬಿದ್ದ ಮಳೆ ನೀರನ್ನು ಇಂಗಿಸಲು ಅರಣ್ಯೀಕರಣವು ಮಹತ್ತರ ಪಾತ್ರವಹಿಸಲಿದೆ," ಎಂದು ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ತುಮಕೂರು-2 ನಿರ್ದೇಶಕ ಪ್ರವೀಣ್ ಕುಮಾರ್ ತಿಳಿಸಿದರು.

ತಾಲ್ಲೂಕಿನ ಕಸಬಾ ಶೆಟ್ಟಿಹಳ್ಳಿಯ ಮಾರಮ್ಮ ದೇಗುಲದ ಆವರಣದಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಘ ಹಾಗೂ ಅಖಿಲ ಕರ್ನಾಟಕ ಜನಜಾಗೃತಿ ವೇದಿಕೆ ವತಿಯಿಂದ ಆಯೋಜಿಸಿದ್ದ 'ಸಾಮಾಜಿಕ ಅರಣ್ಯೀಕರಣ' ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

<u>ಕಾಡುಪ್ರಾಣಿಗಳ ಹಾವಳಿ ತಪ್ಪಿಸಲು ಕ್ರಮ:</u> "ಜನವಸತಿ ಪ್ರದೇಶದಿಂದ ದೂರವಿರುವ ಅರಣ್ಯ ಪ್ರದೇಶಗಳಲ್ಲಿ ಹಣ್ಣಿನ ಗಿಡಗಳನ್ನು ನೆಟ್ಟು ಪೋಷಿಸುವುದು ಈ ಯೋಜನೆಯ ಮೂಲ ಉದ್ದೇಶವಾಗಿದೆ. ಪ್ರಾಣಿಗಳಿಗೆ ಕಾಡಿನಲ್ಲೇ ಹಣ್ಣು ಮತ್ತು ಆಹಾರ ಸಿಕ್ಕರೆ ಅವು ಗ್ರಾಮಗಳಿಗೆ ಬರುವುದಿಲ್ಲ. ಇದರಿಂದ ಜೀವಹಾನಿ ಹಾಗೂ ಆಸ್ತಿಪಾಸ್ತಿ ನಷ್ಟವನ್ನು ತಪ್ಪಿಸಬಹುದು. ಮರಗಳು ಮಳೆ ನೀರನ್ನು ಹಿಡಿದಿಟ್ಟು ಅಂತರ್ಜಲ ವೃದ್ಧಿಗೂ ಸಹಕಾರಿಯಾಗಲಿವೆ," ಎಂದು ಅವರು ವಿವರಿಸಿದರು.

<u>ಪೂಜ್ಯ ಖಾವಂದರ ದೂರದೃಷ್ಟಿ:</u> ಜಿಲ್ಲಾ ಜನಜಾಗೃತಿ ವೇದಿಕೆ ಅಧ್ಯಕ್ಷ ಲಾಲಪೇಟೆ ಮಂಜುನಾಥ್ ಮಾತನಾಡಿ, "ಬಯಲುಸೀಮೆ ಪ್ರದೇಶದಲ್ಲಿ ಅರಣ್ಯ ಸಂಪತ್ತು ಕಡಿಮೆಯಾಗುತ್ತಿರುವ ಬಗ್ಗೆ ಪೂಜ್ಯ ವೀರೇಂದ್ರ ಹೆಗ್ಗಡೆಯವರು ಕಳವಳ ವ್ಯಕ್ತಪಡಿಸಿ ಈ ಯೋಜನೆ ಜಾರಿಗೊಳಿಸಿದ್ದಾರೆ. ಸಮಾಜದ ಕಟ್ಟಕಡೆಯ ವ್ಯಕ್ತಿಯೂ ಆರ್ಥಿಕವಾಗಿ ಮತ್ತು ಸಾಮಾಜಿಕವಾಗಿ ಸಶಕ್ತನಾಗುವಂತೆ ಅವರು ರೂಪಿಸಿರುವ ಯೋಜನೆಗಳು ಸರ್ಕಾರದ ಯೋಜನೆಗಳಿಗಿಂತ ವೇಗವಾಗಿ ಜನರನ್ನು ತಲುಪುತ್ತಿವೆ," ಎಂದರು.

ಈ ಸಂದರ್ಭದಲ್ಲಿ ತಾಲ್ಲೂಕು ಯೋಜನಾಧಿಕಾರಿ ಶಶಿಧರ್, ಕೃಷಿ ಮೇಲ್ವಿಚಾರಕ ಕುಮಾರ್, ಒಕ್ಕೂಟದ ಅಧ್ಯಕ್ಷ ಕೊಂಡವಾಡಿ ಶಿವರಾಂ, ಸಮಿತಿ ಅಧ್ಯಕ್ಷ ರಂಗನಾಥಪ್ಪ, ವಲಯ ಮೇಲ್ವಿಚಾರಕಿ ವೈಶಾಲಿ ಹಾಗೂ ಗ್ರಾಮದ ಮುಖಂಡರು ಉಪಸ್ಥಿತರಿದ್ದರು.




## 'ಪಂಚಾಯತ್ ಸಮರಕ್ಕೆ ಜೆಡಿಎಸ್ ಸಜ್ಜು'

ವಿಜಯಪುರ

"ಮುಂಬರುವ ಜಿಲ್ಲಾ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ ಹಾಗೂ ಗ್ರಾಮ ಪಂಚಾಯಿತಿ ಚುನಾವಣೆಗಳಲ್ಲಿ ಪಕ್ಷದ ವರಿಷ್ಠರ ಮಾರ್ಗದರ್ಶನದಂತೆ ಸ್ಪರ್ಧಿಸಲಿದ್ದು, ಕ್ಷೇತ್ರದಲ್ಲಿ ಜೆಡಿಎಸ್ ಅತಿ ಹೆಚ್ಚಿನ ಸ್ಥಾನಗಳಲ್ಲಿ ಗೆಲುವು ಸಾಧಿಸಲಿದೆ," ಎಂದು ಮಾಜಿ ಶಾಸಕ ನಿಸರ್ಗ ನಾರಾಯಣಸ್ವಾಮಿ ವಿಶ್ವಾಸ ವ್ಯಕ್ತಪಡಿಸಿದರು.

ಹೋಬಳಿಯ ಚಂದೇನಹಳ್ಳಿ ಗ್ರಾಮದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕ್ಷೇತ್ರದಲ್ಲಿ ಪಕ್ಷದ ಸಂಘಟನಾ ಸ್ಥಿತಿಗತಿ ಹಾಗೂ ಮುಂಬರುವ ಚುನಾವಣೆಗಳ ಬಗ್ಗೆ ತಮ್ಮ ನಿಲುವನ್ನು ಹಂಚಿಕೊಂಡರು.

<u>ಮೈತ್ರಿ ಹಾಗೂ ಒಗ್ಗಟ್ಟಿನ ಮಂತ್ರ:</u> "ಬಿಜೆಪಿಯೊಂದಿಗೆ ಮೈತ್ರಿ ಮುಂದುವರಿಸುವ ಕುರಿತು ಪಕ್ಷದ ಹೈಕಮಾಂಡ್ ತೆಗೆದುಕೊಳ್ಳುವ ಯಾವುದೇ ತೀರ್ಮಾನಕ್ಕೆ ನಾವು ಬದ್ಧರಾಗಿ ಕೆಲಸ ಮಾಡುತ್ತೇವೆ. ಜೆಡಿಎಸ್ ಒಂದು ಕುಟುಂಬವಿದ್ದಂತೆ. ಸಣ್ಣಪುಟ್ಟ ಭಿನ್ನಾಭಿಪ್ರಾಯಗಳಿದ್ದರೂ ನಾವೆಲ್ಲರೂ ಒಂದಾಗಿದ್ದೇವೆ. ಯಾವುದೇ ಗುಂಪುಗಾರಿಕೆ ಅಥವಾ ಗೊಂದಲಗಳಿಗೆ ನಮ್ಮಲ್ಲಿ ಆಸ್ಪದವಿಲ್ಲ. ನಿಷ್ಠಾವಂತ ಕಾರ್ಯಕರ್ತರ ಪಡೆಯೊಂದಿಗೆ ಪಕ್ಷವನ್ನು ಮತ್ತಷ್ಟು ಸದೃಢವಾಗಿ ಕಟ್ಟುತ್ತೇವೆ," ಎಂದು ಅವರು ಸ್ಪಷ್ಟಪಡಿಸಿದರು.

<u>ಅಭಿವೃದ್ಧಿ ಕೆಲಸಗಳೇ ಮತ ನೀಡಲಿವೆ:</u> "ನಾನು ಶಾಸಕನಾಗಿದ್ದ ಅವಧಿಯಲ್ಲಿ ಪ್ರತಿ ಗ್ರಾಮಕ್ಕೂ ಅನುದಾನ ನೀಡಿ ರಸ್ತೆ, ಸಮುದಾಯ ಭವನ ಹಾಗೂ ಶಾಲೆಗಳ ಅಭಿವೃದ್ಧಿಗೆ ಒತ್ತು ನೀಡಿದ್ದೆ. ಮಹಿಳಾ ಸಬಲೀಕರಣಕ್ಕಾಗಿ ಹಮ್ಮಿಕೊಂಡಿದ್ದ ಕಾರ್ಯಕ್ರಮಗಳನ್ನು ವಿರೋಧ ಪಕ್ಷದವರೂ ಇಂದಿಗೂ ಸ್ಮರಿಸುತ್ತಿರುವುದು ನನಗೆ ತೃಪ್ತಿ ನೀಡಿದೆ. ಜನರ ಆಶೀರ್ವಾದದೊಂದಿಗೆ ಜೆಡಿಎಸ್ ಕ್ಷೇತ್ರದಲ್ಲಿ ಭರ್ಜರಿ ಯಶಸ್ಸು ಕಾಣಲಿದೆ," ಎಂದರು.



ಈ ಸಂದರ್ಭದಲ್ಲಿ ಜೆಡಿಎಸ್ ಜಿಲ್ಲಾಧ್ಯಕ್ಷ ಕೋಡಗುರ್ಕಿ ಮಂಜುನಾಥ್, ಮುಖಂಡರಾದ ಮಹೇಶ್ ಕುಮಾರ್, ಹೊಸಹಳ್ಳಿ ರವಿ, ಚಂದೇನಹಳ್ಳಿ ಭರತ್ ಸೇರಿದಂತೆ ಪ್ರಮುಖರು ಉಪಸ್ಥಿತರಿದ್ದರು.

## ಪೆದ್ದಿಹಳ್ಳಿ ಕರಿಯಮ್ಮ ದೇವಿ ಜಾತ್ರೆ ಮಹೋತ್ಸವಕ್ಕೆ ಚಾಲನೆ



ತಿಪಟೂರು

ತಾಲ್ಲೂಕಿನ ಕಸಬಾ ಹೋಬಳಿಯ ಪೆದ್ದಿಹಳ್ಳಿ ಗ್ರಾಮದ 33 ಹಳ್ಳಿಗಳ ಗ್ರಾಮದೇವತೆ ಎಂದೇ ಪ್ರಸಿದ್ಧವಾಗಿರುವ ಶ್ರೀ ಕರಿಯಮ್ಮ ದೇವಿಯವರ ವಾರ್ಷಿಕ ಜಾತ್ರಾ ಮಹೋತ್ಸವವು ಮಾರ್ಚ್ 10 ರಿಂದ ಅತ್ಯಂತ ವಿಜೃಂಭಣೆಯಿಂದ ಆರಂಭಗೊಂಡಿದೆ ಎಂದು ದೇವಸ್ಥಾನದ ಧರ್ಮದರ್ಶಿ ಕೆ.ಎಸ್. ಪ್ರಶಾಂತ್ ತಿಳಿಸಿದ್ದಾರೆ.

ಮಂಗಳವಾರದಿಂದ ವಿವಿಧ ಧಾರ್ಮಿಕ ವಿಧಿವಿಧಾನಗಳೊಂದಿಗೆ ಚಾಲನೆ ಸಿಕ್ಕಿದ್ದು, ಅಂದು ಆರತಿಬಾನ, ರಾತ್ರಿ 8 ಗಂಟೆಗೆ ಬಾಯಿಬೀಗ, ಬೇವನ ಉಡುಗೆ ಉತ್ಸವ ಹಾಗೂ ಮಹಾ ಮಂಗಳಾರತಿ ನೆರವೇರಲಿದೆ.

<u>ಜಾತ್ರಾ ಮಹೋತ್ಸವದ ಪ್ರಮುಖ ಕಾರ್ಯಕ್ರಮಗಳು:</u>

<u>ಮಾರ್ಚ್ 11 (ಬುಧವಾರ):</u> ಅಂದು ಅನ್ನಶಾಂತಿ ಹಾಗೂ ಗಂಗಾಸ್ನಾನ ಕಾರ್ಯಕ್ರಮಗಳು ಜರುಗಲಿವೆ. ಮಧ್ಯಾಹ್ನ 12 ಗಂಟೆಗೆ 'ಸಾಯುವ ಸೋಮ' ದೇವರ ವಿಶೇಷ ಕಾರ್ಯಕ್ರಮ ನಡೆಯಲಿದ್ದು, ಶ್ರೀ ಕರಿಯಮ್ಮ ದೇವಿಯವರು ಸತ್ತ ಸೋಮನಿಗೆ ಜೀವದಾನ ಮಾಡಿ ಉಳಿಸುವ ಅದ್ಭುತ ಪೌರಾಣಿಕ ಹಿನ್ನೆಲೆಯ ಜಾತ್ರೆ ನಡೆಯಲಿದೆ.

<u>ಮಾರ್ಚ್ 12 (ಗುರುವಾರ):</u> ಮಧ್ಯಾಹ್ನ 4 ಗಂಟೆಗೆ ಗ್ರಾಮದ ಪ್ರಮುಖ ಬೀದಿಗಳಲ್ಲಿ ಅದ್ದೂರಿ ಸಿಡಿ ಉತ್ಸವ ಹಾಗೂ ದೇವಿಗೆ ವಿಶೇಷ ಹೂವಿನ ಅಲಂಕಾರ ಪೂಜೆ ನೆರವೇರಲಿದೆ.

<u>ಮಾರ್ಚ್ 13 (ಶುಕ್ರವಾರ):</u> ಜಾತ್ರೆಯ ಪ್ರಮುಖ ಆಕರ್ಷಣೆಯಾದ ಶ್ರೀ ಕರಿಯಮ್ಮ ದೇವಿಯವರ ಬ್ರಹ್ಮ ರಥೋತ್ಸವ ಜರುಗಲಿದೆ. ಸಂಜೆ 6 ಗಂಟೆಗೆ ಓಕಳಿ ಉತ್ಸವದೊಂದಿಗೆ ಜಾತ್ರಾ ಮಹೋತ್ಸವಕ್ಕೆ ತೆರೆ ಬೀಳಲಿದೆ.

33 ಹಳ್ಳಿಗಳ ಭಕ್ತರು ಈ ಧಾರ್ಮಿಕ ಕಾರ್ಯಕ್ರಮಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ದೇವಿಯ ಕೃಪೆಗೆ ಪಾತ್ರರಾಗಬೇಕೆಂದು ದೇವಸ್ಥಾನದ ಆಡಳಿತ ಮಂಡಳಿ ಪ್ರಕಟಣೆಯಲ್ಲಿ ಕೋರಿದೆ.

## ಮೇಲ್ಸೇತುವೆ ಬದಲಿಗೆ ರಿಂಗ್ ರಸ್ತೆ ನಿರ್ಮಿಸಲು ಆಗ್ರಹ

ಮಾಲೂರು

"ಬೆಂಗಳೂರು ರಸ್ತೆಯಿಂದ ಹೊಸೂರು ಮತ್ತು ಕೋಲಾರ ರಸ್ತೆಯವರೆಗೆ ನಿರ್ಮಿಸಲಾಗುತ್ತಿರುವ ಫ್ಲೈ ಓವರ್ ಸಂಪೂರ್ಣ ಅವೈಜ್ಞಾನಿಕವಾಗಿದ್ದು, ಸಾರ್ವಜನಿಕ ಹಿತಾಸಕ್ತಿಗೆ ವಿರುದ್ಧವಾಗಿದೆ. ಇದನ್ನು ತಡೆದು ರಿಂಗ್ ರಸ್ತೆ ನಿರ್ಮಿಸುವಂತೆ ಆಗ್ರಹಿಸಿ ಮಾರ್ಚ್ 11ರ ಬುಧವಾರದಂದು ಪಟ್ಟಣದಲ್ಲಿ ಬೃಹತ್ ಜನಜಾಗೃತಿ ಜಾಥಾ ಹಮ್ಮಿಕೊಳ್ಳಲಾಗಿದೆ," ಎಂದು ಮಾಜಿ ನಗರಸಭಾ ಸದಸ್ಯ ಆಲೂ ಮಂಜು ತಿಳಿಸಿದರು.



ನಗರದ ತಾಲ್ಲೂಕು ಕಾರ್ಯನಿರತ ಪತ್ರಕರ್ತರ ಭವನದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಯೋಜನೆಯಲ್ಲಿನ ದೋಷಗಳನ್ನು ಎತ್ತಿ ತೋರಿಸಿದರು.

<u>ಅವೈಜ್ಞಾನಿಕ ಕಾಮಗಾರಿಯ ಆರೋಪ:</u> "70 ವರ್ಷಗಳ ಹಳೆಯ ರೈಲ್ವೆ ಮೇಲ್ಸೇತುವೆಯನ್ನು ಅಗಲೀಕರಣ ಮಾಡದೆ ಫ್ಲೈ ಓವರ್ ನಿರ್ಮಿಸುತ್ತಿರುವುದು ತಾಂತ್ರಿಕವಾಗಿ ತಪ್ಪು. ಮಾಸ್ಟರ್ ಪ್ಲಾನ್‌ನಲ್ಲಿ ರಿಂಗ್ ರಸ್ತೆಗೆ ಜಾಗ ಮೀಸಲಿಡಲಾಗಿದ್ದರೂ, ಪರಿಸರ ನಾಶ ಮಾಡುವ ಫ್ಲೈ ಓವರ್ ಯೋಜನೆಗೆ ಮನ್ನಣೆ ನೀಡಲಾಗಿದೆ. ಈ ಯೋಜನೆಯಿಂದಾಗಿ ಮಾಲೂರಿನ ಸ್ಥಳೀಯ ಸಾರ್ವಜನಿಕರೂ ಸಹ ಟೋಲ್ ಕಟ್ಟಬೇಕಾದ ಅನಿವಾರ್ಯತೆ ಎದುರಾಗಲಿದೆ," ಎಂದು ಅವರು ಕಳವಳ ವ್ಯಕ್ತಪಡಿಸಿದರು.

<u>ವ್ಯಾಪಾರ ಮತ್ತು ಸೌಂದರ್ಯಕ್ಕೆ ಧಕ್ಕೆ:</u> "ಮೇಲ್ಸೇತುವೆ ನಿರ್ಮಾಣದಿಂದ ನಗರದ ಸೌಂದರ್ಯ ಹಾಳಾಗುವುದಲ್ಲದೆ, ನೂರಾರು ಕಟ್ಟಡಗಳನ್ನು ಕಾನೂನು ಬಾಹಿರವಾಗಿ ಕೆಡವಲಾಗಿದೆ. ಇದರಿಂದ ವ್ಯಾಪಾರ ವಹಿವಾಟಿನ ಮೇಲೆ ಗಂಭೀರ ಹೊಡೆತ ಬೀಳಲಿದ್ದು, ಸಂಚಾರ ದಟ್ಟಣೆಯೂ ಹೆಚ್ಚಾಗಲಿದೆ. ಜನರೊಂದಿಗೆ ಯಾವುದೇ ಸಮಾಲೋಚನೆ ನಡೆಸದೆ ಈ ಯೋಜನೆ ಜಾರಿಗೊಳಿಸಿರುವುದು ಆರ್ಥಿಕ ದುರುದ್ದೇಶದಿಂದ ಕೂಡಿದೆ," ಎಂದು ಆಪಾದಿಸಿದರು.

<u>ಜಾಥಾದ ವಿವರ:</u> ಮಾರ್ಚ್ 11ರ ಬುಧವಾರ ಬೆಳಿಗ್ಗೆ 10:30ಕ್ಕೆ ಮಾಲೂರು ನಗರದ ಅಂಬೇಡ್ಕರ್ ಪಾರ್ಕ್‌ನಿಂದ ಜಾಥಾ ಆರಂಭವಾಗಲಿದೆ. ಕೆಂಪೇಗೌಡ ವೃತ್ತದ ಮೂಲಕ ಸಾಗಿ ನಗರಸಭೆಯವರೆಗೆ ಪ್ರತಿಭಟನಾ ಮೆರವಣಿಗೆ ನಡೆಯಲಿದ್ದು, ತಾಲ್ಲೂಕಿನ ಜನತೆ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳುವಂತೆ ಮನವಿ ಮಾಡಿದರು.

ಪತ್ರಿಕಾಗೋಷ್ಠಿಯಲ್ಲಿ ಜನಜಾಗೃತಿ ಜಾಥಾ ಆಯೋಜಕರಾದ ಲಕ್ಷ್ಮೀಕಾಂತ್ ಕುಟ್ಟಿ, ಆನಂದ್, ಪ್ರದೀಪ್, ಗಣೇಶ್, ರಾಮಪ್ರಸಾದ್, ಲಕ್ಷ್ಮೀನಾರಾಯಣ್, ರವಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಗಡಿ ಗ್ರಾಮಗಳ ಅಭಿವೃದ್ಧಿಗೆ ಬದ್ಧ: ಶಾಸಕ

ಬಂಗಾರಪೇಟೆ

"ಗುಲ್ಲಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗ್ರಾಮಸ್ಥರು ಎಂದಿಗೂ ನನ್ನ ಕೈಬಿಟ್ಟಿಲ್ಲ. ಅವರ ನಂಬಿಕೆಗೆ ದ್ರೋಹ ಬಗೆಯದೆ, ಗಡಿ ಗ್ರಾಮವಾದ ದಿನ್ನೂರಿನಿಂದ ತಾಲ್ಲೂಕು ಕೇಂದ್ರದವರೆಗೂ ಸುಸಜ್ಜಿತ ರಸ್ತೆ ನಿರ್ಮಿಸುವ ಮೂಲಕ ನಾನು ಅಭಿವೃದ್ಧಿ ಕಾರ್ಯಗಳನ್ನು ಮಾಡಿದ್ದೇನೆ," ಎಂದು ಶಾಸಕ ಎಸ್.ಎನ್. ನಾರಾಯಣಸ್ವಾಮಿ ತಿಳಿಸಿದರು.

ತಾಲ್ಲೂಕಿನ ಗುಲ್ಲಹಳ್ಳಿ ಗ್ರಾಮದ ಶ್ರೀ ಶಂಭೇಶ್ವರ ಸ್ವಾಮಿಯ 6ನೇ ವರ್ಷದ ಜಾತ್ರಾ ಮಹೋತ್ಸವದಲ್ಲಿ ಭಾಗವಹಿಸಿ, ದೇವರ ದರ್ಶನ ಪಡೆದ ಬಳಿಕ ಅವರು ಸುದ್ದಿಗಾರರೊಂದಿಗೆ ಮಾತನಾಡಿದರು.

<u>ಗಡಿ ಭಾಗಕ್ಕೆ ರಸ್ತೆ ಭಾಗ್ಯ:</u> "ಗುಲ್ಲಹಳ್ಳಿಯಿಂದ ತಮಿಳುನಾಡು ಗಡಿಗೆ ಕಲ್ಪಿಸುವ ರಸ್ತೆಗೆ ಈಗಾಗಲೇ ಹಣ ಮಂಜೂರಾಗಿದೆ. ಮೂತನೂರು ರಸ್ತೆ ಕಾಮಗಾರಿಯು ಪ್ರಗತಿಯಲ್ಲಿದ್ದು, ಇನ್ನೇನು ಕೆಲವೇ ದಿನಗಳಲ್ಲಿ ಪೂರ್ಣಗೊಳ್ಳಲಿದೆ. ಅಲ್ಲದೆ, ಮೂತನೂರು ಭೈರವೇಶ್ವರ ದೇವಸ್ಥಾನದ ಸಮುದಾಯ ಭವನ ನಿರ್ಮಾಣಕ್ಕೂ ಅನುದಾನ ಒದಗಿಸಲಾಗಿದೆ," ಎಂದು ಶಾಸಕರು ವಿವರಿಸಿದರು.

<u>ಮೂಲಸೌಕರ್ಯಕ್ಕೆ ಒತ್ತು:</u> ಪಂಚಾಯಿತಿ ವ್ಯಾಪ್ತಿಯ ಎಲ್ಲಾ ಗ್ರಾಮಗಳಲ್ಲಿ ಈಗಾಗಲೇ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ನೀಡಲಾಗಿದೆ. ಬಾಕಿ ಇರುವ ಹಳ್ಳಿಗಳಿಗೂ ಈ ಬಾರಿ ಘಟಕಗಳನ್ನು ಸ್ಥಾಪಿಸಲಾಗುವುದು. ಎಂಟು ಹೈಮಾಸ್ಕ್ ಬೀದಿ ದೀಪಗಳು, ಸಿಸಿ ರಸ್ತೆ ಮತ್ತು ಚರಂಡಿ ಸೇರಿದಂತೆ ಅನೇಕ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ ಎಂದು ಅವರು ಮಾಹಿತಿ ನೀಡಿದರು.

<u>ಧಾರ್ಮಿಕ ಸಂಭ್ರಮ:</u> ಜಾತ್ರಾ ಮಹೋತ್ಸವದ ಅಂಗವಾಗಿ ಬೆಳಿಗ್ಗೆ ಶ್ರೀ ಶಂಭೇಶ್ವರಸ್ವಾಮಿ ದೇವರಿಗೆ ವಿಶೇಷ ಅಭಿಷೇಕ, ತೀರ್ಥ ಪ್ರಸಾದ ವಿನಿಯೋಗ ನಡೆಯಿತು. ಸಂಜೆ ಗ್ರಾಮಸ್ಥರಿಂದ 'ಕುರುಕ್ಷೇತ್ರ' ಎಂಬ ತೆಲುಗು ಪೌರಾಣಿಕ ನಾಟಕ ಪ್ರದರ್ಶನ ಆಯೋಜಿಸಲಾಗಿತ್ತು.

ಈ ಸಂದರ್ಭದಲ್ಲಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಕೆ.ವಿ. ನಾಗರಾಜ್, ಗ್ರಾ.ಪಂ. ಮಾಜಿ ಅಧ್ಯಕ್ಷ ರಾಮಚಂದ್ರಪ್ಪ, ವೆಂಕಟೇಶ್, ಕೃಷ್ಣಪ್ಪ, ಮುನಿತಿಮ್ಮಪ್ಪ, ಪಿಎಲ್ಡಿ ಬ್ಯಾಂಕ್ ಮಾಜಿ ಅಧ್ಯಕ್ಷ ಎಚ್. ಕೆ. ನಾರಾಯಣಸ್ವಾಮಿ ಹಾಗೂ ಗ್ರಾಮದ ಮುಖಂಡರು ಉಪಸ್ಥಿತರಿದ್ದರು.

## ಡಿಜಿಟಲ್ ಪಾವತಿಯಲ್ಲಿ ಸ್ವಲ್ಪ ಗಮನವಿರಲಿ: ಮೋಹನ್

ರಾಮನಗರ

ಇತ್ತೀಚಿನ ದಿನಗಳಲ್ಲಿ ಜನರಿಗೆ ಅನುಕೂಲವಾಗುವಂತೆ ಡಿಜಿಟಲ್ ಪೇಮೆಂಟ್‌ಗಳನ್ನು ಬಳಸುವುದರಿಂದ ಜನಗಳಿಗೆ ಸಮಯದ ಉಳಿತಾಯವಾಗುತ್ತದೆ. ಡಿಜಿಟಲ್ ಪಾವತಿಗಳನ್ನು ಮಾಡುವಾಗ ಸರಿಯಾದ ಕ್ರಮವನ್ನು ಅನುಸರಿಸುವಂತೆ ಜಿಲ್ಲಾ ಮಾರ್ಗದರ್ಶಿ ಬ್ಯಾಂಕ್‌ನ ಮುಖ್ಯ ವ್ಯವಸ್ಥಾಪಕರಾದ ಮೋಹನ್ ಕುಮಾರ್ ವೈ.ಎನ್. ತಿಳಿಸಿದರು.



ಮಂಗಳವಾರ ನಗರದ ಸಾಯಿಪಾರ್ಟಿ ಹಾಲ್‌ನಲ್ಲಿ ಭಾರತೀಯ ರಿಸರ್ವ್ ಬ್ಯಾಂಕ್, ಜಿಲ್ಲಾ ಪಂಚಾಯಿತಿ ಹಾಗೂ ಜಿಲ್ಲಾ ಮಾರ್ಗದರ್ಶಿ ಬ್ಯಾಂಕ್ ವತಿಯಿಂದ ಮಹಿಳೆಯರಿಗೆ ಡಿಜಿಟಲ್ ಪಾವತಿಗಳ ಕುರಿತು ಆಯೋಜಿಸಲಾಗಿದ್ದ ಜಾಗೃತಿ ಸಪ್ತಾಹ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಅಪರಿಚಿತ ಕರೆಗಳಿಗೆ ಉತ್ತರಿಸಬೇಡಿ, ನಿಮ್ಮ ಓಟಿಪಿಯನ್ನು ಯಾರಿಗೂ ಹೇಳಬಾರದು ಎಂದು ಜನಗಳಲ್ಲಿ ಅರಿವು ಮೂಡಿಸಿದರು.

ಭಾರತೀಯ ರಿಸರ್ವ್ ಬ್ಯಾಂಕ್‌ನ ಸಹಾಯಕ ಮುಖ್ಯ ಪ್ರಬಂಧಕರಾದ ಸುಧೀರ್ ಕೇಸರವಾಣಿ ಮಾತನಾಡಿ, ಭಾರತವು ಡಿಜಿಟಲ್ ಪಾವತಿಗಳಲ್ಲಿ ಮುಂಚೂಣಿ ರಾಷ್ಟ್ರವಾಗಿದ್ದು ಅದರಲ್ಲಿ ಕರ್ನಾಟಕದ ಪಾತ್ರವು ಮಹತ್ವದಾಗಿರುತ್ತದೆ ಹಾಗೂ ಡಿಜಿಟಲ್ ಪಾವತಿಗಳನ್ನು ಬಳಕೆ ಮಾಡುವಾಗ ಆಯಾ ಬ್ಯಾಂಕಗಳ ಆಪ್ ಗಳನ್ನು ಉಪಯೋಗಿಸುವುದು ಬಹಳ ಉತ್ತಮ ಎಂದು ಮಹಿಳೆಯರಿಗೆ ತಿಳಿಸಿದರು. ಭಾರತೀಯ ರಿಸರ್ವ್ ಬ್ಯಾಂಕ್ ಈ ವರ್ಷ ಡಿಜಿಟಲ್ ಪಾವತಿಗಳ ಜಾಗೃತಿ ಸಪ್ತಾಹ ಕಾರ್ಯಕ್ರಮದ ಅಂಗವಾಗಿ "ಸ್ವಲ್ಪ ಗಮನವಿಟ್ಟು" ಎಂಬ ಧ್ಯೇಯ ವಾಕ್ಯದಡಿ ಇಡೀ ಭಾರತದಾದ್ಯಂತ ಈ ಸಪ್ತಾಹ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು. ಜಿ.ಪಂ. ಲೆಕ್ಕಾಧಿಕಾರಿ ಡಾ. ನಂದೀಶ್ ಎಚ್.ಡಿ. ಅವರು ಮಾತನಾಡಿ, ಸ್ವ- ಸಹಾಯ ಸಂಘದ ಮಹಿಳೆಯರು ಹೆಚ್ಚಿನವರು ಡಿಜಿಟಲ್ ಯುಗದಲ್ಲಿ ಡಿಜಿಟಲ್ ಪಾವತಿಗಳ ಬಗ್ಗೆ ತಿಳಿದುಕೊಳ್ಳುವುದು ಬಹಳ ಮುಖ್ಯ ಹಾಗೂ ಇದರಿಂದ ಜನರಿಗೆ ತುಂಬಾ ಸಹಾಯವಾಗುತ್ತದೆ ಅದರ ಅನುಕೂಲ ಮತ್ತು ಅನಾನುಕೂಲಗಳ ಬಗ್ಗೆ ತಿಳಿದುಕೊಳ್ಳುವುದು ಬಹಳ ಮುಖ್ಯ ಅದಕ್ಕೆ ಇವತ್ತಿನ ಕಾರ್ಯಕ್ರಮ ನಿಮ್ಮೆಲ್ಲರಿಗೂ ಕೂಡ ತುಂಬಾ ಉಪಯುಕ್ತವಾಗಿದೆ ಎಂದು ತಿಳಿಸಿದರು.

ಈ ಕಾರ್ಯಕ್ರಮದ ಅಂಗವಾಗಿ ಬಿತ್ತಿ ಪತ್ರಗಳನ್ನು ಅನಾವರಣ ಮಾಡಲಾಯಿತು. ಈ ಸಂದರ್ಭದಲ್ಲಿ ಲೀಡ್ ಬ್ಯಾಂಕ್‌ನ ಎಫ್.ಎಲ್.ಸಿಗಳಾದ ಸುಮಲತಾ. ಕೆ, ರೂಪಲಕ್ಷ್ಮೀ, ಮಹಾಂತೇಶ್ ಭಾಗವಹಿಸಿದ್ದರು.

## ಗೂಡ್ಸ್ ರೈಲಿಗೆ ವೃದ್ಧ ಮಹಿಳೆ ಸಿಲುಕಿ ಸಾವು

ಬಂಗಾರಪೇಟೆ

ತಾಲೂಕಿನ ಕಾಮಸಮುದ್ರ ರೈಲ್ವೆ ನಿಲ್ದಾಣದ ಸಮೀಪ ಸೋಮವಾರ ರಾತ್ರಿ ಗೂಡ್ಸ್ ರೈಲು ಡಿಕ್ಕಿಯಾಗಿ ಸುಮಾರು 75 ವರ್ಷದ ಅಪರಿಚಿತ ವೃದ್ಧೆಯೊಬ್ಬರು ಸ್ಥಳದಲ್ಲೇ ಮೃತಪಟ್ಟಿದ್ದಾರೆ.

<u>ಘಟನೆಯ ವಿವರ:</u> ಸೋಮವಾರ ರಾತ್ರಿ 8 ಗಂಟೆಯ ಸುಮಾರಿಗೆ ಬಂಗಾರಪೇಟೆಯಿಂದ ಚೆನ್ನೈ ಮಾರ್ಗವಾಗಿ ವೇಗವಾಗಿ ಚಲಿಸುತ್ತಿದ್ದ ಗೂಡ್ಸ್ ರೈಲು ಹಳಿ ದಾಟುತ್ತಿದ್ದ ವೃದ್ಧೆಗೆ ಡಿಕ್ಕಿ ಹೊಡೆದಿದೆ ಎನ್ನಲಾಗಿದೆ. ಡಿಕ್ಕಿಯ ರಭಸಕ್ಕೆ ವೃದ್ಧೆಯ ತಲೆಗೆ ಗಂಭೀರ ಪೆಟ್ಟಾಗಿದ್ದು, ತೀವ್ರ ರಕ್ತಸ್ರಾವದಿಂದ ಅವರು ಸ್ಥಳದಲ್ಲೇ ಕೊನೆಯುಸಿರೆಳೆದಿದ್ದಾರೆ.

<u>ಪೊಲೀಸ್ ಭೇಟಿ ಮತ್ತು ತನಿಖೆ:</u> ಮೃತ ವೃದ್ಧೆಯ ಗುರುತು ಇನ್ನೂ ಪತ್ತೆಯಾಗಿಲ್ಲ. ಘಟನಾ ಸ್ಥಳಕ್ಕೆ ಬಂಗಾರಪೇಟೆ ರೈಲ್ವೆ ಪೊಲೀಸ್ ಠಾಣೆಯ ಸಬ್ ಇನ್ಸ್‌ಪೆಕ್ಟರ್ ಅಂಜನಾ ಮೂರ್ತಿ ಹಾಗೂ ಸಿಬ್ಬಂದಿ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಶವವನ್ನು ಮರಣೋತ್ತರ ಪರೀಕ್ಷೆಗೆ ರವಾನಿಸಲಾಗಿದ್ದು, ವಾರಸುದಾರರ ಪತ್ತೆಗಾಗಿ ಪೊಲೀಸರು ಕ್ರಮ ಕೈಗೊಂಡಿದ್ದಾರೆ. ರೈಲ್ವೆ ಪೊಲೀಸರು ಪ್ರಕರಣ ದಾಖಲಿಸಿಕೊಂಡು ಮುಂದಿನ ತನಿಖೆ ನಡೆಸುತ್ತಿದ್ದಾರೆ.

## ರೈತರ ಹಾಲಿಗೆ ಕನ್ನ ಹಾಕುತ್ತಿದ್ದಾರೆಯೇ ಡೈರಿ ಸಿಬ್ಬಂದಿ?

ಬಂಗಾರಪೇಟೆ

ತಾಲ್ಲೂಕಿನ ಕಾರಮನಹಳ್ಳಿ ಹಾಲು ಉತ್ಪಾದಕರ ಸಹಕಾರ ಸಂಘದಲ್ಲಿ ಸಿಬ್ಬಂದಿ ಹಾಲನ್ನು ಕದಿಯುತ್ತಿದ್ದಾರೆ ಹಾಗೂ ಲೆಕ್ಕಪತ್ರದಲ್ಲಿ ಅಕ್ರಮ ಎಸಗುತ್ತಿದ್ದಾರೆ ಎಂಬ ಗಂಭೀರ ಆರೋಪ ಕೇಳಿಬಂದಿದೆ. ಈ ಹಿನ್ನೆಲೆಯಲ್ಲಿ ಮಂಗಳವಾರ ಕೋಮುಲ್ ಒಕ್ಕೂಟದ ಅಧಿಕಾರಿಗಳ ತಂಡ ಸಂಘಕ್ಕೆ ಭೇಟಿ ನೀಡಿ ತುರ್ತು ಪರಿಶೀಲನೆ ನಡೆಸಿತು.

<u>ಕೈ- ಕೈ ಮಿಲಾಯಿಸಿದ ಗುಂಪುಗಳು:</u> ಅಧಿಕಾರಿಗಳು ಪರಿಶೀಲನೆ ನಡೆಸುತ್ತಿದ್ದ ವೇಳೆ ಗ್ರಾಮದ ಎರಡು ಗುಂಪುಗಳ ನಡುವೆ ತೀವ್ರ ಮಾತಿನ ಚಕಮಕಿ ನಡೆಯಿತು. ಪರಿಸ್ಥಿತಿ ವಿಕೋಪಕ್ಕೆ ಹೋಗಿ ಕೈಕೈ ಮಿಲಾಯಿಸುವ ಹಂತಕ್ಕೆ ತಲುಪಿದಾಗ, ಗ್ರಾಮದ ಹಿರಿಯರು, ಅಧಿಕಾರಿಗಳು ಹಾಗೂ ಸಂಘದ ಅಧ್ಯಕ್ಷರು ಮಧ್ಯಪ್ರವೇಶಿಸಿ ಪರಿಸ್ಥಿತಿಯನ್ನು ತಿಳಿಗೊಳಿಸಿದರು.



<u>ಅಕ್ರಮದ ಹಾದಿ:</u> ಸೋಮವಾರ ರಾತ್ರಿ ಸಂಘದ ಸಿಬ್ಬಂದಿ ಸುಮಾರು 8 ಲೀಟರ್ ಹಾಲನ್ನು ಕದ್ದು ಮನೆಗೆ ಕೊಂಡೊಯ್ಯುತ್ತಿದ್ದರು. ಮರುದಿನ ಬೆಳಿಗ್ಗೆ ಅದೇ ಹಾಲನ್ನು ಮತ್ತೆ ಡೈರಿಗೆ ತಂದು ತಮ್ಮ ಹೆಸರಿಗೆ ಹಾಕಿಕೊಳ್ಳುವ ಮೂಲಕ ಉತ್ಪಾದಕರಿಗೆ ನಷ್ಟ ಉಂಟುಮಾಡುತ್ತಿದ್ದಾರೆ ಎಂದು ಗ್ರಾಮಸ್ಥರು ಆರೋಪಿಸಿದ್ದಾರೆ. ರೈತರಿಂದ 35 ಲೀಟರ್ ಹಾಲು ಖರೀದಿಸಿದರೆ, ದಾಖಲೆಯಲ್ಲಿ ಕೇವಲ 30 ಲೀಟರ್ ತೋರಿಸಿ ಕಾರ್ಯದರ್ಶಿ ವೆಂಕಟೇಶ್ ಹಾಗೂ ಸಿಬ್ಬಂದಿ ಪಂಗನಾಮ ಹಾಕುತ್ತಿದ್ದಾರೆ ಎಂದು ದೂರಲಾಗಿದೆ.

<u>ವಿಡಿಯೋ ಸಾಕ್ಷಿ ಸಮೇತ ದೂರು:</u> ಸಿಬ್ಬಂದಿ ಹಾಲು ಕದಿಯುವ ದೃಶ್ಯವನ್ನು ಗ್ರಾಮಸ್ಥರು ಮೊಬೈಲ್‌ನಲ್ಲಿ ಚಿತ್ರೀಕರಿಸಿ ಸಾಮಾಜಿಕ ಜಾಲತಾಣಗಳಲ್ಲಿ ಹಂಚಿಕೊಂಡಿದ್ದರು. ಈ ವಿಡಿಯೋ ಸಾಕ್ಷ್ಯಾಧಾರಗಳೊಂದಿಗೆ ಅಧಿಕಾರಿಗಳಿಗೆ ದೂರು ನೀಡಿದ್ದರಿಂದ ಕೋಮುಲ್ ತಂಡ ಸ್ಥಳಕ್ಕೆ ಧಾವಿಸಿತು. ಅಲ್ಲದೆ, ಹೊಸದಾಗಿ ಶೇರು ಪಾವತಿಸಿಕೊಳ್ಳಲು ಕಾರ್ಯದರ್ಶಿ ನಿರಾಕರಿಸುತ್ತಿದ್ದಾರೆ ಎಂಬ ದೂರುಗಳೂ ಕೇಳಿಬಂದಿವೆ.

<u>ಅಧಿಕಾರಿಗಳ ಭರವಸೆ:</u> ಒಕ್ಕೂಟದ ಉಪ ವ್ಯವಸ್ಥಾಪಕ ಡಾ. ಲೋಕೇಶ್, ಬಂಗಾರಪೇಟೆ ಉಪ ವ್ಯವಸ್ಥಾಪಕ ಡಾ. ಗಿರೀಶ್ ಗೌಡ ಹಾಗೂ ವಿಸ್ತೀರ್ಣ ಅಧಿಕಾರಿಗಳಾದ ಭಾನುಪ್ರಕಾಶ್ ಮತ್ತು ಕಿರಣ್ ಗ್ರಾಮಸ್ಥರ ಅಹವಾಲು ಆಲಿಸಿದರು. "ಮುಂದಿನ 15 ದಿನಗಳಲ್ಲಿ ಎಲ್ಲಾ ದಾಖಲೆಗಳನ್ನು ಪರಿಶೀಲಿಸಿ ಸಮಸ್ಯೆ ಬಗೆಹರಿಸುತ್ತೇವೆ. ಅಕ್ರಮ ಸಾಬೀತಾದರೆ ತಪ್ಪಿತಸ್ಥ ಸಿಬ್ಬಂದಿ ವಿರುದ್ಧ ಕಠಿಣ ಕಾನೂನು ಕ್ರಮ ಜರುಗಿಸಲಾಗುವುದು," ಎಂದು ಭರವಸೆ ನೀಡಿದರು.

ಅಕ್ರಮಗಳಿಗೆ ತಕ್ಷಣವೇ ಕಡಿವಾಣ ಹಾಕದಿದ್ದರೆ ಮುಂದಿನ ದಿನಗಳಲ್ಲಿ ಬೃಹತ್ ಹೋರಾಟ ನಡೆಸುವುದಾಗಿ ಗ್ರಾಮಸ್ಥರು ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದ್ದಾರೆ.

Printed by gandasi sadananda swamy, published by gandasi sadanandaswamy, owned by gandasi sadananda swamy. Printed at LAVANYA MUDRANA No. 79, TR mill, compound, 5th main 9th corss, Chamarajpet Bangalore-560018, published at No.531, prakruthi nilaya, kalikanagar, Andrahalli, Vishwaneedam Post, Bangalore-560091. Editor: Gandasi sadanandaswamy